ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 286, ಪುಟಗಳು: 8, ಬುಧವಾರ, 24 ಜುಲೈ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3



ನೇಣು ಸಾರಥ್ಯದಲ್ಲಿ...




### ಸುಭಾಷಿತ

ಜಗಳ ಮಾಡಲು ಬಂದವನ ಎದುರು ಮೌನವಾಗು. ಅದು ಜಗಳದ ಬಾಗಿಲನ್ನು ಮುಚ್ಚುತ್ತದೆ.

। ಎ.ಆರ್.ಕೃಷ್ಣಶಾಸ್ತ್ರಿ

### ಪಂಚಾಂಗ

(ಬುಧವಾರ 24, ಜುಲೈ-2024)

- ತಿಥಿ: ತೃತಿಯಉಪರಿಚತುರ್ಥಿ
- ನಕ್ಷತ್ರ: ಶತಭಿಷ ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಗ್ರೀಷ್ಮಋತು,
- ಆಷಾಡ ಮಾಸ, ಕೃಷ್ಣ ಪಕ್ಷ,
- ರಾಹುಕಾಲ: 12:29 ರಿಂದ 2:05
- ಗುಳಿಕಕಾಲ: 10:54 ರಿಂದ 12:29
- ಯಮಗಂಡಕಾಲ: 7:44 ರಿಂದ 9:19

## ಸಂಕ್ಷಿಪ್ತ ಸುದ್ದಿ

## ಲಾಲು ಪ್ರಸಾದ್ ಯಾದವ್ಆರೋಗ್ಯ ಏರುಪೇರು

**ನವದೆಹಲಿ:** ಆರ್‌ಜೆಡಿ ಮುಖ್ಯಸ್ಥ, ಬಿಹಾರ ಮಾಜಿ ಸಿಎಂ ಲಾಲು ಪ್ರಸಾದ್‌ಯಾದವ್ ಆರೋಗ್ಯದಲ್ಲಿಏರುಪೇರಾಗಿದ್ದು, ದೆಹಲಿಯ ಏಮ್ಸ್‌ಆಸ್ಪತ್ರೆಗೆದಾಖಲಿಸಲಾಗಿದೆ. ಸದ್ಯ ಮಾಜಿ ಸಿಎಂ ವೈದ್ಯರ ನಿಗಾದಲ್ಲಿದ್ದಾರೆ.ಅವರಆರೋಗ್ಯ ಸ್ಥಿತಿ ಸ್ಥಿರವಾಗಿದೆ.ಕುಟುಂಬದ ಸದಸ್ಯರುಆಸ್ಪತ್ರೆಗೆ ಹಾಜರಾಗಿದ್ದು, ಅವರಆರೈಕೆಯಲ್ಲಿದ್ದಾರೆಎಂದು ಆಪ್ತ ಮೂಲಗಳು ತಿಳಿಸಿವೆ. ಪ್ರಿನ್ಸ್‌ಯಾದವ್ ಎಂಬವರುಎಕ್ಸ್‌ಖಾತೆಯಲ್ಲಿ ಪೋಸ್ಟ್ ಹಾಕಿದ್ದು, ಲಾಲು ಪ್ರಸಾದ್‌ಯಾದವ್‌ಅವರು ಅನಾರೋಗ್ಯದ ಕಾರಣ ಏಮ್ಸ್‌ಗೆ ದಾಖಲಾಗಿದ್ದಾರೆ. ಅವರು ಬೇಗ ಗುಣಮುಖರಾಗಲಿ ಎಂದು ಬಿಹಾರದ ಎಲ್ಲಾ ಜನರು ದೇವರನ್ನು ಪ್ರಾರ್ಥಿಸುತ್ತಿದ್ದಾರೆಎಂದು ಬರೆದುಕೊಂಡಿದ್ದಾರೆ.ಜೊತೆಗೆ ಮಾಜಿ ಸಿಎಂ ಆಸ್ಪತ್ರೆಯ ಬೆಡ್‌ನಲ್ಲಿರುವ ಫೋಟೋಗಳನ್ನು ಕೂಡ ಹಂಚಿಕೊಂಡಿದ್ದಾರೆ.



## ಬೆಳ್ಳಂಬೆಳಗ್ಗೆ ಶೂಟೌಟ್



**ಚಿಕ್ಕಬಳ್ಳಾಪುರ:** ಪಿಸ್ತೂಲ್‌ನಿಂದ ಗುಂಡು ಹಾರಿಸಿ ಅಣ್ಣನ ಮಗನನ್ನು ಚಿಕ್ಕಪ್ಪಕೊಲೆಗೈದಿರುವ ಘಟನೆ ಚಿಕ್ಕಬಳ್ಳಾಪುರಜಿಲ್ಲೆ ಗುಡಿಬಂಡೆ ತಾಲೂಕಿನ ಹಂಪಸಂದ್ರ ಗ್ರಾಮದಲ್ಲಿ ನಡೆದಿದೆ. ನಜೀರ್ ಅಹ್ಮದ್ ಕೊಲೆಯಾದ ದುರ್ದೈವಿ. ಬಶೀರ್ ಅಹ್ಮದ್ (66) ಗುಂಡು ಹಾರಿಸಿ ಕೊಲೆ ಮಾಡಿದಆರೋಪಿ.ಜೊತೆಗೆಅಣ್ಣ ಮಾಬೂಸಾಬಿ ಮೇಲೂ ಮಾರಕಾಸ್ತ್ರದಿಂದ ದಾಳಿ ಮಾಡಿದ್ದಾನೆ. ಗಂಭೀರವಾಗಿ ಗಾಯಗೊಂಡಿರುವ ಮಾಬೂಸಾಬಿಯನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಆರೋಪಿ ಬಶೀರ್ ಅಹ್ಮದ್ ಸೌದಿಯಲ್ಲಿ ಕೆಲಸ ಮಾಡಿಕೊಂಡಿದ್ದ. ಇತ್ತೀಚೆಗೆಊರಿಗೆ ಬಂದಿದ್ದಎನ್ನಲಾಗಿದೆ. ಕೊಲೆ ಮಾಡಿದಆರೋಪದ ಮೇಲೆ ಪೊಲೀಸರು ಬಶೀರ್ ಅಹ್ಮದ್‌ನನ್ನುವಶಕ್ಕೆಪಡೆದಿದ್ದಾರೆ. ಸದ್ಯ ಸ್ಥಳಕ್ಕೆ ಗುಡಿಬಂಡೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಪಾರಿವಾಳ ರಕ್ಷಿಸಲು ಹೋಗಿ ವಿದ್ಯುತ್ ಸ್ಪರ್ಶಿಸಿ ಬಾಲಕ ಸಾವು



**ಚಿತ್ರದುರ್ಗ:** ವಿದ್ಯುತ್ ಕಂಬದಲ್ಲಿ ಸಿಲುಕಿದ್ದ ಪಾರಿವಾಳವನ್ನು ರಕ್ಷಿಸಲು ಕಂಬ ಏರಿದ್ದ ಬಾಲಕನಿಗೆ ವಿದ್ಯುತ್ ಸ್ಪರ್ಶಿಸಿ ಸಾವನ್ನಪ್ಪಿದ ಘಟನೆ ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲೂಕಿನ ಹನುಮಾಪುರ ಗ್ರಾಮದಲ್ಲಿ ನಡೆದಿದೆ.

ರಾಮಚಂದ್ರ (12) ಮೃತ ಬಾಲಕ. ಈತ ಆರನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದ. ಗ್ರಾಮದ ವಿದ್ಯುತ್ ಕಂಬದಲ್ಲಿನ ತಂತಿಗೆ ಪಾರಿವಾಳವೊಂದು ಸಿಲುಕಿ ಜೀವನ್ಮರಣ ಮಧ್ಯೆ ಹೋರಾಡುತ್ತಿರುವುದನ್ನು ಗಮನಿಸಿದ ಈತ ಪಾರಿವಾಳವನ್ನು ರಕ್ಷಿಸಲೆಂದು ವಿದ್ಯುತ್ ಕಂಬ ಏರಿದ್ದ. ಈ ವೇಳೆ ವಿದ್ಯುತ್ ಸ್ಪರ್ಶಿಸಿ ಬಾಲಕ ಸ್ಥಳದಲ್ಲೇ ಮೃತಪಟ್ಟಿದ್ದಾನೆ.

ವಿದ್ಯುತ್ ಶಾಕ್‌ನಿಂದಾಗಿ ಬಾಲಕನ ಶವ ವಿದ್ಯುತ್ ಕಂಬದಲ್ಲಿನ ತಂತಿಗೆ ಸಿಲುಕಿ ನೇತಾಡುತ್ತಿದ್ದು, ಮಾನವೀಯತೆಯಿಂದ ಪಾರಿವಾಳದ ಜೀವ ಉಳಿಸಲು ಮುಂದಾಗಿದ್ದ ಬಾಲಕ ತನ್ನ ಜೀವವನ್ನೇ ಬಲಿ ನೀಡಿದ್ದಾನೆ. ಮಗನನ್ನು ಕಳೆದುಕೊಂಡ ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ. ಘಟನಾ ಸ್ಥಳಕ್ಕೆ ರಾಂಪುರ ಪಿಎಸ್ಐ ಮಹೇಶ್ ಹೊಸಪೇಟೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

### ಜಮ್ಮು-ಕಾಶ್ಮೀರದಲ್ಲಿ ಉಗ್ರರೊಂದಿಗೆ ಗುಂಡಿನ ಚಕಮಕಿ

## ಓರ್ವ ಯೋಧ ಹುತಾತ್ಮ



**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಕುಪ್ವಾರದಲ್ಲಿ ಭಯೋತ್ಪಾದಕರೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಭಾರತೀಯ ಸೇನೆಯ ಓರ್ವ ಯೋಧ ಹುತಾತ್ಮರಾಗಿದ್ದು, ಮತ್ತೊಬ್ಬರು ಗಾಯಗೊಂಡಿದ್ದಾರೆ. ಗಡಿ ನಿಯಂತ್ರಣ ರೇಖೆಯ ಬಳಿ ಪೂಂಚ್ ಜಿಲ್ಲೆಯಲ್ಲಿ ಭಯೋತ್ಪಾದಕರ ಒಳನುಸುಳುವಿಕೆ ವಿರುದ್ಧ ಕಾರ್ಯಾಚರಣೆ ವೇಳೆ ಒಬ್ಬ ಯೋಧ ಹುತಾತ್ಮರಾಗಿದ್ದಾರೆ. ಕೆಲವು ದಿನಗಳ ಹಿಂದೆ ಕುಪ್ವಾರದ ಕೋವುಟ್ ಪ್ರದೇಶದಲ್ಲಿ ಭಯೋತ್ಪಾದಕರ ಉಪಸ್ಥಿತಿಯ ಬಗ್ಗೆ ಖಚಿತ ಮಾಹಿತಿ ನೀಡಲಾಗಿತ್ತು. ಸೇನೆಯು ಜಮ್ಮು-ಕಾಶ್ಮೀರದ ಪೊಲೀಸರೊಂದಿಗೆ ಜಂಟಿ ಶೋಧ ಕಾರ್ಯಾಚರಣೆ ಆರಂಭಿಸಿತ್ತು. ಭಾರತೀಯ ಸೇನೆಯ ಕಾರ್ಯಾಚರಣೆ ವೇಳೆ ಉಗ್ರರು ಸಹ ಗುಂಡಿನ ಚಕಮಕಿ ನಡೆಸಿದರು. ಈ ವೇಳೆ ಸೈನಿಕ ಹುತಾತ್ಮರಾಗಿದ್ದಾರೆ.

### ಮುಡಾ ಹಗರಣ: ಸಿಎಂ ವಿರುದ್ಧ ಹೋರಾಟಕ್ಕೆ ಮುಂದಾದ ಬಿಜೆಪಿ

# ಪಾದಯಾತ್ರೆಗೆ ಪ್ಲ್ಯಾನ್

**ಬೆಂಗಳೂರು:** ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಮುಡಾ) ನಿವೇಶ ಹಂಚಿಕೆಯಲ್ಲಿ ಭಾರೀ ಹಗರಣ ನಡೆದಿದೆ ಎಂಬ ಆರೋಪ ಕೇಳಿಬಂದಿದೆ. ಇದುರಾಜ್ಯರಾಜಕಾರಣದಲ್ಲಿ ಸಂಚಲನ ಮೂಡಿಸಿದೆ. ಅದರಲ್ಲೂ ಈ ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೆಸರು ಕೇಳಿಬಂದಿದ್ದರಿಂದ ಅವರರಾಜೀನಾಮೆಗೆ ವಿಪಕ್ಷಗಳು ಆಗ್ರಹಿಸುತ್ತಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರರಾಜೀನಾಮೆಗೆ ಆಗ್ರಹಿಸಿ ಬೆಂಗಳೂರಿನಿಂದ ಮೈಸೂರುವರೆಗೆ ವಿಪಕ್ಷ ಬಿಜೆಪಿ ಪಾದಯಾತ್ರೆ ನಡೆಸಲುಚಿಂತನೆ ನಡೆಸಿದೆ. ಮುಡಾದಲ್ಲಿ ನಡೆದಿದೆ ಎನ್ನಲಾಗಿರುವ ಹಗರಣದ ಬಗ್ಗೆ ಬಿಜೆಪಿ ಅಧಿವೇಶನದಲ್ಲಿ ನಿಲುವಳಿ ಮುಂಡಲಿಸಲು ಸಿದ್ಧತೆ ನಡೆಸಿದೆ.ನಂತರ ಸನ್ನಿವೇಶ ಆಧರಿಸಿ ಮುಖ್ಯಮಂತ್ರಿಗಳ ರಾಜಿನಾಮೆ ಆಗ್ರಹಿಸಿ ಬೆಂಗಳೂರಿನಿಂದ ಮೈಸೂರಿನವರೆಗೆ ಪಾದಯಾತ್ರೆ ನಡೆಸುವ ಬಗ್ಗೆ ಬಿಜೆಪಿ ತೀರ್ಮಾನ ಕೈಗೊಳ್ಳಲಿದೆ.

ಹಗರಣದಲ್ಲಿ ಸಿಎಂ ಕುಟುಂಬದ ಹೆಸರು



ಪುಟ 2





### ನಾವು ಯಾವುದೇ ತಪ್ಪು ಮಾಡಿಲ್ಲ: ಸಿಎಂ ಸಿದ್ದರಾಮಯ್ಯ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಧರ್ಮ ಪತ್ನಿ ಪಾರ್ವತಿ ಅವರಿಗೆ ಅರ್ಹತೆಗೂ ಮೀರಿ ಎರಡು ಕೋಟಿರೂಪಾಯಿ. ಬೆಲೆಬಾಳುವ 14 ನಿವೇಶನಗಳನ್ನು ಪ್ರತಿಷ್ಠಿತ ವಿಜಯನಗರ ಬಡಾವಣೆಯಲ್ಲಿ ಹಂಚಿಕೆ ಮಾಡಲಾಗಿದೆ. ಅರ್ಹತೆ ಪ್ರಕಾರ ಪಾರ್ವತಿ ಅವರಿಗೆ ನೀಡಬೇಕಾಗಿದ್ದು ಕೇವಲಎರಡುಜಮೀನು ಮಾತ್ರ. ಆದರೆ 14 ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆಎಂದು ಬಿಜೆಪಿ ಮತ್ತುಜೆಡಿಎಸ್‌ಗಂಭೀರಆರೋಪ ಮಾಡುತ್ತಿದೆ.

ಈ ಆರೋಪಕ್ಕೆ ಸಿದ್ದರಾಮಯ್ಯ, ನಿಯಮದ ಪ್ರಕಾರವೇಎಲ್ಲರಿಗೂ ಹಂಚಿಕೆಯಾಗುವಂತೆ ಮುಡಾದಿಂದ ಸೈಟ್ ಹಂಚಿಕೆಯಾಗಿದೆ. ನಾವು ಯಾವುದೇತಪ್ಪು ಮಾಡಿಲ್ಲ, ನಾವು ಅಲ್ಲೇ ಸೈಟ್ ನೀಡಬೇಕೆಂದು ಕೇಳಿಕೊಂಡಿಲ್ಲ. ಮುಡಾದವರು ಹಂಚಿಕೆ ಮಾಡಿದ್ದಾರೆ.ಯಾವುದೇಅಕ್ರಮ ನಡೆಸಿಲ್ಲ ಎಂದು ಸಮರ್ಥಿಸಿಕೊಳ್ಳುತ್ತಿದ್ದಾರೆ.

## ಡೆಂಗ್ಯೂ ಏರಿಕೆ ಅಸಲಿ ಕಾರಣ ಪತ್ತೆ




**ಬೆಂಗಳೂರು:** ಆಗಾಗ ಮಳೆ, ಎಲ್ಲೆಂದರಲ್ಲಿ ನಿಂತ ಮಳೆ ನೀರಿನಿಂದ ಬೆಂಗಳೂರು ನಗರದಲ್ಲಿಡೆಂಗ್ಯೂ ಪ್ರಕರಣಗಳ ಸಂಖ್ಯೆಏರಿಕೆಯಾಗುತ್ತಿದೆ. ಅತ್ತ ಡೆಂಗ್ಯೂಗೆಕಡಿವಾಣ ಹಾಕಲು ಫಾಗಿಂಗ್, ಔಷಧ ಸಿಂಪಡಣೆ ಮಾಡಿದರೂ ಪ್ರಕರಣ ಹೆಚ್ಚಾಗುತ್ತಲೇಇರುವುದು ಪಾಲಿಕೆಯನ್ನುಆತಂಕಕ್ಕೆ ದೂಡಿದೆ. ಮತ್ತೊಂದೆಡೆ, ಡೆಂಗ್ಯೂವಿನಿಂದ ಸಾವನ್ನಪ್ಪಿದವರು ಎಂದು ಯಾರನ್ನು ಗುರ್ತಿಸಲಾಗುತ್ತಿದೆಯೋ ಅವರ ರಿಪೋರ್ಟ್ ಸರ್ಕಾರಿ ಆಸ್ಪತ್ರೆಗಳಲ್ಲಿ ನೆಗೆಟಿವ್ ಬರುತ್ತಿರುವುದು ಅಚ್ಚರಿ ಹುಟ್ಟಿಸಿದೆ. ಸದ್ಯ ಬೆಂಗಳೂರಿನಲ್ಲಿ ಇದುವರೆಗೆ ಡೆಂಗ್ಯೂವಿನಿಂದ ಮೂವರು ಮೃತಪಟ್ಟಿರುವುದು ಆರೋಗ್ಯ ಇಲಾಖೆಯಿಂದ ದೃಢಪಟ್ಟಿದೆ. ಆದರೆಇತ್ತೀಚೆಗೆ ಖಾಸಗಿ ಆಸ್ಪತ್ರೆಗಳಲ್ಲಿ ಯಾರೇ ಮೃತಪಟ್ಟರೂಅವರಡೆಂಗ್ಯೂ ಟೆಸ್ಟಿಂಗ್ ರಿಪೋರ್ಟ್ ಪಾಸಿಟಿವ್ ಬರುತ್ತಿದೆ.ಈ ಬಗ್ಗೆ ನಿಗಾ ಇಟ್ಟಿರುವ ಪಾಲಿಕೆಗೆ ಅಸಲಿ ಕಾರಣ ಬಯಲಾಗಿದೆ.ಡೆಂಗ್ಯೂ ಪತ್ತೆಗಾಗಿ ಖಾಸಗಿ ಆಸ್ಪತ್ರೆಗಳಲ್ಲಿ ನಡೆಸೋಎನ್‌ಎಸ್1 ಟೆಸ್ಟ್‌ನಲ್ಲಿ ಬಹುತೇಕ ಪಾಸಿಟಿವ್ ರಿಪೋರ್ಟ್‌ಬರುತ್ತಿದೆ. ಇತ್ತಅದೇ ಮಾದರಿಯನ್ನು ಸರ್ಕಾರಿಲ್ಯಾಬ್‌ನಲ್ಲಿ ಟೆಸ್ಟ್ ಮಾಡಿದಾಗ ನೆಗೆಟಿವ್‌ಬರುತ್ತಿದ್ದು, ಪಾಸಿಟಿವ್ ರಿಪೋರ್ಟ್ ಕೊಟ್ಟ ಆಸ್ಪತ್ರೆಗಳ ವಿರುದ್ಧ ಕ್ರಮಕ್ಕೆಪಾಲಿಕೆ ಸಜ್ಜಾಗಿದೆ.

ಪುಟ 2

## ರಾಮನಗರಕ್ಕೂ ನಮ್ಮ ಮೆಟ್ರೋ

### ಟೆಂಡರ್ ಕರೆದ ಬಿಎಂಆರ್‌ಸಿಎಲ್



**ಬೆಂಗಳೂರು:** ಬೆಂಗಳೂರಿನಿಂದ ತುಮಕೂರಿಗೆ ಮಾರ್ಗ ವಿಸ್ತರಣೆ ಮಾಡಲು ಈಗಾಗಲೇ ಬಿಎಂಆರ್‌ಸಿಎಲ್‌ಸಿದ್ಧತೆನಡೆಸಿದೆ.ಇದರಜೊತೆಗೆ ಇದೀಗಮತ್ತೊಂದುಸಿಹಿಸುದ್ದಿಹೊರಬಿದ್ದಿದೆ.ರಾಮನಗರಕ್ಕೆ ನಮ್ಮ ಮೆಟ್ರೋರೈಲು ಸಂಚಾರ ನಡೆಸಲಿದೆ ಎಂಬ ಮಾತು ಹಲವು ದಿನಗಳಿಂದ ಕೇಳಿ ಬರುತ್ತಿದೆ.ಈ ನಡುವೆರಾಮನಗರಜಿಲ್ಲೆಯ ಬಿಡದಿಗೆ ಮೆಟ್ರೋರೈಲು ಸಂಪರ್ಕಕಲ್ಪಿಸುವಕುರಿತು ಬಿಎಂಆರ್‌ಸಿಎಲ್ ಮೊದಲ ಹೆಜ್ಜೆಇಟ್ಟಿದೆ. ಇದಕ್ಕಾಗಿ ವರದಿ ತಯಾರು ಮಾಡಲುಟೆಂಡರ್ ಸಹ ಕರೆದಿದೆ.

ಪುಟ 2

## ಅಧ್ಯಾತ್ಮದತ್ತ ದರ್ಶನ್ ಒಲವು?

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟದರ್ಶನ್‌ಜೈಲಲ್ಲಿ ದಿನಕಳೆಯುತ್ತಿದ್ದಾರೆ. ದೈಹಿಕ ಮತ್ತು ಮಾನಸಿಕವಾಗಿ ಕುಂದಿರುವ ದರ್ಶನ್ ಅಧ್ಯಾತ್ಮದತ್ತ ಒಲವು ಹೊಂದಿದ್ದಾರೆ. ಅವರ ದಿನಚರಿ ಬಗ್ಗೆ ಪ್ರತ್ಯಕ್ಷದರ್ಶಿಗಳು ಮಾಹಿತಿ ಹಂಚಿಕೊಂಡಿದ್ದಾರೆ. ಕೊಲೆ ಕೇಸಲ್ಲಿ ಪರಪ್ಪನಅಗ್ರಹಾರಜೈಲು ಸೇರಿರುವದರ್ಶನ್ ದಿನಚರಿ ಎಂಬ ಬಗ್ಗೆ ಪ್ರತ್ಯಕ್ಷದರ್ಶಿಗಳು ಹೇಳಿರುವಂತೆ, ದರ್ಶನ್‌ಗೆಚಾಪೆಯೇ ಹಾಸಿಗೆಯಾಗಿದೆ.ಕಂಬಳಿ ಹೊದ್ದು ನಿದ್ರೆ ಮಾಡ್ತಾರೆ.



ಪ್ರತಿದಿನ ಬೆಳಗ್ಗೆ ಮತ್ತು ಸಂಜೆಅರ್ಧಗಂಟೆಧ್ಯಾನ ಮಾಡುತ್ತಾರೆಎಂದು ತಿಳಿದುಬಂದಿದೆ. ಬೆಳಗ್ಗೆ ಆರುಗಂಟೆಯಿಂದ ಏಳು ಗಂಟೆತನಕದರ್ಶನ್ ವಾಕಿಂಗ್ ಮಾಡುತ್ತಾರೆ.ತಿಂಡಿ ಮುಗಿಸಿ ಅಧ್ಯಾತ್ಮದ ಪುಸ್ತಕಗಳನ್ನು ಓದುತ್ತಿದ್ದಾರೆ. ಬರೋಬ್ಬರಿ ಹದಿನಾರು ಪುಸ್ತಕಗಳನ್ನು ಜೊತೆಗೆಇಟ್ಟುಕೊಂಡಿದ್ದಾರೆಎನ್ನಲಾಗಿದೆ. ಅವುಗಳಲ್ಲಿ ಬಹುತೇಕ ಅಧ್ಯಾತ್ಮದ ಪುಸ್ತಕಗಳೇ ಎನ್ನುವುದು ವಿಶೇಷ. ಸ್ವಾಮಿ ವಿವೇಕಾನಂದ, ರಾಮಕೃಷ್ಣ ಪರಮಹಂಸ, ಭಗವದ್ಗೀತೆ ಸಂಬಂಧಿಸಿದ ಪುಸ್ತಕ ಓದುತ್ತಿದ್ದಾರೆ.ಯಾವುದೇ ಸಿಬ್ಬಂದಿಯ ಜೊತೆಗೆ ಹೆಚ್ಚು ಮಾತನಾಡುವುದಿಲ್ಲ ಎಂದುಜೈಲು ಸಿಬ್ಬಂದಿ ಮಾಹಿತಿ ನೀಡಿದ್ದಾರೆ. ಕಳೆದ ಒಂದು ತಿಂಗಳಿಂದ ಪರಪ್ಪನಅಗ್ರಹಾರಜೈಲಿನಲ್ಲಿರುವದರ್ಶನ್ ಅಧ್ಯಾತ್ಮದತ್ತ ಒಲವು ತೋರಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

## ಡಿಕೆಶಿ ಭಾಷಣದ ವೇಳೆ 'ಡಿ ಬಾಸ್..ಡಿ ಬಾಸ್' ಘೋಷಣೆ





**ರಾಮನಗರ:** ಚಾಮುಂಡೇಶ್ವರಿಕರಗ ಮಹೋತ್ಸವದಲ್ಲಿಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭಾಷಣ ಮಾಡುವಾಗದರ್ಶನ್ ಅಭಿಮಾನಿಗಳು 'ಡಿ ಬಾಸ್ ..ಡಿ ಬಾಸ್' ಎಂದುಘೋಷಣೆಕೂಗಿರುವ ಪ್ರಸಂಗ ನಡೆದಿದೆ. ಕಾರ್ಯಕ್ರಮದಲ್ಲಿದರ್ಶನ್‌ಕುರಿತು ಮಾತನಾಡಿದ ಡಿಕೆಶಿ, ಅದರ ಬಗ್ಗೆ ನಾಳೆ ಮಾತನಾಡ್ತೇನಿ.ದರ್ಶನ್‌ಅವರ ಪತ್ನಿ ಭೇಟಿ ಮಾಡೋಕೆ ಸಮಯ ಕೇಳಿದ್ದಾರೆ.ನಾಳೆ ಬೆಳಗ್ಗೆ ಅವರನ್ನ ಭೇಟಿ ಮಾಡ್ತೇನೆಎಂದು ಅಭಿಮಾನಿಗಳಿಗೆ ಭರವಸೆ ನೀಡಿದರು. ಏನಾದರೂಅನ್ಯಾಯಆಗಿದ್ರೆ ಸರಿಪಡಿಸಲು ಪ್ರಯತ್ನ ಮಾಡ್ತೇನೆ.

ಪುಟ 2

## ಲೇಡಿಸ್ ಪಿಜಿಗೆ ನುಗ್ಗಿ ಕತ್ತು ಕೊಯ್ದು ಯುವತಿಯ ಹತ್ಯೆ

**ಬೆಂಗಳೂರು:** ಲೇಡಿಸ್ ಪಿಜಿಯೊಂದಕ್ಕೆ ನುಗ್ಗಿದ ದುಷ್ಕರ್ಮಿ ಯುವತಿಯ ಕತ್ತು ಕೊಯ್ದು ಕೊಲೆ ಮಾಡಿ ಪರಾರಿಯಾಗಿದ್ದಾನೆ. ಕೋರಮಂಗಲದಲ್ಲಿರುವ ಲೇಡಿಸ್ ಪಿಜಿಯಲ್ಲಿಈ ಘಟನೆ ನಡೆದಿದೆ.



ಮೃತ ಯುವತಿಯನ್ನು ಬಿಹಾರ ಮೂಲದ ಕೃತಿ ಕುಮಾರಿ (24) ಎಂದು ಗುರುತಿಸಲಾಗಿದೆ. ರಾತ್ರಿ 11.10ರಿಂದ 11.30ರ ಸುಮಾರಿಗೆ ಈ ಹತ್ಯೆ ನಡೆದಿದೆ. ಕೃತಿ ಕುಮಾರಿ ಬೆಂಗಳೂರಿನ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದು, ಕೋರಮಂಗಲದ ವಿಆರ್ ಲೇಔಟ್ ನ ಪಿಜಿಯಲ್ಲಿ ವಾಸವಾಗಿದ್ದರು. ರಾತ್ರಿ ಸುಮಾರು 11.10ಕ್ಕೆ ಯುವಕನೋರ್ವ ಚಾಕು ಇಟ್ಟುಕೊಂಡು ಯುವತಿ ಇದ್ದ ಲೇಡಿಸ್ ಪಿಜಿಯೊಳಗೆ ನುಗ್ಗಿದ್ದು 3ನೇ ಮಹಡಿಯಲ್ಲಿರುವ ಕೃತಿ ಕುಮಾರಿ ಅವರ ಕೊಠಡಿ ಬಳಿ ಚಾಕುವಿನಿಂದ ಹಲ್ಲೆ ಮಾಡಿದ್ದಾನೆ. ಬಳಿಕ ಕತ್ತು ಕೊಯ್ದು ಹತ್ಯೆ ಮಾಡಿದ್ದಾನೆ. ತೀವ್ರ ಗಾಯಗೊಂಡ ಕೃತಿ ಕುಮಾರಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬಳಿಕ ಯುವಕ ಪರಾರಿಯಾಗಿದ್ದಾನೆ. ಪರಿಚಯಸ್ಥ ಯುವಕನಿಂದಲೇ ಕೃತ್ಯ ನಡೆದಿರುವ ಶಂಕೆ ವ್ಯಕ್ತವಾಗಿದೆ. ಸೂಕ್ತ ಭದ್ರತಾ ವ್ಯವಸ್ಥೆ ಕಲ್ಪಿಸದೆ ಪಿಜಿ ಮಾಲೀಕರು ನಿರ್ಲಕ್ಷ್ಯ ವಹಿಸಿದ್ದೇ ಘಟನೆಗೆ ಕಾರಣ ಎನ್ನುವ ಆರೋಪ ಕೇಳಿ ಬಂದಿದೆ. ಘಟನಾ ಸ್ಥಳಕ್ಕೆ ಕೋರಮಂಗಲ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸ್ಥಳಕ್ಕೆ ಆಗ್ನೇಯ ವಿಭಾಗ ಡಿಸಿಪಿ ಸಾರಾ ಫಾತಿಮಾ ಧಾವಿಸಿ ಮಾಹಿತಿ ಕಲೆ ಹಾಕಿದ್ದಾರೆ. ಕೋರಮಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಸಿಸಿಟಿವಿ ದೃಶ್ಯ ಆಧರಿಸಿ ಆರೋಪಿ ಯುವಕನ ಪತ್ತೆ ಹಚ್ಚಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

## 6 ವರ್ಷದಿಂದ ಕೊಲೆಗೆ ಸಂಚು; ಧರ್ಮಾಧಿಕಾರಿ ಹತ್ಯೆ ಆರೋಪಿ ಹೇಳಿದ್ದೇನು?

**ಧಾರವಾಡ:** ಹುಬ್ಬಳ್ಳಿಯ ವೈಷ್ಣೋದೇವಿ ದೇವಸ್ಥಾನದ ಧರ್ಮಾಧಿಕಾರಿ ಹತ್ಯೆಗೆ ಆತ ಮಾಡುತ್ತಿದ್ದ ಮಾಟ ಮಂತ್ರವೇ ಕಾರಣ ಎಂದು ಕೊಲೆ ಆರೋಪಿ ಸಂತೋಷ ಭೋಜಗಾರ ಒಪ್ಪಿಕೊಂಡಿದ್ದಾನೆ. ಹತ್ಯೆಯಾದ ದೇವೇಂದ್ರಪ್ಪಜ್ಜ



ಮಾಟ, ಮಂತ್ರ ಮಾಡುತ್ತಿದ್ದ. ದೇವೇಂದ್ರಪ್ಪಜ್ಜನಿಂದ ನನ್ನ ಅತ್ತೆ-ಮಾವ ಮಾಟ ಮಂತ್ರ ಮಾಡಿಸುತ್ತಿದ್ದರು.ಇವರಿಂದ ಎಷ್ಟೋ ಮನೆಗಳು ಹಾಳಾಗಿವೆ. ನಮ್ಮ ಕುಟುಂಬದವರಿಗೆ ಅನಾರೋಗ್ಯ ಉಂಟಾಗಿದೆ.ಹೀಗಾಗಿ 6 ವರ್ಷಗಳಿಂದ ಕೊಲೆ ಮಾಡಲು ಸಂಚು ಮಾಡಿದ್ದೆ ಎಂದು ಆತ ಹೇಳಿಕೊಂಡಿದ್ದಾನೆ. ಎರಡು ವರ್ಷಗಳ ಹಿಂದೆ ಪ್ಲಾನ್ ಮಾಡಿದ್ದೆ ಮಿಸ್ ಆಗಿತ್ತು.ಆದರೆ ಈ ಬಾರಿ ಪಕ್ಕಾ ಕೊಲೆ ಮಾಡಿ ಹತ್ಯೆ ಮಾಡಿರುವೆ. ದೇವೇಂದ್ರಪ್ಪಜ್ಜನ ಜೀವ ನಾನು ತೆಗೆದುಕೊಂಡಿದ್ದೇನೆ. ಇವನು ಸತ್ತಿದ್ದಕ್ಕೆ ಎಷ್ಟೋ ಕುಟುಂಬಗಳು ನೆಮ್ಮದಿಯಿಂದ ಇವೆ ಎಂದು ದುಷ್ಕರ್ಮಿ ಹೇಳಿಕೊಂಡಿದ್ದಾನೆ.

## ಬೆಳಗಾವಿಗೆ ವಂದೇ ಭಾರತ್ ರೈಲು ವಿಸ್ತರಣೆ ಇಲ್ಲ

**ಬೆಂಗಳೂರು:** ಬೆಳಗಾವಿಗೆ ವಂದೇ ಭಾರತ್ ರೈಲು ವಿಸ್ತರಣೆ ಮಾಡಲು ಮೂಲಭೂತ ಸೌಕರ್ಯಗಳ ಕೊರತೆ ಸರಿಯಿಲ್ಲ ಎಂದು ರೈಲ್ವೆ ಇಲಾಖೆ ಪ್ರಸ್ತಾವನೆ ತಿರಸ್ಕಾರ ಮಾಡಿದೆ ಎಂದು ಮೂಲಭೂತ ಸೌಕರ್ಯಗಳ ಸಚಿವ ಎಂಬಿ ಪಾಟೀಲ್ ತಿಳಿಸಿದ್ದಾರೆ. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯ ಪ್ರಕಾಶ್ ಹುಕ್ಕೇರಿ ಪ್ರಶ್ನೆಗೆ ಎಂಬಿ ಪಾಟೀಲ್ ಉತ್ತರಿಸಿದರು. ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಯೋಜನೆಯನ್ನು ಬೆಳಗಾವಿಗೆ ವಿಸ್ತರಣೆ ಮಾಡಬೇಕು. ಈಗಾಗಲೇ ರೈಲ್ವೆ ಇಲಾಖೆ ಟ್ರಯಲ್ ರನ್ ಮಾಡಿದೆ. ಆದರೆ ಈಗ ಮೂಲಭೂತ ಸೌಕರ್ಯಗಳ ಕೊರತೆ ಇದೆ ಎಂದು ಹೇಳಿ ಯೋಜನೆ ವಿಸ್ತರಣೆ ಮಾಡುವುದಿಲ್ಲ ಎಂದು ಹೇಳಿದೆ.ಇದಕ್ಕೆ ನಾವು ಒಪ್ಪುವುದಿಲ್ಲ. ಕೂಡಲೇ ಬೆಳಗಾವಿಗೆ ವಂದೇ ಭಾರತ್ ವಿಸ್ತರಣೆ ಮಾಡಲು ಕ್ರಮವಹಿಸಿ.ವಂದೇ ಭಾರತ್ ವಿಸ್ತರಣೆ ಮಾಡದೇ ಹೋದರೆ ರಾಜ್ಯ ಸರ್ಕಾರ ರೈಲ್ವೆ ಯೋಜನೆಗೆ ಬಿಡುಗಡೆ ಮಾಡುವ ಹಣ ತಡೆಹಿಡಿಯಿರಿ ಎಂದು ಒತ್ತಾಯಿಸಿದರು. ಇದಕ್ಕೆ ಸಚಿವ ಎಂಬಿ ಪಾಟೀಲ್ ಉತ್ತರ ನೀಡಿ, ರೈಲ್ವೆ ಇಲಾಖೆಯಿಂದ ಮಾಹಿತಿ ಪಡೆದು ಉತ್ತರ ನೀಡಲಾಗಿದೆ. ಈಗಾಗಲೇ ರೈಲ್ವೆ ಇಲಾಖೆ ಟ್ರಯಲ್ ರನ್ ಮಾಡಿದೆ.ಟ್ರಯಲ್ ಮಾಡಿ ಮೂಲಭೂತ ಸೌಕರ್ಯಗಳು ಇಲ್ಲ ಎಂದು ವಿಸ್ತರಣೆ ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಹೀಗಾಗಿ ಕೇಂದ್ರ, ಸರ್ಕಾರಕ್ಕೆ ನಾವು ಮತ್ತೆ ಮನವಿ ಮಾಡುತ್ತೇವೆ. ರೈಲ್ವೆ ಸಚಿವರು ನಮ್ಮ ರಾಜ್ಯದವರೇ ಆಗಿದ್ದಾರೆ. ಹೀಗಾಗಿ ಮತ್ತೊಮ್ಮೆ ಬೆಳಗಾವಿಗೆ ವಂದೇ ಭಾರತ್ ರೈಲು ವಿಸ್ತರಣೆ ಮಾಡುವ ಬಗ್ಗೆ ಮನವಿ ಮಾಡುತ್ತೇವೆ ಎಂದರು.

## ದೂರು ಕೊಟ್ಟ ಮಹಿಳೆಗೆ ಕೋರ್ಟ್ ಆವರಣದಲ್ಲೇ ಚಾಕು ಇರಿದ ದುಷ್ಕರ್ಮಿ

**ಬೆಂಗಳೂರು:** ದೂರು ಕೊಟ್ಟ ಮಹಿಳೆಗೆ ನ್ಯಾಯಾಲಯದ ಆವರಣದಲ್ಲೇ ಚಾಕು ಇರಿದಿರುವುದು ನಗರದ ಮ್ಯಾಜಿಸ್ಟ್ರೇಟ್ ಕೋರ್ಟ್‌ನಲ್ಲಿನಡೆದಿದೆ. ಚಾಕು ಇರಿತಕ್ಕೊಳಗಾದ ಮಹಿಳೆಯನ್ನು ವಿಮಲಾ ಎಂದು ಗುರುತಿಸಲಾಗಿದೆ.ಚಾಕು ಇರಿದ ಆರೋಪಿಯನ್ನು ಜಯರಾಮ್ ರೆಡ್ಡಿ ಎಂದು ಗುರುತಿಸಲಾಗಿದೆ. ಆರೋಪಿ ವಿರುದ್ಧ ಮಹಿಳೆ ಶೇಷಾದ್ರಿಪುರಂ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು.ಇಂದು ವಿಚಾರಣೆಗೆ ನ್ಯಾಯಾಲಯಕ್ಕೆ ಬಂದಿದ್ದ ವೇಳೆ ಮಹಿಳೆಗೆ ಆರೋಪಿ ಕೋರ್ಟ್ ಹಾಲ್ 1 ರಲ್ಲಿ ಚಾಕು ಇರಿದಿದ್ದಾನೆ. ಚಾಕು ಇರಿತಕ್ಕೊಳಗಾದ ಮಹಿಳೆಯ ಸ್ಥಿತಿ ಗಂಭೀರವಾಗಿದ್ದು, ಆಕೆಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

### ಹರೀಶ್ ಪೂಂಜಾ ಗೂಂಡಾ ಎಂದ ರಾಜೇಗೌಡ

# ವಿಧಾನಸಭೆಯಲ್ಲಿ ಗದ್ದಲ



**ಬೆಂಗಳೂರು:** ವಿಧಾನಸಭೆಯಲ್ಲಿ ಬಿಜೆಪಿ ಸದಸ್ಯರ ಆಕ್ಷೇಪ ವಿರೋಧಿಸುವ ಭರದಲ್ಲಿ ಶಾಸಕ ರಾಜೇಗೌಡ ಅವರು ಬಿಜೆಪಿ ಶಾಸಕ ಹರೀಶ್ ಪೂಂಜಾ ಅವರನ್ನು ಗೂಂಡಾ ಎಂದು ಕರೆದಿದ್ದು, ಭಾರೀ ಗದ್ದಲಕ್ಕೆ ಕಾರಣವಾಯಿತು.

ವಿಧಾನಸಭೆಯ ಸಭಾಂಗಣದಲ್ಲಿ ಸಂವಿಧಾನದ ಪೀಠಿಕೆ ಅಳವಡಿಸಿರುವ ಕುರಿತಾಗಿ ಆಡಳಿತ ಹಾಗೂ ವಿರೋಧ ಪಕ್ಷದ ಸದಸ್ಯರು ಸ್ಪೀಕರ್ ಯು.ಟಿ ಖಾದರ್‌ಗೆ ಅಭಿನಂದನೆ ಸಲ್ಲಿಸುವ ಸಂದರ್ಭದಲ್ಲಿ ಸಂವಿಧಾನ ಪರ ಯಾರು ವಿರುದ್ಧ ಯಾರು ಎಂಬ ಬಗ್ಗೆ ಎರಡು ಕಡೆಯವರು ಆರೋಪ ಪ್ರತ್ಯಾರೋಪ ನಡೆಸಿದರು. ಬಿಜೆಪಿ ಸದಸ್ಯರಾದ ಸುರೇಶ್ ಕುಮಾರ್, ಆರಗ ಜ್ಞಾನೇಂದ್ರ, ಕಾಂಗ್ರೆಸ್ ಸದಸ್ಯರಾದ ಕೆ.ಜೆ ಜಾರ್ಜ್ ಹಾಗೂ ಇತರರ ನಡುವೆ ಆರೋಪ ಪ್ರತ್ಯಾರೋಪ ನಡೆಯಿತು. ತುರ್ತುಪರಿಸ್ಥಿತಿ ಜಾರಿಗೊಳಿಸುವ ಮೂಲಕ ಸಂವಿಧಾನದ ಕಗ್ಗೊಲೆ ಮಾಡಿದ್ದು ಕಾಂಗ್ರೆಸ್ ಎಂದು ಬಿಜೆಪಿ ಆರೋಪ ಮಾಡಿದರೆ, ದೇಶದಲ್ಲಿ ಅಘೋಷಿತ ತುರ್ತುಪರಿಸ್ಥಿತಿ ಇದೆ ಎಂದು ಕಾಂಗ್ರೆಸ್ ಸದಸ್ಯರು ಆರೋಪ ಮಾಡಿದರು.

ಈ ವೇಳೆ ಮಧ್ಯಪ್ರವೇಶ ಮಾಡಿದ ಸ್ಪೀಕರ್ ಖಾದರ್, ಗುಜರಾತ್ ನಿಂದ ಕರ್ನಾಟಕದ ಕರಾವಳಿಯವರೆಗೆ ಸ್ಮಗ್ಲರ್ ಗಳು ಆಳುತ್ತಿದ್ದರು.ಆದರೆ, ತುರ್ತುಪರಿಸ್ಥಿತಿಯ ಸಂದರ್ಭದಲ್ಲಿ ಕರೀಂ ಲಾಲ, ಹಾಜಿ ಮಸ್ತಾನ್ ಸೇರಿದಂತೆ ಸ್ಮಗ್ಲರ್‌ಗಳನ್ನು ಜೈಲಿಗೆ ಹಾಕಿದ್ದು ತುರ್ತುಪರಿಸ್ಥಿತಿ ಕಾಲದಲ್ಲಿ ಇಂದಿರಾ ಗಾಂಧಿಯವರು.ಈ ನಿಟ್ಟಿನಲ್ಲಿ ತುರ್ತುಪರಿಸ್ಥಿತಿ ಸಾಧಕ ಬಾಧಕ ಬಗ್ಗೆ ಚರ್ಚೆ ಆಗಲಿ ಎಂದರು.ಇದಕ್ಕೆ ಆರಗ ಜ್ಞಾನೇಂದ್ರ ಆಕ್ಷೇಪ ವ್ಯಕ್ತಪಡಿಸಿ, ಸಂವಿಧಾನದ ಮೇಲೆ ಅತ್ಯಾಚಾರ ಮಾಡಿದ್ದು ತುರ್ತುಪರಿಸ್ಥಿತಿಯ ಸಂದರ್ಭದಲ್ಲಿ. ಹಾಗಾಗಿ ಸಮರ್ಥನೆ ಮಾಡಬಾರದು. ನಾವು ಜೈಲಿನಲ್ಲಿ ಇದ್ದೆವು.ಸಾಮಾನ್ಯ ಜನರಿಗೆ ಕಿರುಕುಳ ಆಗಿದೆ.ಎಳೆದುಕೊಂಡು ಹೋಗಿ ಫ್ಯಾಮಿಲಿ ಪ್ಲ್ಯಾನಿಂಗ್ ಮಾಡಿದರು ಎಂದರು.

ವಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ, ತಾವು ಆ ಸ್ಥಾನದಲ್ಲಿ ಕುಳಿತುಕೊಂಡು ಈ ಹೇಳಿಕೆ ಕೊಟ್ಟರೆ ಅದು ಸಮರ್ಥನೆ ಮಾಡಿದಂತೆ ಆಗುತ್ತದೆ.ಇಲ್ಲಿ ಕುಳಿತುಕೊಂಡರೆ ವಾದ ವಿವಾದ ಮಾಡಬಹುದು ಎಂದರು.

ಇದೇ ವೇಳೆ ಕೆ.ಜೆ.ಜಾರ್ಜ್ ಮಾತನಾಡಿ, ವಿರೋಧ ಪಕ್ಷದಲ್ಲಿ ಇದ್ದು ಸಂವಿಧಾನಬಾಹಿರ ಕೆಲಸ ಮಾಡಿದರೆ ಕ್ರಮ ಕೈಗೊಳ್ಳಬೇಕಲ್ಲ. ತುರ್ತುಪರಿಸ್ಥಿತಿ ಬಳಿಕವೂ ಇಂದಿರಾ ಗಾಂಧಿಯನ್ನು ಜನರು ಪ್ರಧಾನಿ ಮಾಡಿದರು.ನೀವು ಸಂವಿಧಾನ ಇರಲೇಬಾರದು ಎನ್ನುವವರು, ಇವಾಗ ಸಂವಿಧಾನದ ಬಗ್ಗೆ ಮಾತನಾಡ್ತಿರಾ?ನೀವು ಸಂವಿಧಾನದ ವಿರೋಧಿಗಳು.ಜನ ಸರಿಯಾದ ಬುದ್ಧಿ ಕಲಿಸಿದ್ದಾರೆ. ಅದಕ್ಕೆ ಇವಾಗ ಸುಮ್ಮನಿದ್ದೀರಿ. ಇಂದಿರಾಗಾಂಧಿ ವಿಚಾರ ಮಾತನಾಡಲು ಯಾವ ರೀತಿಯ ಯೋಗ್ಯತೆ ಇದೆ?ಅವರು ದೇಶಕ್ಕೆ ಪ್ರಾಣ ಕೊಟ್ಟವರು.ನಿಮ್ಮ ಕೈಯಿಂದ ಏನು ಮಾಡಲು ಆಗಲ್ಲ ಜನ ನಿಮಗೆ ಬುದ್ಧಿ ಕಲಿಸಿದ್ದಾರೆ ಎಂದರು.ಈ ವೇಳೆ ಕಾಂಗ್ರೆಸ್ ಸದಸ್ಯ ರಾಜೇಗೌಡ ಅವರು ಬಿಜೆಪಿ ಸದಸ್ಯರ ಆಕ್ಷೇಪ ವಿರೋಧಿಸುವ ಭರದಲ್ಲಿ ಹರೀಶ್ ಪೂಂಜಾಗೆ ಗೂಂಡಾ ಎಂದರು.ಇದು ಸದನದಲ್ಲಿ ಕೋಲಾಹಲಕ್ಕೆ ಕಾರಣವಾಯ್ತು. ಶಾಸಕರನ್ನು ರಾಜೂಗೌಡರು ಯಾವ ರೀತಿಯಲ್ಲಿ ಗೂಂಡಾ ಅಂತಾರೆ?ಎರಡು ಬಾರಿ ಶಾಸಕರಾದವರನ್ನು ಗೂಂಡಾ ಎನ್ನುತ್ತಾರೆ. ಅದಕ್ಕೆ ಕ್ಷಮೆ ಕೇಳಬೇಕು. ಶಾಸಕರಿಗೆ ಗೂಂಡಾ ಎಂದು ಹೇಗೆ ಕರೆಯುತ್ತಾರೆ?ಎಂದು ಬಿಜೆಪಿ ಶಾಸಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.ಗದ್ದಲ ಜಾಸ್ತಿಯಾದ ಹಿನ್ನೆಲೆಯಲ್ಲಿ ಸ್ಪೀಕರ್ ಖಾದರ್ ಅವರು ಸದನವನ್ನು ಕೆಲ ಕಾಲ ಮುಂದೂಡಿದರು.

# ರೈತರ ಸಾಲಮನ್ನಾ ಪ್ರಸ್ತಾಪ ಸರ್ಕಾರದ ಮುಂದೆ ಇಲ್ಲ: ಸಚಿವ ಕೆ.ಎನ್.ರಾಜಣ್ಣ

**ಬೆಂಗಳೂರು:** ರೈತರ ಸಾಲಮನ್ನಾ ಆಗುವ ನಿರೀಕ್ಷೆಯಲ್ಲಿದ್ದ ರೈತರಿಗೆ ಸರ್ಕಾರ ನಿರಾಸೆ ಮೂಡಿಸಿದೆ. ರೈತರ ಸಾಲಮನ್ನಾ ಮಾಡುವ ಪ್ರಸ್ತಾಪ ಸರ್ಕಾರದ ಮುಂದೆ ಇಲ್ಲ ಎಂದು ಸಹಕಾರ ಸಚಿವ ಕೆಎನ್ ರಾಜಣ್ಣ ತಿಳಿಸಿದ್ದಾರೆ.



ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಸಿಟಿ ರವಿ ಪ್ರಶ್ನೆಗೆ ಉತ್ತರಿಸಿದ ಅವರು, ಸಾಲಮನ್ನಾ ಮಾಡುವ ಪ್ರಸ್ತಾಪ ಇಲ್ಲ ಎಂದು ಸ್ಪಷ್ಟಪಡಿಸಿದರು.

ಸಿಟಿ ರವಿ ಮಾತನಾಡಿ, ಸಹಕಾರ ಸಂಘದಲ್ಲಿ ಸರಿಯಾಗಿ ಸಾಲ ಸೌಲಭ್ಯ ನೀಡುತ್ತಿಲ್ಲ. ಅಗತ್ಯವಾಗಿ ಸಾಲ ಬೇಕಾಗಿರುವವರಿಗೆ ಸಾಲ ಸಿಗುತ್ತಿಲ್ಲ. ತಮಗೆ ಬೇಕಾದವರಿಗೆ ಮಾತ್ರ ಸಾಲ ನೀಡುವ ವ್ಯವಸ್ಥೆ ಸಹಕಾರಿ ಬ್ಯಾಂಕುಗಳಲ್ಲಿ ಇವೆ. ಬಾಗಿಲು ಹಾಕಿಕೊಂಡು ಕಿಟಕಿಯಲ್ಲಿ ವ್ಯವಹಾರ ಮಾಡುವ ವ್ಯವಸ್ಥೆ ಸಹಕಾರಿ ಇಲಾಖೆಯಲ್ಲಿ ಇದೆ ಈ ಬಗ್ಗೆ ಸರ್ಕಾರ ಕ್ರಮವಹಿಸಬೇಕು. ರೈತರ ಸಾಲಮನ್ನಾ ಸರ್ಕಾರ ಮಾಡಬೇಕು. ರಾಜ್ಯದಲ್ಲಿ ಕಳೆದ ಒಂದು ವರ್ಷದಲ್ಲಿ 1 ಸಾವಿರ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹೀಗಾಗಿ ಸರ್ಕಾರ ರೈತರ ನೆರವಿಗೆ ಬರಬೇಕು.2023ರ ಭಾಷಣದಲ್ಲಿ ಈ ಸರ್ಕಾರ ರೈತರ ಸಾಲ ಮನ್ನಾ ಮಾಡುವ ಭರವಸೆ ನೀಡಿದ್ದರು.ಹೀಗಾಗಿ ರೈತರ ಸಾಲಮನ್ನಾ ಮಾಡಬೇಕು ಎಂದು ಆಗ್ರಹಿಸಿದರು.

ಇದಕ್ಕೆ ಸಚಿವ ರಾಜಣ್ಣ ಉತ್ತರ ನೀಡಿ, 2024-25ರ ಸಾಲಿನಲ್ಲಿ ಜೂನ್ ಅಂತ್ಯದವರೆಗೆ ಸಹಕಾರಿ ಸಂಘಗಳು ಹೊಸದಾಗಿ ಅರ್ಜಿ ಸಲ್ಲಿಸಿದ 9,797 ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ 93.49 ಕೋಟಿ ರೂ.ಬೆಳೆ ಸಾಲ ನೀಡಿದೆ.2,815 ರೈತರಿಗೆ 138.36 ಕೋಟಿ ರೂ.ಮಧ್ಯಮ ಸಾಲ, ದೀರ್ಘಾವಧಿ ಸಾಲ ನೀಡಲಾಗಿದೆ.ಕಾಂಗ್ರೆಸ್ ಅವಧಿಯಲ್ಲಿ ಹೆಚ್ಚು ಸಾಲಮನ್ನಾ ಮಾಡಿದೆ.ರಾಜಕೀಯಗೋಸ್ಕರ ರೈತರನ್ನು ಬಳಕೆ ಮಾಡೋದು ಬೇಡ. ಬಿಜೆಪಿ ಅವರು ಸಾಲಮನ್ನಾ ಮಾಡಿ ಎನ್ನುವ ಬದಲು ರಾಷ್ಟ್ರೀಯ ಬ್ಯಾಂಕ್ ಸಾಲಮನ್ನಾ ಕೇಂದ್ರ ಮಾಡಲಿ.ಅದನ್ನು ನೋಡಿಕೊಂಡು ನಾವು ಬೇಕಾದರೆ ಮಾಡುತ್ತೇವೆ. ಹೆಚ್ಚು ಸಾಲಮನ್ನಾ ಮಾಡಿರೋದು ಕಾಂಗ್ರೆಸ್ ಸರ್ಕಾರ.ಇದರಲ್ಲಿ ಬಿಜೆಪಿ ರಾಜಕೀಯ ಮಾಡೋದು ಬೇಡ. ಹಣಕಾಸು ಇತಿಮಿತಿಯಲ್ಲಿ ಸಾಲ ನೀಡುವ ವ್ಯವಸ್ಥೆ ಮಾಡುತ್ತೇವೆ ಎಂದು ತಿಳಿಸಿದರು.

### ಎರಡ್ಮೂರು ತಿಂಗಳಿಂದ ಹಣ ಬಂದಿಲ್ಲ

# ಆತಂಕದಲ್ಲಿ ರಾಜ್ಯದ ಗೃಹಲಕ್ಷ್ಮೀಯರು!

**ಬೆಂಗಳೂರು:** ರಾಜ್ಯ ಸರ್ಕಾರ ಗೃಹಲಕ್ಷ್ಮೀ ಯೋಜನೆಯನ್ನ ಐದು ವರ್ಷ ಕೊಡ್ತಿವಿ ಅಂತಾ ಘೋಷಣೆ ಮಾಡಿದ್ರು. ರಾಜ್ಯದ ಪ್ರತಿ ಯಾಜಮಾನಿಗೆ 2000 ಸಾವಿರ ರೂ. ಕೊಡ್ತೇವೆ, ಯಾವ ಕಾರಣಕ್ಕೂ ನಿಲ್ಲಿಸೋದಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ರು. ಆದರೆ ಕಳೆದೆರಡು ಮೂರು ತಿಂಗಳಿಂದ ಮಹಿಳೆಯರಿಗೆ ಹಣ ಬರುತ್ತಿಲ್ಲ ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು ಹೇಳಿದರು.



ಗೃಹಲಕ್ಷ್ಮೀ ಯೋಜನೆ ಬಗ್ಗೆ ವಿಧಾನಸೌಧದಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಬಗ್ಗೆ ಸಿಎಂ ಸಿದ್ದರಾಮಯ್ಯ ಹೆಮ್ಮೆಯಿಂದ ಹೇಳಿಕೊಂಡಿದ್ರು.ಚುನಾವಣೆ ಪೂರ್ವ ಘೋ?ಣೆ ಮಾಡಿದ್ದ ಗ್ಯಾರಂಟಿ ಯೋಜನೆಗಳಿಂದಲೇ ಸರ್ಕಾರ ಅಧಿಕಾರಕ್ಕೆ ಬರುವಂತಾಯ್ತು, ಮುಂದೆ ಲೋಕಸಭಾ ಚುನಾವಣೆ ಇದ್ದಿದ್ದರಿಂದ ಸ್ಥಗಿತಗೊಂಡಿರಲಿಲ್ಲ. ಒಂದೇ ಬಾರಿ ಎರಡು ಕಂತುಗಳಲ್ಲಿ ಹಾಕಿ ರಾಜ್ಯದ ಮಹಿಳೆಯರನ್ನ ಮೆಚ್ಚಿಸುವ ಕೆಲಸ ಮಾಡಿದ್ರು. ಆದರೆ ಯಾವಾಗ ಲೋಕಸಭಾ ಚುನಾವಣೆ ಮುಗಿದು ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಮೈತ್ರಿ ಸರ್ಕಾರ ಅಧಿಕಾರಕ್ಕೆ ಬಂತೋ ಅಂದಿನಿಂದ ಗ್ಯಾರಂಟಿ ಯೋಜನೆಗಳು ಹಳ್ಳ ಹಿಡಿದಿವೆ. ಲೋಕಸಭೆ ಚುನಾವಣೆ ಆದ್ಮೇಲೆ ಆ ವಿಶ್ವಾಸ ನಮ್ಮ ಗೃಹಿಣಿಯರಿಗೆ ಬರ್ತಾಇಲ್ಲ.ಚುನಾವಣೆ ಆದ ಒಂದು ತಿಂಗಳಾದ ಮೇಲೆ ಮನೆ ಯಜಮಾನಿಗೆ ಎರಡು ಸಾವಿರ ಬರಬೇಕಿತ್ತು ಆದ್ರೆ ಇನ್ನೂವರೆಗೆ ಬಂದಿಲ್ಲ.ಆದರಿಂದ ಎಲ್ಲ ಮಹಿಳೆಯರು ಆತಂಕದಲ್ಲಿದ್ದಾರೆ. ಚುನಾವಣೆಗೋಸ್ಕರ ಇಂತಹ ಯೋಜನೆ ಜಾರಿಗೆ ತಂದ್ರ ಎಂಬ ಭಾವನೆ ಗೃಹಿಣಿಯಲ್ಲಿ ಮನೆ ಮಾಡಿದೆ.ಇದರ ಬಗ್ಗೆ ಸದನದಲ್ಲಿಯೂ ಚರ್ಚೆ ಮಾಡ್ತಿವಿ ಎಂದರು.ಕೂಡಲೇ ಸರ್ಕಾರ ಹಣ ಬಿಡುಗಡೆ ಮಾಡುವಂತೆ ಆಗ್ರಹಿಸಿದರು.

# ಪೊಲೀಸರು ಇನ್ಮುಂದೆ ರೀಲ್ಸ್ ಮಾಡುವಂತಿಲ್ಲ: ಕಮಿಷನರ್ ಖಡಕ್ ಎಚ್ಚರಿಕೆ

**ಬೆಂಗಳೂರು:** ಸಮವಸ್ತ್ರದಲ್ಲಿ ರೀಲ್ಸ್ ಮಾಡುವ ಪೊಲೀಸರಿಗೆ ಬೆಂಗಳೂರು ನಗರ ಕಮಿಷನರ್ ಬಿ.ದಯಾನಂದ ಅವರು ಬಿಸಿ ಮುಟ್ಟಿಸಿದ್ದಾರೆ. ಪೊಲೀಸ್ ರೀಲ್ಸ್ ಸ್ಟಾರ್‌ಗಳಿಗೆ ಎಚ್ಚರಿಕೆ ನೀಡಿರುವ ಅವರು, ಇಲಾಖೆಗೆ ಸಂಬಂಧಪಡದ ವಿಷಯದಲ್ಲಿ ಸಮವಸ್ತ್ರದಲ್ಲಿ ಅಶಿಸ್ತು ತೋರಿಸುವ ಸಿಬ್ಬಂದಿಗಳ ಮೇಲೆ ನಿಗಾ ಇಡಲು ಸೂಚಿಸಿರುವ ಅವರು, ಪೊಲೀಸ್ ಕರ್ತವ್ಯಗಳಿಗೆ ಸಂಬಂಧಿಸದ ವಿಷಯಗಳಲ್ಲಿ ಫೋಟೋ, ರೀಲ್ಸ್ ಅಪ್ಲೋಡ್ ಮಾಡುವಂತಿಲ್ಲ ಎಂದು ಖಡಕ್ ಎಚ್ಚರಿಕೆ ನೀಡಿದ್ದಾರೆ.

ಸಮವಸ್ತ್ರದಲ್ಲಿ ರೀಲ್ಸ್ ಮಾಡುವ ಪೊಲೀಸರಿಗೆ ಶಿಸ್ತು ಕ್ರಮದ ಎಚ್ಚರಿಕೆ ನೀಡಿರುವ ಅವರು, ಇಲಾಖೆಗೆ ಸಂಬಂಧಪಡದೇ ಇರುವ ವಿಷಯಗಳು ಇಲಾಖೆಯ ಘನತೆ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತವೆ. ಪೊಲೀಸ್ ಸಮವಸ್ತ್ರವು ಪೊಲೀಸರ ಬದ್ಧತೆ, ಸಮರ್ಪಣೆ ಮತ್ತು ಹೊಣೆಗಾರಿಕೆಯ ಸಂಕೇತವಾಗಿದೆ.ಡಿಜಿಟಲ್ ಫೋರಮ್ ನಲ್ಲಿ ಇದರ ಬಳಕೆಯು ಈ ಮೌಲ್ಯಗಳನ್ನು ಪ್ರತಿಬಿಂಬಿಸುವಂತಿರಬೇಕಾಗುತ್ತದೆ. ಹಾಗಾಗಿ ಸಮವಸ್ತ್ರದಲ್ಲಿ ರೀಲ್ಸ್ ಮಾಡುವವರಿಗೆ ಶಿಸ್ತು ಕ್ರಮದ ಎಚ್ಚರಿಕೆ ನೀಡಲಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಇಲಾಖೆ ಹಾಗೂ ಪೊಲೀಸ್ ಕರ್ತವ್ಯಗಳಿಗೆ ಸಂಬಂಧಿಸದ ಯಾವುದೇ ವಿಷಯಗಳ ಕುರಿತು ಸಮವಸ್ತ್ರದಲ್ಲಿರುವ ಫೋಟೊ, ವಿಡಿಯೊ, ರೀಲ್ಸ್‌ಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುವಂತಿಲ್ಲ. ಕರ್ನಾಟಕ ರಾಜ್ಯ ನಾಗರಿಕ ಸೇವಾ ನಿಯಮ (ನಡತೆ) ಪ್ರಕಾರ ಯಾವುದೇ ಸರ್ಕಾರಿ ನೌಕರನು ಅಧಿಕೃತವಾದ ಯಾವುದೇ ದಾಖಲೆ ಅಥವಾ ಮಾಹಿತಿಯನ್ನು ಮಾಧ್ಯಮಗಳು ಅಥವಾ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುವಂತಿಲ್ಲ. ಸಕ್ಷಮ ಪ್ರಾಧಿಕಾರದಿಂದ ಅಧಿಕೃತ ಮಾನ್ಯತೆ ಪಡೆದ ಅಧಿಕೃತ ಅಧಿಕಾರಿ ಮಾತ್ರವೇ ಸಾಮಾಜಿಕ ಮಾಧ್ಯಮ ಖಾತೆಗಳ ಮೂಲಕ ಅಧಿಕೃತ ಮಾಹಿತಿ ಹಂಚಿಕೊಳ್ಳಲು ಅವಕಾಶವಿದೆ. ಆದರೆ, ಪೊಲೀಸ್ ವೃತ್ತಿಗೆ ಸಂಬಂಧ ಪಡದ ವಿಷಯಗಳ ಕುರಿತು ಪೊಲೀಸ್ ಸಮವಸ್ತ್ರದಲ್ಲಿ ಫೋಟೊಗಳು, ವಿಡಿಯೊ, ರೀಲ್ಸ್ ಇತ್ಯಾದಿಗಳನ್ನು ಹರಿಬಿಡದಂತೆ ಜಾಗೃತಗೊಳಿಸುವಂತೆ ಹಾಗೂ ಯಾವುದೆ ಲೋಪ ಕಂಡುಬಂದಲ್ಲಿ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಎಲ್ಲಾ ವಿಭಾಗಗಳ ಡಿಸಿಪಿಗಳಿಗೆ ಸೂಚಿಸಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಪೊಲೀಸ್ ಆಯುಕ್ತ ಬಿ.ದಯಾನಂದ್ ಅವರು, ಇತ್ತೀಚಿನ ದಿನಗಳಲ್ಲಿ ಪೊಲೀಸ್ ಸಿಬ್ಬಂದಿ ರೀಲ್ಸ್‌ಗಳನ್ನು ಮಾಡುತ್ತಿದ್ದಾರೆ. ಇದು ಹವ್ಯಾಸ, ಚಟವೋ ಗೊತ್ತಿಲ್ಲ, ಇಂತಹವುಗಳು ಇಲಾಖೆಗೆ ಶೋಭೆ ತರುವಂತದಲ್ಲ. ಸಮವಸ್ತ್ರಕ್ಕೆ ಸಮಾಜದಲ್ಲಿ ಅದರದ್ದೇ ಆದಂತಹ ಗೌರವ ಇದೆ.ಕೆಲವರು ತಮ್ಮ ಅಪಾರವಾದ ಪ್ರತಿಭೆಯನ್ನು ತೋರಿಸುತ್ತಿದ್ದಾರೆ.ಹೀಗಾಗಿ ಸಮವಸ್ತ್ರಗಳನ್ನ ಧರಿಸಿ ಆ ರೀಲ್ಸ್ ಗಳನ್ನ ಮಾಡೋದು ಇಲಾಖೆಗೆ ಸರಿಯಾಗೋದಿಲ್ಲ, ಹೀಗಾಗಿ ಸಾಮಾಜಿಕ ಮಾಧ್ಯಮಗಳಲ್ಲಿ ವಿಡಿಯೊ, ರೀಲ್ಸ್‌ಗಳನ್ನ ಹಾಕುವಂತಿಲ್ಲ ಎಂದು ಸೂಚಿಸಲಾಗಿದೆ ಎಂದು ತಿಳಿಸಿದರು.

## ರಾಮನಗರಕ್ಕೂ ನಮ್ಮ ಮೆಟ್ರೋ

ಬಿಎಂಆರ್‌ಸಿಎಲ್ ಜುಲೈ 9ರಂದು 1.59 ಕೋಟಿ ರೂ.ಗಳ ಟೆಂಡರ್‌ಕರೆದಿತ್ತು.ಒಟ್ಟು ಮೂರು ಮಾರ್ಗದಲ್ಲಿ ನಮ್ಮ ಮೆಟ್ರೋಯೋಜನೆಯನ್ನು ವಿಸ್ತರಣೆ ಮಾಡಲುಕಾರ್ಯಸಾಧ್ಯತೆಯಅಧ್ಯಯನ ವರದಿಯನ್ನುತಯಾರು ಮಾಡಲು ಹೈದರಾಬಾದ್ ಮೂಲದ ಕಂಪನಿಗೆ ಟೆಂಡರ್ ನೀಡಿದೆ. ಈ ವರ್ಷದ ಫೆಬ್ರವರಿಯಲ್ಲಿ ಬಿಎಂಆರ್‌ಸಿಎಲ್ 50 ಕಿ. ಮೀ.ಮಾರ್ಗದಲ್ಲಿ ನಮ್ಮ ಮೆಟ್ರೋಯೋಜನೆ ವಿಸ್ತರಣೆ ಮತ್ತು 68 ಕಿ. ಮೀ.ನೂತನ ಮಾರ್ಗ ನಿರ್ಮಾಣದಕುರಿತುಕಾರ್ಯಸಾಧ್ಯತೆಯಅಧ್ಯಯನ ವರದಿಯನ್ನುತಯಾರು ಮಾಡಲುಟೆಂಡರ್ ಆಹ್ವಾನಿಸಿತ್ತು. ಈಗ ಟೆಂಡರ್ ಅಂತಿಮಗೊಳಿಸಲಾಗಿದೆ.ಬಿಎಂಆರ್‌ಸಿಎಲ್ ವರದಿ ಪ್ರಕಾರ ವಿಸ್ತರಿತ ಮಾರ್ಗದಲ್ಲಿಚಲ್ಲಘಟ್ಟ-ಬಿಡದಿ 15 ಕಿ. ಮೀ.ಸಿಲ್ಕ್ ಇನ್ಸಿಟಿಟ್ಯೂಟ್-ಹಾರೋಹಳ್ಳಿ 24 ಕಿ. ಮೀ.ಬೊಮ್ಮಸಂದ್ರ-ಅತ್ತಿಬೆಲೆ 11 ಕಿ. ಮೀ ಮಾರ್ಗವಿದೆ.

ಕಾಳೇನ ಅಗ್ರಹಾರ-ಕಾಡುಗೋಡಿಟ್ರೀ ಪಾರ್ಕ್ ವಯಾಜಿಗಣಿ, ಅನೇಕಲ್, ಅತ್ತಿಬೆಲೆ, ಸರ್ಜಾಪುರ ಮತ್ತು ವರ್ತೂರು (52.41 ಕಿ. ಮೀ.) ಹೊಸ ಮಾರ್ಗಕೂಡ ಸೇರಿದೆ. ಯಾವುದೇಯೋಜನೆಯ ಮೇಲೆ ಹೂಡಿಕೆ ಮಾಡುವ ಮೊದಲುಕಾರ್ಯಸಾಧ್ಯತೆಯಅಧ್ಯಯನ ವರದಿಯನ್ನುತಯಾರು ಮಾಡಲಾಗುತ್ತದೆ.ಯೋಜನೆಯ ಪ್ರಾಥಮಿಕಅಧ್ಯಯನ, ತಾಂತ್ರಿಕ, ಸಾಮಾಜಿಕ, ಆರ್ಥಿಕ ಮುಂತಾದ ಅಂಶಗಳು ಈ ವರದಿಯಲ್ಲಿ ಸೇರಿರುತ್ತವೆ. ಈ ವರದಿ ಅಂತಿಮಗೊಂಡರೆಯೋಜನೆಯಡಿಪಿಆರ್ ತಯಾರು ಮಾಡಲಾಗುತ್ತದೆಅದರಂತೆ ಸದ್ಯ ಈಗ ಬಿಡದಿಗೆ ಈ ಅಧ್ಯಯನಕ್ಕಾಗಿ ಬಿಎಂಆರ್ಸಿಎಲ್ ಟೆಂಡರ್ ಪ್ರಕ್ರಿಯೆ ನಡೆಸಿದೆ. ಕರ್ನಾಟಕ ಸರ್ಕಾರಕಾರ್ಯಸಾಧ್ಯತೆಯಅಧ್ಯಯನ ವರದಿಯಅನ್ವಯ ಬಿಡದಿಗೆ ನಮ್ಮ ಮೆಟ್ರೋಯೋಜನೆ ವಿಸ್ತರಣೆ ಮಾಡಲುಒಪ್ಪಿಗೆ ನೀಡುವ ಸಾಧ್ಯತೆಇದೆ.ಈ ವರದಿಗೆಒಪ್ಪಿಗೆ ಸಿಕ್ಕಿದರೆ ಬಿಎಂಆರ್‌ಸಿಎಲ್ ವಿಸ್ತೃತಯೋಜನಾ ವರದಿ (ಡಿಪಿಆರ್) ತಯಾರು ಮಾಡಲು ಪ್ರತ್ಯೇಕಟೆಂಡರ್‌ಕರೆಯಲಿದೆ. ಇನ್ನೂ ಬೆಂಗಳೂರು ನಗರದ ಹೊರವಲಯಕ್ಕೂಕೈಗಾರಿಕೆ, ಹೂಡಿಕೆಗಳನ್ನು ಆಕರ್ಷಿಸಲು ಸರ್ಕಾರ ಪ್ರಯತ್ನ ನಡೆಸುತ್ತಿದೆ.ಬಿಡದಿಯನ್ನುಕೈಗಾರಿಕಾ ಹಬ್ ಆಗಿ ಪರಿವರ್ತನೆ

## ಮೊದಲನೇ ಪುಟದಿಂದ...

ಮಾಡಿ ಬೆಂಗಳೂರು ನಗರದ ಮೇಲಿರುವಒತ್ತಡಕಡಿಮೆ ಮಾಡಲು ಮುಂದಾಗಿದೆ.ಇದೇ ಮಾದರಿಯಲ್ಲಿ ಬಿಎಂಆರ್ ಸಿಎಲ್ ಸಹ ಹೊರ ವಲಯಕ್ಕೆ ಮೆಟ್ರೋ ಸಂಪರ್ಕ ವಿಸ್ತರಣೆ ಮಾಡುವಚಿಂತನೆ ನಡೆಸುತ್ತಿದೆ.

ಬೆಂಗಳೂರು ನಗರದಿಂದ ಪ್ರತಿನಿತ್ಯ ಸಾವಿರಾರುಜನರು ಬಿಡದಿಗೆ ಪ್ರಯಾಣಿಸುತ್ತಾರೆ.ಬಿಡದಿಯಲ್ಲಿ ಬೃಹತ್‌ಕೈಗಾರಿಕಾ ಪ್ರದೇಶವಿದೆ.ಸುಮಾರು ಸಾವಿರಾರು ಸಂಖ್ಯೆಯ ನೌಕರರುಇಲ್ಲಿ ಕೆಲಸ ಮಾಡುತ್ತಿದ್ದು, ಈ ಮಾರ್ಗ ಸಿದ್ದವಾದರೆ ಬೆಂಗಳೂರಿನಿಂದ ಪ್ರತಿದಿನ ಸಂಚಾರ ನಡೆಸುವಜನರ ಅನುಕೂಲವಾಗಲಿದೆ. ಈ ಬಗ್ಗೆ ವಾಹನ ಸವಾರರು ಮತ್ತು ಸ್ಥಳೀಯ ನಿವಾಸಿಗಳು ಸಂತಸ ವ್ಯಕ್ತಪಡಿಸುತ್ತಾರೆ

ಒಟ್ನಲ್ಲಿ ಸದ್ಯ ಮೊದಲ ಹೆಜ್ಜೆಯಾಗಿಕಾರ್ಯ ಸಾಧ್ಯತೆಅಧ್ಯಯನಆರಂಭವಾಗಲಿದ್ದು ಆ ಬಳಿಕದ ಬೆಳವಣಿಗೆ ಬಿಡದಿ ಕನೆಕ್ಟಿವಿಟಿ ಬಗ್ಗೆ ಸ್ಪ?ಷ್ಟ ಮಾಹಿತಿ ಸಿಗಲಿದೆ.

### ಪಾದಯಾತ್ರೆಗೆ ಪ್ಲ್ಯಾನ್

ಕಾಂಗ್ರೆಸ್‌ನಬೆಂಗಳೂರುಟುಬಳ್ಳಾರಿ ಪಾದಯಾತ್ರೆಮೆಲುಕು 2010ರ ಜುಲೈನಲ್ಲಿ ಮುಂಗಾರು ಅಧಿವೇಶನದ ಸಂದರ್ಭದಲ್ಲಿ ಸದನದಲ್ಲಿರೆಡ್ಡಿ ಸಹೋದರರ ವಿರುದ್ಧ ದಿನೇಶ್ ಗುಂಡೂರಾವ್‌ಅಕ್ರಮ ಗಣಿಗಾರಿಕೆ ಆರೋಪ ಮಾಡಿದ್ದರು. ಇದರಿಂದ ಸದನದಲ್ಲಿ ಮಾತಿನ ಚಕಮಕಿ ಆರಂಭವಾಯಿತು. ಈ ವೇಳೆ ಅಂದಿನ ಬಿಜೆಪಿ ಶಾಸಕ ಟಿ.ಎಸ್‌ಸುರೇಶ್‌ಬಾಬು ಗುಂಡುರಾವ್ ವಿರುದ್ಧ ಹರಿಹಾಯ್ದರು. ಬಳ್ಳಾರಿಗೆ ಬಾನೋಡಿ ಕೊಳ್ಳುತ್ತೇವೆ ಎಂದು ಸವಾಲುಎಸೆದರು.

ಇದರಿಂದ ಸದನ ಮತ್ತಷ್ಟು ಗದ್ದಲಮಯವಾಯಿತು. ಬಳ್ಳಾರಿ ಶಾಸಕರು ತೋಳೇರಿಸಿಕೊಂಡು ವಿಪಕ್ಷ ನಾಯಕರ ಬಳಿ ಹೊರಟರು.ಇವರಲ್ಲಿ ಮೂವರುರೆಡ್ಡಿ ಸಹೋದರರೂಇದ್ದರು. ಆಗ ಸಿಟ್ಟಿಗೆದ್ದ ಸಿದ್ದರಾಮಯ್ಯ ತೋಳು ತಟ್ಟಿ 'ಬಳ್ಳಾರಿಗೆ ಬರ್ತೆವೆ, ರೆಡ್ಡಿ ಮನೆ ಮುಂದೆಯೇ ಮೆರವಣಿಗೆ ಮಾಡ್ತೆವೆ' ಎಂದು ಅಬ್ಬರಿಸಿ ಸವಾಲೆಸೆದರು. ನಂತರ ಸಿದ್ದರಾಮಯ್ಯ ನೇತೃತ್ವದಲ್ಲಿಕಾಂಗ್ರೆಸ್ ನಾಯಕರು ಬೆಂಗಳೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ ಮಾಡಿದರು. ನಂತರ ನಡೆದಿದೆಲ್ಲಇತಿಹಾಸ

ಇದೀಗ ಸಿದ್ದರಾಮಯ್ಯ ವಿರುದ್ಧ ಮುಡಾ ಹಗರಣದಲ್ಲಿ ಭಾಗಿಯಾದ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿರಾಜ್ಯ ಬಿಜೆಪಿ ನಾಯಕರು ಬೆಂಗಳೂರು ಟು ಬಳ್ಳಾರಿ ಮಾದರಿಯಲ್ಲಿ ಬೆಂಗಳೂರು ಟು ಮೈಸೂರಿಗೆ ಪಾದಯಾತ್ರೆ ನಡೆಸಲುಚಿಂತನೆ ನಡೆಸಿದ್ದಾರೆ.

### ಡಿಕೆಶಿ ಭಾಷಣದ ವೇಳೆ 'ಡಿ ಬಾಸ್ ..ಡಿ ಬಾಸ್' ಘೋಷಣೆ

ಆದರೆ ನಾವು ಕಾನೂನಿಗೆ ಗೌರವಕೊಡಬೇಕು.ದೇಶದ ಹಾಗೂ ನೆಲದ ಕಾನೂನು ಪಾಲಿಸಬೇಕು.ಅನ್ಯಾಯಯಾರಿಗೇಆಗಿದ್ದರೂ ನಾವೆಲ್ಲ ಸೇರಿ ನ್ಯಾಯಒದಗಿಸುವ ಕೆಲಸ ಮಾಡೋಣ.ನೊಂದ ವರೆಲ್ಲರಿಗೂತಾಯಿಚಾಮುಂಡೇಶ್ವರಿಅನುಗ್ರಹ ನೀಡಲಿ ಎಂದು ಆಶಿಸಿದರು.

ಉತ್ಸವಕುರಿತು ಮಾತನಾಡಿ, ಅಧಿವೇಶನಇದ್ದಕ ಾರಣಕಾರ್ಯಕ್ರಮಕ್ಕೆತಡವಾಗಿ ಬಂದಿದ್ದೇನೆ. ಕಳೆದ ಚುನಾವಣೆಯಲ್ಲಿಕಾಂಗ್ರೆಸ್‌ಗೆ ಮತಕೊಟ್ಟುಇಕ್ಬಾಲ್ ಗೆಲ್ಲಿಸಿದ್ದೀರಿ.ನಿಮ್ಮ ಪ್ರೀತಿ, ವಿಶ್ವಾಸ ಹೀಗೆ ಇರಲಿ.ನಿಮ್ಮ ಸೇವೆ ಮಾಡಲು, ರಾಮನಗರಕ್ಷೇತ್ರಅಭಿವೃದ್ಧಿ ಮಾಡಲು ಅವಕಾಶ ಕೊಟ್ಟಿದ್ದೀರಿ.ಡಿಕೆ ಸುರೇಶ್, ಬಾಲಕೃಷ್ಣ, ಇಕ್ಬಾಲ್ ಹುಸೇನ್ ಸೇರಿ ನಾನು ನಿಮ್ಮ ಸೇವೆಗೆ ಶ್ರಮಿಸುತ್ತೇನೆಎಂದು ತಿಳಿಸಿದರು.

### ಡೆಂಗ್ಯೂ ಏರಿಕೆ ಅಸಲಿ ಕಾರಣ ಪತ್ತೆ

ಸದ್ಯಯಾವ್ಯಾವ ಖಾಸಗಿ ಆಸ್ಪತ್ರೆಗಳು ಮೃತಪಟ್ಟವರಿಗೆ ಪಾಸಿಟಿವ್ ರಿಪೋರ್ಟ್ ನೀಡಿವೆ ಎಂಬ ಬಗ್ಗೆ ನಿಗಾ ಇಟ್ಟಿರುವ ಪಾಲಿಕೆ, ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಆರೋಗ್ಯ ಇಲಾಖೆಗೆ ಮನವಿ ಮಾಡಿದೆ.ಅಲ್ಲದೇಟೆಸ್ಟ್ ಮೂಲಕ ಜನರಿಗೆಆತಂಕ ಮೂಡಿಸದಂತೆ ಖಾಸಗಿ ಆಸ್ಪತ್ರೆಗಳಿಗೆ ಬಿಸಿ ಮುಟ್ಟಿಸಲು ಮುಂದಾಗಿದೆ.

ಒಟ್ಟಿನಲ್ಲಿಒಂದೆಡೆಡೆಂಗ್ಯೂ ಪ್ರಕರಣಏರಿಕೆಯಾಗುತ್ತಿದ್ದರೆ, ಮತ್ತೊಂದೆಡೆ ಕೆಲ ಖಾಸಗಿ ಆಸತ್ರೆಗಳ ಯಡವಟ್ಟಿನಿಂದಜನರು ಆತಂಕಪಡುವಂತಾಗಿದೆ. ಸದ್ಯ ಈಗ ಅಲರ್ಟ್‌ಆಗಿರುವ ಪಾಲಿಕೆ ಆರೋಗ್ಯಇಲಾಖೆಯ ಮೊರೆಹೋಗಿದ್ದು, ಪಾಸಿಟಿವ್ ರಿಪೋರ್ಟ್ ್ಕೊಟ್ಟ ಆಸ್ಪತ್ರೆಗಳ ಮೇಲೆ ಯಾವರೀತಿಕ್ರಮ ಕೈಗೊಳ್ಳಲಿದೆ ಎಂದುಕಾದುನೋಡಬೇಕಿದೆ.

# ಗ್ಯಾಸ್ ರೀಫಿಲಿಂಗ್ ಅಕ್ರಮ ದಂಧೆಗೆ ಕಠಿಣ ಕ್ರಮ

**ಕೋಲಾರ:** ಜಿಲ್ಲೆಯಲ್ಲಿ ಗ್ಯಾಸ್ ರೀಫಿಲಿಂಗ್ ದಂಧೆಯು ಅಕ್ರಮವಾಗಿ ಜರುಗುತ್ತಿದ್ದು, ಕಾನೂನು ಬಾಹಿರವಾಗಿ ಈ ಕೃತ್ಯ ಮಾಡುವವರಿಗೆ ನಿರ್ದಾಕ್ಷಿಣ್ಯವಾಗಿ ಕಠಿಣ ಕ್ರಮಕೈಗೊಳ್ಳಲಾಗುವುದೆಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಅಕ್ರಮ ರೀಫಿಲಿಂಗ್ ದಂದೆ ಕುರಿತು ಗ್ಯಾಸ್ ಏಜೆನ್ಸಿರವರೊಂದಿಗೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಮ್ಮ ಜಿಲ್ಲೆಯಲ್ಲಿ ಅಡುಗೆ ಅನಿಲ ದಂಧೆ ನಡೆಯಬಾರದು ಅಂತಹ ಪ್ರಕರಣ ಕಂಡುಬಂದರೆ ಯಾವುದೇ ಒತ್ತಾಯಕ್ಕೆ ಮಣಿಯದೆ ಅವರ ವಿರುದ್ಧ ಕಠಿಣ ಕ್ರಮಕೈಗೊಳ್ಳಲಾಗುವುದು ಹಾಗೂ ಏಜೆನ್ಸಿಯವರ ಲೈಸೆನ್ಸ್ ರದ್ದು ಮಾಡಲಾಗುವುದು ಮತ್ತು ಮಾಲೀಕರ ವಿರುದ್ಧ ವೈಯಕ್ತಿಕವಾಗಿ ಪ್ರಕರಣ ದಾಖಲು ಹಾಗೂ ಶಿಕ್ಷೆಗೆ ಗುರಿ ಮಾಡಲಾಗುವುದು ಎಂದರು. ಇಂತಹ ಕೃತ್ಯಗಳು ಸಮಾಜಕ್ಕೆ ಅಘಾತಕಾರಿ ಬೆಳವಣಿಗೆಯಾಗಿದ್ದು, ಸಾರ್ವಜನಿಕರು ಈ ಬಗ್ಗೆ ಮಾಹಿತಿ ತಿಳಿದೊಡನೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಬೇಕೆಂದರು.

ಖಾಸಗಿ ಏಜೆನ್ಸಿಯವರ ಕುರಿತು ಅವರ ಬಗ್ಗೆ ಸರ್ವೇ ಮಾಡಿ ಮಾಹಿತಿ ಪಡೆದು ಕ್ರಮಕೈಗೊಳ್ಳುವಂತೆ ಆಹಾರ ಇಲಾಖೆಯ ಉಪ ನಿರ್ದೇಶಕಿ ಲತಾ ಅವರಿಗೆ ತಿಳಿಸಿದರು. ಆಹಾರ ಇಲಾಖೆ ಹಾಗೂ ಆಯಿಲ್ ಕಂಪನಿಗಳು ಸಹಕಾರದೊಂದಿಗೆ ಈ ಕೆಲಸವನ್ನು ನಿರ್ವಹಿಸಬೇಕು ಮತ್ತು ಖಾಸಗಿ ಏಜೆನ್ಸಿಯವರ ಬಗ್ಗೆ ಕ್ರಮಕೈಗೊಳ್ಳಬೇಕೆಂದು ಗೃಹಬಳಕೆ ಸಿಲಿಂಡರ್ ಹಾಗೂ ಆಹಾರ ಇಲಾಖೆ ಎ.ಪಿ.ಎಲ್., ಬಿ.ಪಿ.ಎಲ್ ಹಾಗೂ ಅಂತ್ಯೋದಯ ಫಲಾನುಭವಿಗಳ ತುಲನೆ ಮಾಡಿದಾಗ ಗೃಹ ಬಳಕೆ ಅನಿಲ ದುರ್ಬಳಕೆ ಪ್ರಕರಣ ಕಂಡುಬರುತ್ತಿದೆ. ಈ ಕೆಲಸವನ್ನು ಇಂದಿನಿಂದಲೇ ಆರಂಭಿಸಬೇಕೆಂದರು. ಅನಧಿಕೃತ ಹಾಗೂ ಕಾನೂನು ಬಾಹಿರ ಚಟುವಟಿಕೆಗಳನ್ನು ಕಂಡುಹಿಡಿಯಲು ಜಾಗ್ರತದಳಗಳು ಕಟ್ಟುನಿಟ್ಟಾಗಿ ಕರ್ತವ್ಯ ನಿರ್ವಹಿಸಲು ಸೂಚಿಸಿದರು.

ಆಹಾರ ಇಲಾಖೆಯ ಉಪ ನಿರ್ದೇಶಕಿ ಲತಾ ಅವರು ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 4,56,095 ಗ್ಯಾಸ್ ಸಂಪರ್ಕಗಳಿವೆ. ತಾಲ್ಲೂಕುವಾರು ಬಂಗಾರಪೇಟೆಯಲ್ಲಿ 3 ಏಜೆನ್ಸಿಗಳಿದ್ದು, ಒಟ್ಟು 54851, ಕೋಲಾರದಲ್ಲಿ 8 ಏಜೆನ್ಸಿಗಳಿದ್ದು, ಒಟ್ಟು 1,34,450, ಮಾಲೂರುನಲ್ಲಿ 8 ಏಜೆನ್ಸಿಗಳಿದ್ದು, ಒಟ್ಟು 82,306, ಮುಳಬಾಗಿಲುನಲ್ಲಿ 6 ಏಜೆನ್ಸಿಗಳಿದ್ದು, ಒಟ್ಟು 63,459, ಶ್ರೀನಿವಾಸಪುರದಲ್ಲಿ 5 ಏಜೆನ್ಸಿಗಳಿದ್ದು, 48016 ಹಾಗೂ ಕೆ.ಜಿ.ಎಫ್‌ನಲ್ಲಿ 5 ಏಜೆನ್ಸಿಗಳಿದ್ದು, 73,013 ಗ್ಯಾಸ್ ಸಂಪರ್ಕವನ್ನು ಹೊಂದಿದ್ದಾರೆ ಎಂದು ತಿಳಿಸಿದರು.

ಕೋಲಾರದಲ್ಲಿ Agni, Go Gas, Total Gas, ಸೇರಿದಂತೆ 260 ಸಿಲಿಂಡರ್‌ಗಳು ಮಾಲೂರಲ್ಲಿ XT Rates-Total Energies ಸೇರಿದಂತೆ 300 ಸಿಲಿಂಡರುಗಳು ಕೆ.ಜಿ.ಎಫ್‌ನಲ್ಲಿ Home HP, HP Commercial, BPC and Jyothi ಸೇರಿದಂತೆ 136 ಹಾಗೂ ಕೋಲಾರದಲ್ಲಿ Indane, HP, BPC Jyothi ಸೇರಿದಂತೆ 23 ಪ್ರಕರಣಗಳನ್ನು ಅಂದರೆ ಜಿಲ್ಲೆಯಲ್ಲಿ ಒಟ್ಟು 719 ಪ್ರಕರಣಗಳನ್ನು ಆಯಾಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಿಸಲಾಗಿದೆಯೆಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕುಗಳು 41 ಏಜೆನ್ಸಿ ಮಾಲೀಕರು, ಇಂಡಿಯನ್ ಆಯಿಲ್, ಎಚ್.ಪಿ, ಬಿ.ಪಿ ಗ್ಯಾಸ್ ಕಂಪನಿಯ ಅಧಿಕಾರಿಗಳು ಸೇರಿದಂತೆ ಮತ್ತು ಆಹಾರ ಇಲಾಖೆಯವರು ಉಪಸ್ಥಿತರಿದ್ದರು.

# ರೇಬಿಸ್ ಲಸಿಕೆ ಸೆ.28 ರೊಳಗೆ ಶೇ.100 ಸಾಧಿಸಲು ಗುರಿ

**ಕೋಲಾರ:** ಸೆಪ್ಟೆಂಬರ್ 28ರಂದು ರೇಬಿಸ್ ದಿನಾಚರಣೆಯಿದ್ದು, ಅಷ್ಟರಲ್ಲಿ ಜಿಲ್ಲೆಯಲ್ಲಿ ಶೇ.100 ರೇಬಿಸ್ ಲಸಿಕೆ ಹಾಕುವುದನ್ನು ಪೂರ್ಣಗೊಳಿಸಬೇಕು ಹಾಗೂ ಶಾಲಾ ಕಾಲೇಜುಗಳು, ಕೊಳಚೆ ಪ್ರದೇಶ ಹಾಗೂ ಮೋರಾರ್ಜಿ ವಸತಿ ಶಾಲೆಗಳಲ್ಲಿ ಅಭಿಯಾನ ಕೈಗೊಳ್ಳುವಂತೆ ಆರೋಗ್ಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.



ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಜಿಲ್ಲಾ ಸಮಗ್ರ ರೋಗಗಳ ಕಣ್ಗಾವಲು ಘಟಕಜ ಜಿಲ್ಲಾ ಸರ್ವೇಕ್ಷಣ ಸಮಿತಿಯಿಂದ ಆಯೋಜಿಸಿದ ಸಭೆಯನ್ನುದ್ದೇಶಿಸಿ ಮಾತನಾಡಿ ಜಿಲ್ಲೆಯಲ್ಲಿ ನಾಯಿಗಳ ಹಾವಳಿ ಎಚ್ಚರವಾಗಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗದೆ ನಗರಸಭೆ ಆಯುಕ್ತರು, ಪಶುವೈದ್ಯಾಧಿಕಾರಿ ಮತ್ತು ಮುಖ್ಯ ಪ್ರಾಣಿ ನಿರೀಕ್ಷಕರು ಹೊಣೆಗಾರರಾಗುತ್ತಾರೆಂದು ತಿಳಿಸಿದರು.

ಈ ಲಸಿಕೆ ಬಗ್ಗೆ ಸಾಮಾಜಿಕ ಜಾಲತಾಣ ವಾಟ್ಸಪ್‌ಗಳಲ್ಲಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಇಂದಿನಿಂದಲೇ ಆರಂಭಿಸಿ ಎಂದರು. ಮಾರುಕಟ್ಟೆಗಳಲ್ಲಿ, ಚಿಕನ್, ಮಟನ್ ಅಂಗಡಿಗಳ ಸುತ್ತಮುತ್ತಲು ತ್ಯಾಜ್ಯ ಶೇಖರಣೆಯಾಗದಂತೆ ಎಚ್ಚರವಹಿಸಬೇಕೆಂದು ನಗರಸಭೆ ಅಧಿಕಾರಿಗಳಿಗೆ ಸೂಚಿಸಿದರು. ಈ ಅಂಗಡಿಯವರಿಗೆ ಎಲ್ಲೆಂದರಲ್ಲಿ ಕಸ ಹಾಕದಂತೆ ಎಚ್ಚರಿಕೆ ನೀಡಿ ಸ್ವಚ್ಛತೆ ಕಾಪಾಡಲು ಜಾಗೃತಿ ಮೂಡಿಸಬೇಕೆಂದರು. ನಾಯಿಗಳ ಹಾವಳಿ ತಡೆಗಟ್ಟಲು ನಗರಸಭೆ ಪಶು ಇಲಾಖೆ ಅಧಿಕಾರಿಗಳು ಕರ್ತವ್ಯ ನಿರ್ವಹಿಸಿ ಸಾಮಾಜಿಕ ಸಮಸ್ಯೆಗೆ ಪರಿಹರಿಸಬೇಕೆಂದರು. ಜಿಲ್ಲೆಯಾದ್ಯಂತ 189 ಜನಕ್ಕೆ ಹಾವು ಕಡಿತಕ್ಕೆ ಒಳಗಾಗಿದ್ದು, ಒಬ್ಬರು ಸಾವನ್ನಪ್ಪಿದ್ದರು ಕಂಡು ಬಂದಿದೆಯೆಂದು ಡಾ. ಚಾರಿಣಿ ಅವರು ತಿಳಿಸಿದರು. ಭಾರತ ಸರ್ಕಾರವು ಹಾವು ಕಡಿತ ತಡೆಗಟ್ಟುವಿಕೆ ಹಾಗೂ ನಿಯಂತ್ರಣ ಕಾರ್ಯಕ್ರಮವನ್ನು ಪ್ರಾರಂಭಿಸಿದ್ದು, ರಾಜ್ಯಕ್ಕೆ 2023-24ರಲ್ಲಿ ಈ ಕಾರ್ಯಕ್ರಮಕ್ಕೆ ತರಬೇತಿ ಹಾಗೂ ಮೇಲ್ವಿಚಾರಣೆ ಹಾಗೂ ಸರ್ವೇಕ್ಷಣಗಾಗಿ ಅನುದಾನ ನೀಡಿ ಕ್ರಮಕೈಗೊಂಡಿರುತ್ತದೆ ಎಂದರು. ಅಂಗನವಾಡಿ ಹಾಸ್ಟೆಲ್‌ಗಳಂತಹ ಸಂಗ್ರಹಣಾ ಜಾಗಗಳಲ್ಲಿ ಈ ಇಲಿಗಳ ಕಾಟ ಜಾಸ್ತಿಯಾಗಿರುತ್ತದೆ. ಆದ್ದರಿಂದ ಸಂಗ್ರಹಣೆ ಅಥವಾ ಶೇಖರಣೆ ಮಾಡುವ ಸ್ಥಳಗಳನ್ನು ಸ್ವಚ್ಛವಾಗಿ ಇಡಬೇಕೆಂದರು. ಯಾವುದೇ ಪ್ರಾಣಿಗಳು ಕಚ್ಚಿದರೆ ತಕ್ಷಣ ತಂದೆ-ತಾಯಿ, ಪೋ?ಕರು ಅಥವಾ ವೈದ್ಯರಿಗೆ ವರದಿ ಮಾಡುವಂತೆ ಮನವಿ ಮಾಡಿದರು. ಎಲ್ಲಾ ಇಲಾಖೆಗಳು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಿದಾಗ ಈ ಪ್ರಾಣಿ ಕಡಿತದ ಪರಿಣಾಮಗಳನ್ನು ಹೊಡೆದೊಡಿಸಬಹುದು ಎಂದು ಡಾ.ಚಾರಣಿ ಅವರು ತಿಳಿಸಿದರು.

ಸಭೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಗದೀಶ್, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ನಾರಾಯಣಸ್ವಾಮಿ, ಆರೋಗ್ಯಾಧಿಕಾರಿಗಳು ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಯುವನಿಧಿ ಯೋಜನೆ: ದಾಖಲೆಗಳ ಭೌತಿಕ ಪರಿಶೀಲನೆ

**ಕೋಲಾರ:** ರಾಜ್ಯ ಸರ್ಕಾರದ ಪಂಚಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆಯು ಪದವಿ, ಸ್ನಾತ್ತಕೋತ್ತರ ಪದವಿ ಮತ್ತು ಡಿಪ್ಲೋಮೋ ವ್ಯಾಸಂಗ ಮಾಡಿ 2023 ಹಾಗೂ 2024ನೇ ಸಾಲಿನಲ್ಲಿ ತೇರ್ಗಡೆಯಾಗಿರುವ ಅರ್ಹ ನಿರುದ್ಯೋಗಿಗಳಿಗೆ ನಿರುದ್ಯೋಗಿ ಭತ್ಯೆ ನೀಡುವ ಯೋಜನೆಯಾಗಿದ್ದು ಪದವೀಧರ ನಿರುದ್ಯೋಗಿಗಳಿಗೆ ಪ್ರತಿ ತಿಂಗಳು 3000/- ಹಾಗೂ ಡಿಪ್ಲೋಮೋ ಪಡೆದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಪ್ರತಿ ತಿಂಗಳು 1500/- ರೂಗಳನ್ನು ನೇರ ನಗದನ್ನು ಬ್ಯಾಂಕ್ ಖಾತೆಗೆ ಜಮಾ ಮಾಡುವ ಯೋಜನೆಯಾಗಿದೆ. ನಿರುದ್ಯೋಗಿ ಅಭ್ಯರ್ಥಿಗಳು 2023-24 ನೇ ಸಾಲಿನಲ್ಲಿ ತೇರ್ಗಡೆಯಾಗಿ ಫಲಿತಾಂಶ ನಂತರ ನಿರುದ್ಯೋಗಿಯಾಗಿ 180 ದಿನಗಳನ್ನು ಪೂರೈಸಿದವರು ಸದರಿ ಯೋಜನೆಗೆ ನೇರ ನಗದು ವರ್ಗಾವಣೆಯನ್ನು ಪಡೆಯಲು ಅರ್ಹರಾಗಿರುತ್ತಾರೆ. ಪದವಿ ಹಾಗೂ ಡಿಪ್ಲೋಮೋ ನಂತರ ಯಾವುದೇ ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವವರು ಹಾಗೂ ಸ್ವಯಂ ಉದ್ಯೋಗದಲ್ಲಿ ತೊಡಗಿಕೊಂಡವರು ಮತ್ತು ಉನ್ನತ ವ್ಯಾಸಂಗ ಮುಂದುವರೆಸುತ್ತಿರುವ ಅಭ್ಯರ್ಥಿಗಳು ಈ ಯೋಜನೆಗೆ ಅರ್ಹರಿರುವುದಿಲ್ಲ. ಅಭ್ಯರ್ಥಿಗಳು ಕರ್ನಾಟಕ ಒನ್, ಬಾಪೂಜಿ ಸೇವಾ ಕೇಂದ್ರ, ಮತ್ತು ಗ್ರಾಮ ಒನ್ ಕೇಂದ್ರಗಳಿಗೆ ಭೇಟಿ ನೀಡಿ




ಸೇವಾ ಸಿಂಧು ಪೋರ್ಟಲ್‌ನಲ್ಲಿ ಯಾವುದೇ ಶುಲ್ಕವನ್ನು ನೀಡದೇ ಈ ಯೋಜನೆಗೆ ಅರ್ಜಿ ಸಲ್ಲಿಸಬಹುದು.

ಅಭ್ಯರ್ಥಿಗಳು ಈ ಪ್ರಯೋಜನವನ್ನು ಎರಡು ವರ್ಷಗಳ ಕಾಲ ನಿರಂತರವಾಗಿ ಪಡೆಯಲು ಪ್ರತಿ ತಿಂಗಳು ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಾಗಿಲ್ಲವೆಂದು ಸ್ವಯಂ ಘೋಷಣೆಯನ್ನು ಪ್ರತಿ ತಿಂಗಳು 25ನೇ ತಾರೀಖಿನೊಳಗಾಗಿ ಮಾಡಬೇಕು. ಸೇವಾ ಸಿಂಧು ಪೋರ್ಟಲ್‌ನಲ್ಲಿ ಸ್ವಯಂ ಘೋಷಣೆ ಪ್ರಮಾಣ ಪತ್ರ, ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಈ ಯೋಜನೆಯಲ್ಲಿ ನೋಂದಾಯಿಸಿಕೊಂಡಿರುವ ಕೆಲವು ಅಭ್ಯರ್ಥಿಗಳ ರಹವಾಸಿ(ವಾಸಸ್ಥಳ ದೃಢೀಕರಣ) ಪರಿಶೀಲನೆ ಬಾಕಿ ಇರುವುದರಿಂದ ಇದುವರೆಗೆ ನಗದು ವರ್ಗಾವಣೆಯಾಗಿರುವುದಿಲ್ಲ. ಅಂತಹ ಅಭ್ಯರ್ಥಿಗಳು ತಾವು ಅರ್ಜಿ ಸಲ್ಲಿಸುವಾಗ ಅಪ್ಲೋಡ್ ಮಾಡಿರುವ ಅಂಕಪಟ್ಟಿಗಳ ಆಧಾರದ ಮೇಲೆ ಎಲ್ಲ ಮೂಲ ದಾಖಲೆಗಳೊಂದಿಗೆ ಖುದ್ದಾಗಿ ಸಂಬಂಧಿಸಿದ ಕಛೇರಿಗಳನ್ನು ಸಂಪರ್ಕಿಸಿ ತಮ್ಮ ರಹವಾಸಿ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ.

ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳು ಸಾರ್ವಜನಿಕ ಶಿಕ್ಷಣ ಇಲಾಖೆಯ(ಡಿ.ಡಿ.ಪಿ.ಐ) ಉಪನಿರ್ದೇಶಕರು ಕಛೇರಿ, ಕೋಲಾರ. ಪಿಯುಸಿ ಅಂಕಪಟ್ಟಿ ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಛೇರಿ(2ನೇ ಮಹಡಿ, ಜಿಲ್ಲಾಧಿಕಾರಿಗಳ ಕಛೇರಿ) ಕೋಲಾರ ಹಾಗೂ ಪದವಿ, ಸ್ನಾತ್ತಕೋತ್ತರ ಪದವಿ ಮತ್ತು ಡಿಪ್ಲೋಮೋ ಅಂಕಪಟ್ಟಿ ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳು ಕೋಲಾರ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಗೆ, ಕಛೇರಿ ವೇಳೆಯಲ್ಲಿ ಭೇಟಿ ನೀಡಿ ದಾಖಲೆಗಳನ್ನು ಪರಿಶೀಲಿಸಿಕೊಳ್ಳಲು ಮಾನ್ಯ ಜಿಲ್ಲಾಧಿಕಾರಿಗಳು ಯುವನಿಧಿ ಯೋಜನೆಯ ಫಲಾನುಭವಿಗಳಲ್ಲಿ ಮನವಿ ಮಾಡಿದ್ದಾರೆ.

# ಜನಸಂಖ್ಯೆ ನಿಯಂತ್ರಣ ಮಾಡದಿದ್ದರೆ ಭವಿಷ್ಯಕ್ಕೆ ಅಪಾಯ

**ಮಂಡ್ಯ:** ಜನಸಂಖ್ಯಾ ಹೆಚ್ಚಳವು ದಿನೇ ದಿನೇ ಹೆಚ್ಚುತ್ತ ಹೋಗುತ್ತಲೇ ಇದೇ, ಇದರ ನಿಯಂತ್ರಣ ಮಾಡದಿದ್ದರೆ ಮುಂದಿನ ಪೀಳಿಗೆಗೆ ಮೂಲಭೂತದ ಸೌಕರ್ಯದ ಕೊರತೆ ಕಟ್ಟಿಟ್ಟ ಬುತ್ತಿ ಎಂದು ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಬೆಟ್ಟಸ್ವಾಮಿ ಅವರು ತಿಳಿಸಿದರು.

ಮಂಡ್ಯ ತಾವರೆಗೆರೆಯ ಎಸ್.ಪಿ ಸಮುದಾಯ ಭವನದಲ್ಲಿ ನಡೆದ ವಿಶ್ವ ಜನಸಂಖ್ಯಾ ದಿನಾಚರಣೆ ಕಾರ್ಯಕ್ರಮವನ್ನು ಕುರಿತು ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಜನಸಂಖ್ಯೆ ಬೆಳೆದಂತೆ ಭೂಮಿ ಬೆಳೆಯುವುದಿಲ್ಲ, ಜನಸಂಖ್ಯೆಯ ಪ್ರಮಾಣ ಹೆಚ್ಚುತ್ತಾ ಹೋದಂತೆ ಜನರಿಗೆ ಬದುಕಲು ಭೂಮಿಯ ಮೇಲೆ ಜಾಗವು ಕೂಡ ಸಿಗುವುದಿಲ್ಲ ಎಂದು ಹೇಳಿದರು.

ಜನಸಂಖ್ಯೆ ನಿಯಂತ್ರಣ ಮಾಡುವುದಕ್ಕೋಸ್ಕರ ಜನರಿಗೆ ಜನಸಂಖ್ಯಾ ಹೆಚ್ಚಳದಿಂದ ನಮ್ಮ ದೇಶದ ಪರಿಸ್ಥಿತಿ ಮುಂದಿನ ದಿನಗಳಲ್ಲಿ ಯಾವ ರೀತಿ ಇರುತ್ತದೆ ಎಂದು ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಮಾಡಬೇಕು. ಇದರಿಂದ ಜನರ ಮನಸ್ಸಿಗೂ ಅರಿವು ಮೂಡಿಸಿದಂತಾಗುತ್ತದೆ ಜೊತೆಗೆ ಎಷ್ಟೋ ಬಾಲ್ಯ ವಿವಾಹಗಳು ಸಹ ಕಡಿಮೆ ಆಗುತ್ತದೆ ಎಂದು ಹೇಳಿದರು.

ಎಲ್ಲದಕ್ಕಿಂತ ಹೆಚ್ಚಾಗಿ ಜನಸಂಖ್ಯಾ ಪ್ರಮಾಣವನ್ನು ಕಡಿಮೆ ಮಾಡಬೇಕು ಎಂದರೆ ಹೊಸದಾಗಿ ಮದುವೆಯಾದವರುಈಚಿಟಟಥಿ ರಿಟಚಿಟಿಟಿರಿಆಲೋಚನೆ ಇಟ್ಟುಕೊಂಡರೆ ಬಹಳ ಒಳಿತಗಾವುದು ಇದರಿಂದ ಜನಸಂಖ್ಯೆ ಪ್ರಮಾಣವನ್ನು ಒಂದು ಹಂತಕ್ಕೆ ಕಡಿಮೆ ಮಾಡಬಹುದು ಎಂದು ಹೇಳಿದರು.

ಕಾರ್ಯಕ್ರಮದ ಉದ್ಘಾಟನೆ ಮಾಡಿ ಮಾತನಾಡಿದ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಉಪಾಧ್ಯಕ್ಷರಾದ ಮೀರಾಶಿವಲಿಂಗಯ್ಯಅವರು ವಿಶ್ವದ ಜನಸಂಖ್ಯೆಯು 500 ಕೋಟಿ ತಲುಪಿದ ದಿನದಂದು ವಿಶ್ವ ಜನಸಂಖ್ಯಾ ದಿನಾಚರಣೆಯನ್ನಾಗಿ ಆಚರಿಸಲು ವಿಶ್ವ ಸಂಸ್ಥೆಯ ಅಂಗ ಸಂಸ್ಥೆಯಾದಗಿಓಖಿಅಇಈತೀರ್ಮಾನಿಸಿ ಪ್ರತಿ ವರ್ಷ ಜುಲೈ 11 ರಂದು ವಿಶ್ವ ಜನಸಂಖ್ಯಾ ದಿನಾಚರಣೆಯನ್ನು ಆಚರಿಸಲು ತೀರ್ಮಾನಿಸಲಾಯಿತು ಎಂದು ಹೇಳಿದರು.

ಹೆಚ್ಚುತ್ತಿರುವ ಜನಸಂಖ್ಯಾ ಮಟ್ಟವನ್ನು ಕಡಿಮೆ ಮಾಡಬೇಕು ಮತ್ತು ಜನಸಂಖ್ಯಾ ಹೆಚ್ಚಳದಿಂದ ಉಂಟಾಗುವ ಸಮಸ್ಯೆಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಉದ್ದೇಶದಿಂದ ಪ್ರತಿವರ್ಷ ಘೋಷವಾಕ್ಯ ಗಳೊಂದಿಗೆ ಮತ್ತು ಜನರಲ್ಲಿ ಅರಿವು ಮೂಡಿಸುವ ಸಲುವಾಗಿ ವಿಶ್ವ ಜನಸಂಖ್ಯಾ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಎಷ್ಟೋ ಹೆಣ್ಣುಮಕ್ಕಳು ಸಾಧನೆ ಮಾಡಬೇಕು ಎಂಬ ಉದ್ದೇಶದಿಂದ ಇರುತ್ತಾರೆ ಇದಕ್ಕೆ ಮನೆಯಲ್ಲಿ ಪೋಷಕರು ಸಹಕಾರ ನೀಡಿ ಅವರ ಸಾಧನೆಗೆ ಬೆಂಬಲ ನೀಡಬೇಕು ಇಲ್ಲವಾದಲ್ಲಿ ಹೆಣ್ಣು ಮಕ್ಕಳ ಜೀವನ ಮದುವೆ, ಸಂಸಾರ ಎಂಬ ಜಂಜಾಟದಲ್ಲೇ ಮುಳುಗಿ ಹೋಗುತ್ತದೆ ಇದರಿಂದ ಅವರ ಸಾಧನೆಯ ಮಟ್ಟವು ಕುಂಠಿತವಾಗುತ್ತದೆ ಮತ್ತು ಅವರ ಮನಸ್ಸಿನ ಮೇಲೂ ಪ್ರಭಾವ ಬೀರುತ್ತದೆ ಎಂದು ಎಚ್ಚರಿಸಿದರು.

ಈ ಪ್ರಪಂಚ ಎನ್ನುವುದು ಬಾಡಿಗೆ ಮನೆ ಇದ್ದಂತೆ ಅದರಲ್ಲಿ ನಾವೆಲ್ಲರೂ ಬಾಡಿಗೆಗೆ ಬಂದಿರುವವರು ನಮ್ಮ ಬಾಡಿಗೆ ಮನೆಯನ್ನು ಒಂದು ದಿನ ಖಾಲಿ ಮಾಡಿ ಹೋಗಲೇ ಬೇಕು ಆದ್ದರಿಂದ ಮುಂದಿನ ಪೀಳಿಗೆಗೆ ಯಾವುದೇ ರೀತಿಯ ತೊಂದರೆ ಅಡಚಣೆ ಆಗದ ರೀತಿ ನಮ್ಮ ದೇಶವನ್ನು ಕಟ್ಟಿ ಕೊಟ್ಟು ಹೋಗಬೇಕು ಎಂದು ಹೇಳಿದರು.

ಪ್ರತಿ ವರ್ಷ ವಿಶ್ವ ಜನಸಂಖ್ಯಾ ದಿನಾಚರಣೆಯ ಅಂಗವಾಗಿ ವಿವಿಧ ಘೋಷವಾಕ್ಯ ಗಳೊಂದಿಗೆ ಆಚರಿಸಲಾಗುವುದು ಅದರಂತೆ ಈ ವರ್ಷವೂ ಕೂಡ ''ಸರಿಯಾದ ಸಮಯದಲ್ಲಿ ಗರ್ಭಧಾರಣೆ ಹಾಗೂ ಅಂತರ ಕಾಪಾಡುವುದರಿಂದ ತಾಯಿ ಮತ್ತು ಮಗುವಿನ ಆರೋಗ್ಯ ಉತ್ತಮಗೊಳಿಸುವುದು'' ಎಂಬ ಧೇಯ ವಾಕ್ಯ ಮತ್ತು ''ಅಭಿವೃದ್ಧಿ ಹೊಂದಿದ ಭಾರತ ಹೊಸ ಗುರುತಿಗಾಗಿ ಕುಟುಂಬ ಯೋಜನೆ ಅಳವಡಿಕೆ ಪ್ರತಿ ದಂಪತಿಗಳ ಹೆಮ್ಮೆ'' ಎಂಬ ಘೋಷವಾಕ್ಯದಂತೆ ಆಚರಣೆ ಮಾಡಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆ ಅಂಗವಾಗಿ ಜನರಲ್ಲಿ ಅರಿವು ಜಾಗೃತಿ ಮೂಡಿಸುವ ಸಲುವಾಗಿ ಕಾಲೇಜು ವಿದ್ಯಾರ್ಥಿಗಳಿಗೆ ವಿಡೀಯೋ ರೀಲ್ಸ್, ಕಿರುಚಿತ್ರ, ಪೋಸ್ಟರ್ ರಚನೆ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು ಅದರಲ್ಲಿ ವಿಜೇತರಾದವರಿಗೆ ಬಹುಮಾನವನ್ನು ವಿತರಿಸಲಾಯಿತು.

ಕಾರ್ಯಕ್ರಮದ ಕೊನೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯ್ಕೆಗಳ ಸ್ವಾತಂತ್ರ್ಯ ಎಂಬ ವಾಕ್ಯದೊಂದಿಗೆ ಮಕ್ಕಳ ನಡುವೆ ಅಂತರಕ್ಕಾಗಿ, ತಾತ್ಕಾಲಿಕ ವಿಧಾನಗಳ ಆಯ್ಕೆ ಎಂಬ ಪೋಸ್ಟರ್ ಅನ್ನು ಮತ್ತು ವಿಶ್ವ ಜನಸಂಖ್ಯಾ ದಿನಾಚರಣೆ ಕ್ಯಾಲೆಂಡರ್ ನ್ನು ಅನಾವರಣಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಮಂಡ್ಯ ಮಿಮ್ಸ್ ಜಿಲ್ಲಾ ಶಸ್ತ್ರಚಿಕಿತ್ಸಕರು ಡಾ. ಗಾಯಿತ್ರಿ.ಆರ್, ಜಿಲ್ಲಾ ತರಬೇತಿ ಕೇಂದ್ರದ ಪ್ರಾಂಶುಪಾಲರು ಮಮತ ಹೆಚ್.ಎಂ, ಜಿಲ್ಲಾ ರೋಗವಾಹಕ ಆಶ್ರಿತರೋಗ ನಿಯಂತ್ರಣಾಧಿಕಾರಿ ಡಾ.ಕಾಂತರಾಜ್.ಎನ್, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಎಂ.ಎನ್ ಆಶಾಲತಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಕುಮಾರ್ ಹೆಚ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಅನಿಲ್ ಕುಮಾರ್, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಅಂಕಿತ ಅಧಿಕಾರಿ ಡಾ.ಶಶಿಧರ್ ಕೆ.ಆರ್, ತಾಲ್ಲೂಕು ಆರೋಗ್ಯಾಧಿಕಾರಿ ಜವರೇಗೌಡ ಕೆ.ಬಿ, ಸಮುದಾಯ ವೈದ್ಯ ಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕ ಡಾ.ವಿನಯ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು




### ಸಮಸ್ಯೆಗಳು

**ಆಹಾರ, ನೀರು, ಬಟ್ಟೆ, ವಸತಿ ಮೂಲಭೂತ ಸೌಕರ್ಯ, ಖನಿಜಗಳ ಕೊರತೆ, ಸಸ್ಯ ಸಂಪತ್ತಿನ ಕೊರತೆ, ಅರಣ್ಯ ನಾಶ, ಬಡತನ ಹೆಚ್ಚಳವಾಗುವುದು, ಶಿಕ್ಷಣ, ಆರೋಗ್ಯ ಸೇವೆಗಳು ಮತ್ತು ಇತರೆ ಸಂಪನ್ಮೂಲ ಕೊರತೆ ಉಂಟಾಗುತ್ತದೆ. ಹೆಚ್ಚಿನ ವಾಯು ಮಾಲಿನ್ಯ, ಜಲ ಮಾಲಿನ್ಯ, ಶಬ್ಧ ಮಾಲಿನ್ಯ, ಸಾಮಾಜಿಕ ಅಸಮಾನತೆ, ನಗರ ವ್ಯಾಪ್ತಿಯ ಕೊಳಚೆ ಪ್ರದೇಶಗಳ ಉಲ್ಬಣವಾಗುವುದು, ವಸತಿ ಮತ್ತು ಸಾರಿಗೆ ವ್ಯವಸ್ಥೆಯ ಮೇಲೆ ಒತ್ತಡ ಉಂಟಾಗುವುದು, ಸಾಂಕ್ರಾಮಿಕ ರೋಗಗಳು, ಏಡ್ಸ್ ಇತ್ಯಾದಿ ರೋಗಗಳು ಹರಡುತ್ತವೆ.**

### ಮಾರ್ಗಗಳು

**ಮದುವೆಯಾಗಲು ಗಂಡಿಗೆ 21 ವರ್ಷ ಮತ್ತು ಹೆಣ್ಣಿಗೆ 18 ವರ್ಷ ತುಂಬಿರಬೇಕು, ಮದುವೆಯಾದ ನಂತರ ಕನಿಷ್ಠ 3 ವರ್ಷಗಳವರೆಗೂ ಮೊದಲನೇ ಮಗುವನ್ನು ಪಡೆಯಬಾರದು, ಜನನಗಳ ನಡುವೆ ಕಡೇ ಪಕ್ಷ 4 ವರ್ಷಗಳಾದರೂ ಅಂತರವಿರಬೇಕು, ಎಲ್ಲಾ ಅರ್ಹ ದಂಪತಿಗಳು ಕುಟುಂಬ ಕಲ್ಯಾಣದ ವಿಧಾನಗಳನ್ನು ಅನುಸರಿಸಿ ಚಿಕ್ಕ ಕುಟುಂಬವನ್ನು ರೂಪಿಸಿಕೊಳ್ಳಬೇಕು. ಪೋಷಕರು ತಮ್ಮ ಹೆಣ್ಣುಮಕ್ಕಳ ಶಿಕ್ಷಣಕ್ಕೆ ಹೆಚ್ಚು ಉತ್ತೇಜನ ನೀಡಬೇಕು, ಕುಟುಂಬ ಕಲ್ಯಾಣ ಕಾರ್ಯಕ್ರಮದಲ್ಲಿ ಪುರುಷರ ಸಹಭಾಗಿತ್ವವು ಒಳಗೊಂಡಂತೆ ಸಮುದಾಯದ ಸಹಭಾಗಿತ್ವ ಬಹಳ ಪ್ರಾಮುಖ್ಯವಾದುದು, ಯುವ ಜನತೆಯ ಸಬಲೀಕರಣ ಮತ್ತು ಶಿಕ್ಷಣ ಜನಸಂಖ್ಯಾ ನಿಯಂತ್ರಣ ಕಾರ್ಯಕ್ರಮ ನಿರಂತರವಾಗಿರಬೇಕು.**

## ತಂಬಾಕು ಸೇವನೆ ದುಷ್ಪರಿಣಾಮ ಕುರಿತು ಜಾಗೃತಿ ಮೂಡಿಸಿ

**ಕೋಲಾರ:** ಶ್ರೀಜಿಲ್ಲೆಯಲ್ಲಿ ಕೋಪ್ಟಾ ಕಾಯ್ದೆಯಡಿ 1189 ಪ್ರಕರಣಗಳು ದಾಖಲಾಗಿದ್ದು, ಇದರಿಂದ 1,20,000 ರೂ.ಗಳ ದಂಡ ವಸೂಲಿ ಮಾಡಲಾಗಿದೆಯೆಂದು ಜಿಲ್ಲಾಧಿಕಾರಿ ಅಕ್ರಂ ಪಾಷಾ ಅವರು ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಸರ್ವೇಕ್ಷಣಾ ಸಮಿತಿ ಸಭೆ ಮತ್ತು ತಂಬಾಕು ನಿಯಂತ್ರಣ ಕುರಿತು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಏಪ್ರಿಲ್-24 ರಿಂದ ಜೂನ್-2024ರ ವರೆಗೆ ಆರೋಗ್ಯ ಇಲಾಖೆಯಿಂದ ಸೆಕ್ಷನ್ 4, 6ಎ ಮತ್ತು 6ಬಿ ಪ್ರಕಾರ 224 ಪ್ರಕರಣಗಳಲ್ಲಿ 12,300 ರೂ.ಗಳು ಪೊಲೀಸ್ ಇಲಾಖೆಯಿಂದ 965 ಪ್ರಕರಣಗಳಲ್ಲಿ 88,050 ರೂ.ಗಳು ಹಾಗೂ ಕೆ.ಎಸ್.ಆರ್.ಟಿ.ಸಿಯಿಂದ 59 ಪ್ರಕರಣಗಳಲ್ಲಿ 12,450 ರೂ.ಗಳ ದಂಡವನ್ನು ಸಂಗ್ರಹಿಸಲಾಗಿದೆ ಎಂದರು. ಮೇ-31 ವಿಶ್ವ ತಂಬಾಕು ದಿನಾಚರಣೆ ಪ್ರಯುಕ್ತ ವಿವಿಧ ಶಾಲಾ-ಕಾಲೇಜು ವಿದ್ಯಾ ಸಂಸ್ಥೆ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಎಂದು ಡಾ. ಚಾರಣಿ ತಿಳಿಸಿದರು. ಗುಲಾಬಿ ಜಾಗೃತಿ ಗುಂಪು ಚರ್ಚೆ ಕಾರ್ಯಕ್ರಮ ತರಬೇತಿ ಕಾರ್ಯಾಗಾರಗಳನ್ನು ಸಹ ನಮ್ಮ ಇಲಾಖೆಯಿಂದ ಆಯೋಜಿಸಲಾಗಿತ್ತು ಎಂದು ತಿಳಿಸಿದರು. ತಂಬಾಕು ಮಾರಾಟ ಮಾಡುವ ಪರವನಾಗಿ ಇಲ್ಲದವರು ತಂಬಾಕನ್ನು ಮಾರಾಟ ಮಾಡಬಾರದು ಎಂದು ನಿಯಮವಿದ್ದರೂ ನಿಯಮ ಬಾಹಿರವಾಗಿ ಮಾರಾಟ ಮಾಡುತ್ತಿರುವುದು ಕಂಡು ಬಂದಿರುತ್ತದೆ. ಈ ಅಂಗಡಿಗಳ ಮೇಲೆ ಕ್ರಮಕೈಗೊಳ್ಳಲಾಗುವುದು. ಏಪ್ರಿಲ್-24 ರಿಂದ ಜೂನ್-24 ರವರೆಗೆ 778 ಜನರು ಆಪ್ತಸಮಾಲೋಚನೆ ಪಡೆದಿದ್ದಾರೆ. ಎನ್.ಆರ್.ಟಿಯಲ್ಲಿ 31 ಹಾಗೂ 40ಜನ ತಂಬಾಕು ಸೇವನೆಯಲ್ಲಿ ತ್ಯಜಿಸಿದ್ದಾರೆ ಎಂದು ತಿಳಿಸಿದರು. ದಢಾರ ರುಬೆಲ್ಲಾ ನಿರ್ಮೂಲನೆ ಬಗ್ಗೆ ಡಬ್ಲ್ಯೂ.ಹೆಚ್.ಓ ಸಂಯೋಜಕಿ ಡಾ.ಮಿಷಬ್‌ಹನಿ ಮಾತನಾಡಿದರು. ಸಭೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಗದೀಶ್, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ನಾರಾಯಣಸ್ವಾಮಿ, ಆರೋಗ್ಯಾಧಿಕಾರಿಗಳು ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಜ್ಯೋತಿ ರಥಯಾತ್ರೆ

**ಕೋಲಾರ:** ಜಿಲ್ಲೆಯಲ್ಲಿ ಸದರಿ ಕರ್ನಾಟಕ ಸಂಭ್ರಮ-50ರ ಕನ್ನಡ ಜ್ಯೋತಿ ರಥಯಾತ್ರೆಯು ಮುಳಬಾಗಿಲು ನಿಂದ ಕೆ.ಜಿ.ಎಫ್ ವರೆಗೆ ಜುಲೈ 31, ಕೆ.ಜಿ.ಎಫ್ ನಿಂದ ಬಂಗಾರಪೇಟೆ ವರೆಗೆ ಆಗಸ್ಟ್ 01, ಬಂಗಾರಪೇಟೆ ನಿಂದ ಕೋಲಾರ ವರೆಗೆ ಆಗಸ್ಟ್ 02, ಕೋಲಾರ ನಿಂದ ಮಾಲೂರು ವರೆಗೆ ಆಗಸ್ಟ್ 03, ಮಾಲೂರುನಲ್ಲಿ ಆಗಸ್ಟ್ 04 ರಂದು ಸಂಚರಿಸಲಿರುವುದರಿಂದ, ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರು ತಮ್ಮ ತಾಲ್ಲೂಕಿನ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು, ಜನಪ್ರತಿನಿಧಿಗಳನ್ನು ಮಾಧ್ಯಮದವರನ್ನು ಮತ್ತು ವಿವಿಧ ಕನ್ನಡಪರ ಸಂಘ-ಸಂಸ್ಥೆಗಳ ಪದಾಧಿಕಾರಿಗಳ ಸಹಕಾರದೊಂದಿಗೆ ರಥವನ್ನು ಸ್ವಾಗತಿಸಿಕೊಂಡು ತಾಲ್ಲೂಕು ಕೇಂದ್ರದಿಂದ ಪ್ರಾರಂಭಿಸಿ, ಮುಂದಿನ ತಾಲ್ಲೂಕು ತಲುಪುವ ಮಾರ್ಗ ಮಧ್ಯದಲ್ಲಿ ಬರುವ ಗ್ರಾಮಗಳಲ್ಲಿ ರಥವನ್ನು ಸಂಚರಿಸಲು ಎಲ್ಲಾ ಸೂಕ್ತ ವ್ಯವಸ್ಥೆಗಳನ್ನು ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಪ್ರಕಟಣೆ ತಿಳಿಸಿದೆ.

## ಜೂನಿಯರ್ ಕಾಲೇಜು ಉಪನ್ಯಾಸಕರ ನಡುವೆ ಹೊಡೆದಾಟ: ಆಸ್ಪತ್ರೆಗೆ ದಾಖಲು

**ಕೋಲಾರ:** ನಗರದ ಸರ್ಕಾರಿ ಜೂನಿಯರ್ ಕಾಲೇಜು ಉಪನ್ಯಾಸಕರು ಮಂಗಳವಾರ ಬೆಳಿಗ್ಗೆ ಕಾಲೇಜಿನಲ್ಲಿಮೂರುವರುಷಗಳ ಹಿಂದೆ ನಡೆದ ಕ ಸಾ ಪ ಚುನಾವಣಾ ವಿಷಯದಲ್ಲಿ ಜಗಳವಾಡಿಕೊಂಡಿದ್ದಾರೆ. ಪರಸ್ಪರ ವಾದ ವಿವಾದ ನಡೆದು ಹೊಡೆದಾಟ ನಡೆದು ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ನಾಗಾನಂದ ಆಸ್ಪತ್ರೆಗೆ ದಾಖಲಾಗಿದ್ದಾರೆ. ನನ್ನ ಮೇಲೆ ಮೊದಲೀನಿಂದಲೂ ಒಂದಲ್ಲ ಒಂದು ವಿಷಯಕ್ಕೆ ವಿನಾಕಾರಣ ನಿಂದಿಸುವುದು ,ಕಾಲುಕೆರೆದುಕೊಂಡು ಜಗಳಕ್ಕೆ ಬರುವುದು ,ಹಿಯಾಳಿಸುವುದು ಮುಂತಾದ ಕೃತ್ಯಗಳನ್ನು ಮಾಡಿಕೊಂಡು ಬಂದಿದ್ದು ಇಂದು ನನ್ನ ಮೇಲೆ ಹಲ್ಲೆ ನಡೆಸಿದ್ದು ಜೆ.ಜಿ.ನಾಗರಾಜ್ ಎಂದು ಆರೋಪ ಮಾಡಿದ್ದಾರೆ. ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷರೂ ಆಗಿರುವ ಜೆ.ಜಿ.ನಾಗರಾಜ್ ಹಾಗೂ ನಾಗಾನಂದ ಕೆಂಪರಾಜು ನಡುವೆ ಜಗಳ ನಡೆದಿದೆ. ಕನ್ನಡ ಉಪನ್ಯಾಸಕ ನಾಗರಾಜ್ ಸಹಾ ಎಸ್ ಎನ್ ಆರ್ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ರಾಜ್ಯಶಾಸ್ತ್ರ ಉಪನ್ಯಾಸಕ ನಾಗಾನಂದ ಕೆಂಪರಾಜು ಹಲ್ಲೆ ನಡೆಸಿದರು ಎಂದು ನಾಗರಾಜ್ ಆರೋಪಿಸಿದರು. ಜಿಲ್ಲಾ ಕಸಪಾ ಅಧ್ಯಕ್ಷ ಸ್ಥಾನ ಚುನಾವಣೆಯಲ್ಲಿ ಸೋತಿದ್ದ ನಾಗಾನಂದ ನಿತ್ಯ ಹಿಂಸೆ ಕೊಡುತ್ತಿದ್ದರು. ವಾಟ್ಸ್ ಆ್ಯಪ್ ನಲ್ಲಿ ನಿತ್ಯ ಕೆಟ್ಟದಾಗಿ ಸಂದೇಶ ಕಳುಹಿಸುತ್ತಿದ್ದರು. ಅದನ್ನು ಪ್ರಶ್ನಿಸಿದ್ದಕ್ಕೆ ಹಲ್ಲೆ ನಡೆಸಿದ್ದಾರೆ, ಬಲವಾಗಿ ಕೆನ್ನೆಗೆ ಬಾರಿಸಿದರು ಎಂದರು. ನಗರ ಪೊಲೀಸ್ ಠಾಣೆ ಇನ್ ಸ್ಪೆಕ್ಟರ್ ಸದಾನಂದ ಆಸ್ಪತ್ರೆಗೆ ಭೇಟಿ ನೀಡಿ ಮಾಹಿತಿ ಪಡೆದರು. ಕಸಾಪ ಪದಾಧಿಕಾರಿಗಳು, ಕನ್ನಡ ಹಾಗೂ ಇತರ ಸಂಘಟನೆಗಳ ಹೋರಾಟಗಾರರು ಆಸ್ಪತ್ರೆಗೆ ಭೇಟಿ ನೀಡಿದರು.



# ಹಡಪದ ಅಪ್ಪಣ್ಣನವರ ಸಾಧನೆ ಅಪಾರ

**ಮಂಡ್ಯ:** ಹಡಪದ ಅಪ್ಪಣ್ಣನವರು 12 ನೇ ಶತಮಾನದ ವಚನ ಚಳುವಳಿ ಮತ್ತು ಸಾಮಾಜಿಕ ಕ್ರಾಂತಿಯ ಹರಿಕಾರರಲ್ಲಿ ಪ್ರಮುಖರಾಗಿದ್ದವರು. ತಮ್ಮ ವಚನಗಳ ಮೂಲಕ ಅಂದಿನ ಸಮಾಜದಲ್ಲಿದ್ದ ಜಾತಿ ವ್ಯವಸ್ಥೆಯನ್ನು ಹೋಗಲಾಡಿಸುವಲ್ಲಿ ಅಪಾರ ಸಾಧನೆ ಗೈದಿದ್ದಾರೆ ಎಂದು ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯಕಿ ಡಾ ರೋಹಿಣಿ ಅವರು ತಿಳಿಸಿದರು.

ಮಂಡ್ಯ ನಗರದ ಗಾಂಧಿ ಭವನದಲ್ಲಿ ನಡೆದ ಶ್ರೀ ಶಿವಶರಣ ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಹಡಪದ ಅಪ್ಪಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದರು.

ಶ್ರೀ ಹಡಪದ ಅಪ್ಪಣ್ಣನವರು 12 ನೇ ಶತಮಾನದಲ್ಲಿ ಭಕ್ತಿ ಭಂಡಾರಿ ಬಸವಣ್ಣನವರ ಬಲಗೈ ಬಂಟ ಹಾಗೂ ಅನುಯಾಯಿಯಾಗಿದ್ದವರು. ಅಂದಿನ ಕಾಲದಲ್ಲಿಯೇ ಸುಮಾರು 250 ಕ್ಕಿಂತ ಹೆಚ್ಚು ವಚನ ಸಾಹಿತ್ಯವನ್ನು ರಚಿಸಿದ್ದಾರೆ. ಬಸವಣ್ಣನವರು ಸ್ಥಾಪಿಸಿದ್ದ ಅನುಭವ ಮಂಟಪದಲ್ಲಿ ಪದಾಧಿಕಾರಿಗಳಾಗಿ ಸೇವೆ ಸಲ್ಲಿಸಿದ್ದಾರೆ. ಅಂದಿನ ಸಮಾಜದಲ್ಲಿದ್ದ ಮೂಢನಂಬಿಕೆಗಳನ್ನು ಹೋಗಲಾಡಿಸುವಲ್ಲಿ ಬಹಳ ಶ್ರಮಿಸಿದ್ದಾರೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಎನ್ ಉದಯ ಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಇಂದು ಕಾಯಕಯೋಗಿ ಬಸವಣ್ಣನವರ ಬಾಲ್ಯದ ಒಡನಾಡಿಯಾಗಿದ್ದ ಹಾಗೂ ಅಂದಿನ ಸಮಾಜದ ಅಂಕು - ಡೊಂಕುಗಳನ್ನು ತಿದ್ದಿದ ಶ್ರೀ ಹಡಪದ ಅಪ್ಪಣ್ಣನವರ ಜಯಂತಿಯನ್ನು ಆಚರಿಸುತ್ತಿದ್ದೇವೆ. ಜಿಲ್ಲಾಡಳಿತವು ಎಲ್ಲಾ ಮಹಾನೀಯರ ಜಯಂತಿಯನ್ನು ಆಚರಿಸುತ್ತಿರುವುದು ಬಹಳ ಸಂತೋಷದ ವಿಷಯವಾಗಿದೆ ಎಂದರು.

ಹಡಪದ ಅಪ್ಪಣ್ಣನವರು ಬಸವಣ್ಣನವರು ಸ್ಥಾಪಿಸಿದ್ದ ಅನುಭವ ಮಂಟಪದಲ್ಲಿ ಪ್ರಧಾನ ಕಾರ್ಯದರ್ಶಿಯಾಗಿ ಬಹಳ ದಕ್ಷತೆ ಹಾಗೂ ನಿಷ್ಠೆಯಿಂದ ಕಾರ್ಯ ನಿರ್ವಹಿಸುತ್ತಿದ್ದರು. ಅವರ ಈ ನಿಷ್ಠೆ, ಕೆಲಸದಲ್ಲಿನ ದಕ್ಷತೆ ಹಾಗೂ ಅವರ ನಡೆ ನುಡಿಗಳನ್ನು ಇಂದಿನ ಸಮಾಜವು ಅನುಸರಿಸಬೇಕು ಎಂದರು.

ಇದೇ ವೇಳೆಯಲ್ಲಿ ಶ್ರೀ ರಂಗಪಟ್ಟಣದ ತರಬೇತಿ ಸಂಪನ್ಮೂಲ ವ್ಯಕ್ತಿಯಾದ ಗೀತಾ ಹರೀಶ್ ರವರುಮಾತನಾಡಿ ಶ್ರೀ ಹಡಪದ ಅಪ್ಪಣ್ಣನವರು 12 ನೇ ಶತಮಾನದಲ್ಲಿ ಬಸವಣ್ಣನವರ ಸಮಕಾಲೀನದಲ್ಲಿ ಇದ್ದಂತಹ ಕ್ರಾಂತಿಕಾರಿಗಳಲ್ಲಿ ಒಬ್ಬರು. ಇವರು ಅಂದಿನ ಸಮಾಜದಲ್ಲಿ ಇದ್ದಂತಹ ಜಾತಿ ವ್ಯವಸ್ಥೆ, ಮೂಢನಂಬಿಕೆ, ಕಂದಾಚಾರ, ಅಸ್ಪೃಶ್ಯತೆಯ ವಿರುದ್ಧ ತಮ್ಮ ವಚನಗಳ ಮೂಲಕ ಹೋರಾಡಿದವರು. ಸಮಾಜದಲ್ಲಿ ಕ್ರಾಂತಿಕಾರಿ ಬದಲಾವಣೆಯನ್ನು ತರಲು ಬಹಳ ಶ್ರಮಿಸಿರುವುದು ಅವಿಸ್ಮರಣೀಯ ಎಂದರು.

ಅಪ್ಪಣ್ಣನವರಿಗೆ ಬಾಲ್ಯದಿಂದಲೇ ಅಧ್ಯಾತ್ಮದ ಕಡೆ ಒಲವನ್ನು ಹೊಂದಿದವರಾಗಿದ್ದರು. ಹಡಪದ ಅಪ್ಪಣ್ಣನವರು 250 ವಚನಗಳನ್ನು ರಚನೆ ಮಾಡಿದ್ದು, ಬಸವ ಪ್ರಿಯ ಕೂಡಲ ಚೆನ್ನ ಬಸವಣ್ಣ ಎಂಬುದು ಅವರ ಅಂಕಿತ ನಾಮವಾಗಿದೆ. ಮೌಢ್ಯತೆಯನ್ನು ನಾಶ ಮಾಡುವ ಹಾಗೂ ಅಜ್ಞಾನದಿಂದ ಸುಜ್ಞಾನದೆಡೆಗೆ ಕರೆದೊಯ್ಯುವಂತಹ ವಿಷಯಗಳನ್ನೊಳಗೊಡಂತೆ ಅವರ ವಚನಗಳಿವೆ ಎಂದರು.

ಅಪ್ಪಣ್ಣನವರು ಸಮಾಜದೊಳಗೆ ನೀನು ಕೆಲಸ ಮಾಡು ಎಂಬ ಕರೆಯನ್ನು ತಮ್ಮ ವಚನದ ಮೂಲಕ ಹೇಳಿದ್ದು, ಯಾವುದೇ ವ್ಯಕ್ತಿಯು ತನ್ನ ಸಮಾಜದಲ್ಲಿಯೇ ಕಾರ್ಯ ನಿರ್ವಹಿಸಬೇಕು ಎಂದರು.

ಇದೇ ಸಂದರ್ಭದಲ್ಲಿ 2024 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಸವಿತ ಸಮಾಜದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು.

ಮುಖಂಡರುಗಳಾದ ಎಲ್ ಸಂದೇಶ್, ರಾಜಣ್ಣ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.




# ದುಶ್ಚಟಗಳಿಂದ ದೂರವಿರಿ

## ಹೆಚ್ಚು ಜಾಗೃತಿ ಮೂಡಿಸಲು ಜಿಲ್ಲಾಧಿಕಾರಿ ಡಾ.ಕುಮಾರ ಕರೆ

**ಮಂಡ್ಯ:** ಮದ್ಯಪಾನ, ಧೂಮಪಾನ, ಡ್ರಗ್ಸ್, ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಜಿಲ್ಲೆಯಲ್ಲಿ ಹೆಚ್ಚು ಜಾಗೃತಿ ಮೂಡಿಸಿ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.



ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಶಾ ಮುಕ್ತ ಭಾರತ ಅಭಿಯಾನ ಯೋಜನೆಯನ್ನು ಪರಿಣಾಮ ಕಾರಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ಸಭೆ ನಡೆಸಿ ಮಾತನಾಡಿದರು.

ಮದ್ಯಪಾನ ಸೇವನೆ, ಡ್ರಗ್ಸ್ ಸೇರಿದಂತೆ ಇನ್ನಿತರ ದುರಭ್ಯಾಸಗಳು ಸಮಾಜಕ್ಕೆ ಮಾರಕವಾಗಿದೆ. ಕುತೂಹಲಕ್ಕಾಗಿ ಮೊದಲು ಸೇವನೆ ಮಾಡಿ ನಂತರ ಅವುಗಳ ದಾಸರಾಗುತ್ತಾರೆ. ಮಾದಕ ವಸ್ತುಗಳ ಸೇವನೆ ಮಾಡುತ್ತಿರುವವರನ್ನು ಅದರಿಂದ ದಾಸಮುಕ್ತರಾಗಲು ಅಗತ್ಯ ಕ್ರಮ ವಹಿಸಿ ಎಂದರು.

ದುಶ್ಚಟಗಳಿಗೆ ಒಳಗಾಗಿರುವ ವ್ಯಕ್ತಿಯಿಂದ ಅವರ ಮಕ್ಕಳು ಹಾಗೂ ಕುಟುಂಬದ ಮೇಲೂ ಬಹಳ ಪರಿಣಾಮ ಬೀರುತ್ತದೆ. ಆದ್ದರಿಂದ ಅಂತಹ ವ್ಯಕ್ತಿಗಳಿಗೆ ಅಗತ್ಯ ಚಿಕಿತ್ಸೆ ನೀಡುವುದರ ಜೊತೆಗೆ ನೈತಿಕ ಮೌಲ್ಯಗಳನ್ನು ತಿಳಿಸಿ ಅವರ ಮನವೊಲಿಸುವ ಪ್ರಯತ್ನ ಮಾಡಬೇಕು ಎಂದರು.

ದುಶ್ಚಟಕ್ಕೆ ಬಲಿಯಾಗಿರುವ ವ್ಯಕ್ತಿಗಳು ಯಾವುದೋ ಒತ್ತಡ, ಕೌಟುಂಬಿಕ ಸಮಸ್ಯೆಯಿಂದ ಚಟಗಳಿಗೆ ದಾಸರಾಗಿರುತ್ತಾರೆ. ದುಶ್ಚಟಗಳಿಗೆ ಒಳಗಾಗಿರುವರು ವ್ಯಕ್ತಿಗಳನ್ನು ವ್ಯಸನ ಮುಕ್ತ ಮಾಎಇ ಸಮಾಜದಲ್ಲಿ ಮಾದರಿ ವ್ಯಕ್ತಿಯನ್ನಾಗಿ ಜೀವಿಸಲು ಪ್ರೇರೆಪಿಸಬೇಕು ಎಂದರು.

ಜಿಲ್ಲಾ ಮಟ್ಟದ ನಶಾ ಮುಕ್ತ ಭಾರತ ಅಭಿಯಾನ ಸಮಿತಿಗೆ ಪದಾಧಿಕಾರಿಗಳನ್ನು ನೇಮಕ ಮಾಡಿಕೊಳ್ಳಬೇಕಾಗಿದ್ದು, ಕ್ರಿಯಾಶೀಲರಾಗಿ ಹಾಗೂ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸುವವರನ್ನು ನೇಮಿಸಿ ಎಂದರು.

ಕುಡಿತದಿಂದ ಉಂಟಾಗುವ ತೊಂದರೆ ಹಾಗೂ ಆರೋಗ್ಯದ ಮೇಲೆ ಬೀರುವ ಪರಿಣಾಮಗಳ ಬಗ್ಗೆ ಶಾಲೆಯ ಮಕ್ಕಳಿಗೆ ತಿಳಿಸಬೇಕು. ಒಂದು ವೇಳೆ ಶಾಲಾ ಮಕ್ಕಳ ತಂದೆಯರು ಕುಡಿತಕ್ಕೆ ಬಲಿಯಾಗಿದ್ದಾರೆ ಅವರಿಗೆ ತಮ್ಮ ಮಕ್ಕಳ ಕೈಯಿಂದ ಪತ್ರ ಬರೆಸಿ ಆ ಮೂಲಕ ಅವರ ತಂದೆಯರಿಗೆ ತಿಳುವಳಿಕೆ ಮೂಡಿಸಬಹುದು ಎಂದರು.

ಪ್ರತಿ ಶಾಲೆಗಳಲ್ಲಿ ನಶಾ ಮುಕ್ತ ಅಭಿಯಾನಕ್ಕೆ ಸಂಬಂಧಿಸಿದಂತೆ ಜಾಗೃತಿ ಜಾಥಾ ಹಾಗೂ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಅರಿವು ಮೂಡಿಸಬೇಕು ಎಂದರು.

ಕುಡಿತ ವ್ಯಸನಿಗಳಾದವರನ್ನು ಈಗಾಗಲೇ ಕುಡಿತ ಬಿಡಿಸುವ ಶಿಬಿರವನ್ನು ಆಯೋಜಿಸಿ ಕುಡಿತ ಬಿಡಿಸಲಾಗುತ್ತಿದೆ. ಶಿಬಿರದಲ್ಲಿ ಕುಡಿತ ತ್ಯಜಿಸಿದಂತಹವರಿಗೆ ಕಾರ್ಯಕ್ರಮಗಳನ್ನು ಏರ್ಪಡಿಸಿ ಅವರನ್ನು ಸನ್ಮಾನಿಸುವ ಕೆಲಸವಾಗುತ್ತಿದೆ. ಇದರಿಂದ ಉಳಿದಿರುವ ಮದ್ಯಪಾನ ವ್ಯಸನಿಗಳ ಮನಸ್ಸನ್ನು ಬದಲಾಯಿಸಬಹುದಾಗಿದೆ ಎಂದು ಜಿಲ್ಲಾ ವಿಕಲ ಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಕಲ್ಯಾಣಾಧಿಕಾರಿ ಕೋಮಲ್ ಕುಮಾರ್ ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಧೀಶ ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ ಆನಂದ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಡಾ. ಸಿದ್ದಲಿಂಗೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಎಸ್ ರಾಜಮೂರ್ತಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಹೆಚ್ ಶಿವರಾಮೇಗೌಡ, ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಸೋಮಶೇಖರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ವಿವಿಧ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

**ಮಂಡ್ಯ:** ಜಿಲ್ಲಾ ಪಂಚಾಯತ್ 2024-25 ನೇ ಸಾಲಿನ ಅನುದಾನದಡಿ ವೃತ್ತಿ ಪರ ನಿರತ ಗ್ರಾಮೀಣ ಪ್ರದೇಶದ ಕುಶಲ ಕರ್ಮಿಗಳಿಗೆ ಸುಧಾರಿತ ಉಪಕರಣ ಸರಬರಾಜು/ವಿಶೇಷ ಘಟಕ/ಗಿರಿಜನ ಉಪಯೋಜನೆಯಡಿ ವಿದ್ಯುತ್ ಚಾಲಿತ ಹೊಲಿಗೆ ಯಂತ್ರ, ಪವರ್ ಟೂಲ್ಸ್ ಗಳಾದ ಮರಗೆಲಸ, ಗಾರೆಕೆಲಸ, ಧೋಬಿ ಹಾಗೂ ಕ್ಷೌರಿಕ ಉಪಕರಣಗಳನ್ನು ಉಚಿತವಾಗಿ ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 22 ಕೊನೆಯ ದಿನವಾಗಿದ್ದು https://mandya.nic.in ವೆಬ್ ಸೈಟ್ ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-221566 ಅಥವಾ ಮಂಡ್ಯ ಗ್ರಾಮೀಣ ಕೈಗಾರಿಕೆಯ ಉಪನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಕೈಗಾರಿಕಾ ವಿಭಾಗದ (ಗ್ರಾಮೀಣ ಕೈಗಾರಿಕೆ) ಉಪನಿರ್ದೇಶಕರು ತಿಳಿಸಿದ್ದಾರೆ.

# ಬೆಳೆ ವಿಮೆಗೆ ನೋಂದಾಯಿಸಲು ಜುಲೈ 31 ಕೊನೆ ದಿನ

**ಬೆಂಗಳೂರು ಗ್ರಾಮಾಂತರ:** 2024-25ನೇ ಸಾಲಿನ ಮುಂಗಾರು ಹಂಗಾಮಿನ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ವಿವಿಧ ತೋಟಗಾರಿಕೆ ಬೆಳೆಗಳಿಗೆ ವಿಮೆ ಮಾಡಿಸ ಬಹುದಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಧೀನ ತಾಲ್ಲೂಕುಗಳಾದ ದೇವನಹಳ್ಳಿ, ದೊಡ್ಡಬಳ್ಳಾಪುರ, ಹೊಸಕೋಟೆ ಮತ್ತು ನೆಲಮಂಗಲ ತಾಲ್ಲೂಕುಗಳನ್ನು ವಿಮೆಯ ವ್ಯಾಪ್ತಿಗೆ ಒಳಪಡಿಸಲಾಗಿದೆ. ಹವಾಮಾನ ಅಂಶಗಳಾದ ತಾಪಮಾನ, ಗಾಳಿಯ ವೇಗ, ಮಳೆಯ ಪ್ರಮಾಣ, ಆರ್ದ್ರತೆ ಇತ್ಯಾದಿ ಮಾಹಿತಿಗಳನ್ನು ಸರ್ಕಾರದಿಂದ ಅಧಿಸೂಚಿತ ಟೆಲಿ ಮೆಟ್ರಿಕ್ ಮಳೆ ಮಾಪನ ಕೇಂದ್ರ ಮತ್ತು ಸ್ವಯಂಚಾಲಿತ ಹವಾಮಾನ ಕೇಂದ್ರಗಳಲ್ಲಿ ದಾಖಲಾಗುವ ಅಂಶಗಳ ಆಧಾರದ ಮೇಲೆ ಬೆಳೆ ವಿಮೆ ನಷ್ಟವನ್ನು ತೀರ್ಮಾನಿಸಲಾಗುತ್ತದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿನ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ ಮತ್ತು ನೆಲಮಂಗಲ ತಾಲ್ಲೂಕಿನ ಮಾವು ಬೆಳೆಯಲ್ಲಿ ಪ್ರತಿ ಹೆಕ್ಟೇರ್ ಗೆ ವಿಮಾ ಮೊತ್ತ-80,000ರೂ, ರೈತರು ಪಾವತಿಸಬೇಕಾದ ದರ (ಶೇ.5%)-4,000, ದ್ರಾಕ್ಷಿ ಬೆಳೆಯಲ್ಲಿ ಪ್ರತಿ ಹೆಕ್ಟೇರ್ ಗೆ ವಿಮಾ ಮೊತ್ತ-2,80,000ರೂ, ರೈತರು ಪಾವತಿಸಬೇಕಾದ ದರ (ಶೇ.5%ಗಳಲ್ಲಿ)-14,000 ಮಾವು ಮತ್ತು ದ್ರಾಕ್ಷಿ ಬೆಳೆಯುವ ರೈತ ಬಾಂಧವರು ಈ ಯೋಜನೆಯಡಿ ನೊಂದಾಯಿಸಿ ಉಪಯೋಗ ಪಡೆದುಕೊಳ್ಳುವುದು.

ಬೆಳೆ ಸಾಲ ಪಡೆಯದ ರೈತರು ಯೋಜನೆಯಡಿ ಭಾಗವಹಿಸಲು ನಿಗಧಿತ ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಪಹಣಿ / ಕಂದಾಯ ರಶೀದಿ / ಖಾತೆ ಪುಸ್ತಕ / ಬ್ಯಾಂಕ್ ಖಾತೆ ಪುಸ್ತಕ, ಆಧಾರ್ ನಕಲು ಪ್ರತಿ ಮತ್ತು ಸ್ವಯಂಘೋಷಿತ ಬೆಳೆ ವಿವರಗಳನ್ನು ಹತ್ತಿರದ ರಾಷ್ಟ್ರೀಯ ಅಧಿಕೃತ ಬ್ಯಾಂಕು / ಸಾಮಾನ್ಯ ಸೇವಾ ಕೇಂದ್ರ/ ಗ್ರಾಮ ಒನ್ ಕೇಂದ್ರಗಳಲ್ಲಿ ನೊಂದಾಯಿಸುವುದು. ವಿಮೆ ಮಾಡಿಸುವ ರೈತರು ಫ್ರೂಟ್ಸ್ ತಂತ್ರಾಂಶದ ನೋಂದಣಿ ಸಂಖ್ಯೆಯನ್ನು ಹೊಂದಿರಬೇಕಿದ್ದು, ನೋಂದಣಿ ಸಂಖ್ಯೆಗೆ ಪಹಣಿ ವಿವರಗಳನ್ನು ಜೋಡಿಸಬೇಕಿರುತ್ತದೆ. ನೋಂದಣಿ ಸಂಖ್ಯೆ ಇಲ್ಲದ ರೈತರು ನೋಂದಣಿ ಸಂಖ್ಯೆಯನ್ನು ಮಾಡಿಕೊಂಡು ವಿಮೆಯಲ್ಲಿ ಪಾಲ್ಗೊಳ್ಳಬೇಕಿರುತ್ತದೆ. ಬೆಳೆ ಸಾಲ ಪಡೆದ ರೈತರನ್ನು ಸಂಬಂಧಿಸಿದ ಬ್ಯಾಂಕಿನವರು ವಿಮೆ ವ್ಯಾಪ್ತಿಗೆ ನೊಂದಾಯಿಸಲಿದ್ದು, ಯೋಜನೆಯಲ್ಲಿ ನೊಂದಾಯಿಸಿಕೊಳ್ಳಲು ಇಚ್ಚಿಸದ ರೈತರು ಸಂಬಂಧಿಸಿದ ಬ್ಯಾಂಕ್ ಶಾಖೆಯ ವ್ಯವಸ್ಥಾಪಕರಿಗೆ ನೋಂದಣಿಯ ಅಂತಿಮ ದಿನಾಂಕಕ್ಕಿಂತ 7 ದಿನಗಳು ಮುಂಚಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದ್ದಲ್ಲಿ ಅಂತಹ ರೈತರನ್ನು ಯೋಜನೆಯಿಂದ ಕೈಬಿಡಲು ಅವಕಾಶವಿರುತ್ತದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಗೆ ಏಖಊಇಒ(ಕ್ಷೇಮ) ಅಧಿಸೂಚಿತ ವಿಮಾ ಸಂಸ್ಥೆಯಾಗಿದೆ. ವಿಮೆ ನೋಂದಣಿಗೆ ಕೊನೆಯ ದಿನಾಂಕ ಜುಲೈ 31 ಆಗಿರುತ್ತದೆ. ಹೆಚ್ಚಿನ ಮಾಹಿತಿಗೆ ದೇವನಹಳ್ಳಿ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ)- 9480461234, ದೊಡ್ಡಬಳ್ಳಾಪುರ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ)- 9880210892, ಹೊಸಕೋಟೆ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ)- 8217210320, ನೆಲಮಂಗಲ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ)- 9880461607, ರೈತ ಸಂಪರ್ಕ ಕೇಂದ್ರದ ಅಧಿಕಾರಿ, ಹತ್ತಿರದ ಬ್ಯಾಂಕ್ ಶಾಖೆ ಹಾಗೂ ವಿಮಾ ಕಂಪನಿಯ ಸಹಾಯವಾಣಿ ಸಂಖ್ಯೆ- 08026564537 ಈ ಸಂಖ್ಯೆಗಳಿಗೆ ಸಂಪರ್ಕಿಸಬಹುದೆಂದು ಜಿಲ್ಲಾ ತೋಟಗಾರಿಕಾ ಇಲಾಖೆಯ ತಿಳಿಸಿದ್ದಾರೆ.

# ಶ್ರೇಷ್ಠ ಕೃಷಿಕ ಪ್ರಶಸ್ತಿಗಾಗಿ ರೈತರಿಂದ ಅರ್ಜಿ ಆಹ್ವಾನ

**ಮಂಡ್ಯ:** ರಾಜ್ಯ ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿ ಹಾಗೂ ಆತ್ಮ ಯೋಜನೆಯಡಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿಗಾಗಿ ಆಸಕ್ತ ರೈತರಿಂದ ಅರ್ಜಿ ಅಹ್ವಾನಿಸಲಾಗಿದೆ. ಕೃಷಿಯಲ್ಲಿ ಸಮಗ್ರ ಬೆಳೆ ಪದ್ಯತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ, ವೈಜ್ಞಾನಿಕ ಯಂತ್ರೋಪಕರಣಗಳ ಬಳಕೆ, ತೋಟಗಾರಿಕೆ, ಹೈನುಗಾರಿಕೆ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ಹೈಟೆಕ್ ಹಸಿರು ಮನೆ ಅಳವಡಿಕೆ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ, ಆಡು ಕುರಿ ಮೊಲ ಇತ್ಯಾದಿ ಸಾಕಾಣಿಕೆ ಚಟುವಟಿಕೆಗಳಲ್ಲಿ ವಿಶೇಷ ಸಾಧನೆ ಮಾಡಿರುವ ರೈತರು ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಜಿಲ್ಲೆಯ 10 ಮಂದಿ ರೈತರಿಗೆ ಜಿಲ್ಲಾ ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿ ಹಾಗೂ ತಲಾ 25 ಸಾವಿರ ರೂ. ನಗದು, ತಾಲ್ಲೂಕಿನ 5 ಮಂದಿ ರೈತರಿಗೆ ತಾಲ್ಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿ ಹಾಗೂ ತಲಾ 10 ಸಾವಿರ ರೂ. ನಗದು ಬಹುಮಾನ ನೀಡಲಾಗುವುದು. ಆಸಕ್ತ ರೈತರು ಜುಲೈ 31ರ ಸಂಜೆ 5 ಗಂಟೆಯೊಳಗೆ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಬಹುದು ಎಂದು ಸಹಾಯಕ ಕೃಷಿ ನಿರ್ದೇಶಕರಾದ ಹೆಚ್ ಎಂ ಸುನಿತ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಾವಿದರ ನಿರ್ಲಕ್ಷ್ಯ ಖಂಡಿಸಿ ಪ್ರತಿಭಟನೆ

**ಬೆಂಗಳೂರು:** ಕರ್ನಾಟಕದ ಪ್ರತಿಯೊಂದು ಜಿಲ್ಲೆಗಳು ಸಾಂಸ್ಕೃತಿಕವಾಗಿ ಮತ್ತು ಐತಿಹಾಸಿಕವಾಗಿ ತನ್ನದೇ ಆದ ವಿಶಿಷ್ಟ ಹೆಸರನ್ನು ಹೊಂದಿದೆ ಕರ್ನಾಟಕ ಜಾನಪದ ತವರು ಎಂದೇ ಹೆಸರು ಮಾಡಿರುವ ಜಾನಪದ ಕ್ಷೇತ್ರದಲ್ಲಿ ಕರ್ನಾಟಕ ಮುಂಚೂಣಿಯಲ್ಲಿದ್ದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೇಂದ್ರ ಕಚೇರಿ ಕನ್ನಡ ಭವನ ಜನಪದ ಕಲಾವಿದರನ್ನು ನಿರ್ಲಕ್ಷಿಸುತ್ತ ಬಂದಿದೆ ಕಳೆದ ಮೂರು ನಾಲ್ಕು ವರ್ಷಗಳಿಂದಲೂ ಕಲಾವಿದರಿಗೆ ಕಲಾ ಸಂಸ್ಥೆಗಳಿಗೆ ಸಮರ್ಪಕವಾಗಿ ನ್ಯಾಯಯುತವಾಗಿ ಧನಸಹಾಯವನ್ನು ನೀಡುವಲ್ಲಿ ತಾರತಮ್ಯ ನೀತಿಯನ್ನು ಕೇಂದ್ರ ಕಚೇರಿ ಅನುಸರಿಸುತ್ತಿದ್ದು ಇದನ್ನು ಖಂಡಿಸಿ ಈಗಾಗಲೇ ಅನೇಕ ಬಾರಿ ಬೆಂಗಳೂರು ನಗರದಲ್ಲಿ ಹೋರಾಟ ಮಾಡಿದ್ದರು ಎಚ್ಚೆತ್ತುಕೊಳ್ಳದ ಇಲಾಖೆಯ ವಿರುದ್ಧ ಬೆಂಗಳೂರಿನಲ್ಲಿ ದಿನಾಂಕ 25-07-2024 ಗುರುವಾರದಂದು ಬೆಳಿಗ್ಗೆ 11:30ಕ್ಕೆ ಸಾಂಸ್ಕೃತಿಕ ಶಾಂತಿಯುತ ಪ್ರತಿಭಟನೆ ಮಾಡಲು ರಾಜ್ಯದ ಸಾಂಸ್ಕೃತಿಕ ಜಾನಪದ ಕಲಾವಿದರು ನಿರ್ಧರಿಸಿದ್ದು ಒಗ್ಗಟ್ಟಾಗಿ ಎಲ್ಲಾ ಕಲಾವಿದರು ಬೆಂಗಳೂರಿನಲ್ಲಿ ಪ್ರತಿಭಟನೆ ಮಾಡಿ ಸಚಿವರ ಗಮನಕ್ಕೆ ತರುವ ಯೋಜನೆ ಇದೆ 2023- 24 ನೇ ಸಾಲಿನ 30% ಅಂಡ್ 40% ಧನಸಹಾಯ ನೀಡಿದ್ದು ಪೂರ್ಣ ಅನುದಾನದ ಹಣವನ್ನು ಸಂಘ ಸಂಸ್ಥೆಗಳಿಗೆ ನೀಡದೇ ಇರುವುದರಿಂದ ಕಲಾವಿದರ ಸಂಕಷ್ಟದ ಅಳಲನ್ನು ತೋಡಿಕೊಂಡಿದ್ದಾರೆ ಇಲಾಖೆ ಪರ್ಸೆಂಟೇಜ್ ಅನುದಾನ ನೀಡಿ ಕೈತೊಳೆದುಕೊಂಡಿದ್ದು ಕಲಾವಿದರ ಒಂದು ನಿಯೋಗ ಮಾರ್ಚ್ ಅಂತ್ಯದಲ್ಲಿ ಮಾನ್ಯ ಸಚಿವರನ್ನು ಕಂಡು ವಿನಂತಿಸಿದಾಗ ಜೂನ್ ನಲ್ಲಿ ಪೂರ್ಣ ಅನುದಾನ ನೀಡುವುದಾಗಿ ಮೌಖಿಕವಾಗಿ ಹೇಳಿದ ಸಚಿವರು ಇಂದಿಗೂ ಜುಲೈ ಅಂತ್ಯದವರೆಗೂ ಆ ಕುರಿತು ಯಾವುದೇ ಪ್ರಯತ್ನ ನಡೆಸಿಲ್ಲ ಕಲಾವಿದರ ಕುಂದು ಕೊರತೆಗಳ ಬಗ್ಗೆ ಅನೇಕ ಬಾರಿ ಮನವಿ ಸಲ್ಲಿಸಿದರು ಕಲಾವಿದರೊಂದಿಗೆ ಚರ್ಚೆಯನ್ನು ಇಂದಿಗೂ ಮಾಡಿಲ್ಲ ಕಲಾವಿದರ ಪ್ರಾಯೋಜಿತ ಹಣ 2019 ರಿಂದಲೂ ಬಾಕಿ ಇದ್ದ ನೀಡುವ ಕುರಿತು ಇದುವರೆಗೆ ಯಾವುದೇ ಕ್ರಮ ವಹಿಸಿಲ್ಲ ಸೇವಾ ಸಿಂಧುವಿನಲ್ಲಿ ಅರ್ಜಿ ಹಾಕಿದ ಸಂಘ ಸಂಸ್ಥೆಗಳಿಗೆ ಕಾಟಾಚಾರ ಎಂಬಂತೆ 30% ಅಂಡ್40% ಹಣ ಬಿಡುಗಡೆ ಮಾಡಿ ಸಚಿವರ ಶಿಪಾರಸ್ಸು ಪಡೆದ ಕೆಲ ಸಂಘ ಸಂಸ್ಥೆಗಳಿಗೆ ಪೂರ್ತಿ ಧನ ಸಹಾಯವನ್ನು ನೀಡುತ್ತಿದ್ದಾರೆ ಇದು ಕಾನೂನು ವಿರೋಧ ಮತ್ತು ನಿಯಮ ಉಲ್ಲಂಘನೆ ಕಳೆದ ಹತ್ತು ವರ್ಷಗಳಿಂದಲೂ ಬೆಂಗಳೂರಿನಲ್ಲಿ ಬೀಡು ಬಿಟ್ಟಿರುವ ಜಂಟಿ ನಿರ್ದೇಶಕರನ್ನ ಬದಲಾವಣೆ ಮಾಡದೆ ಅವರನ್ನು ಅಲ್ಲೇ ಮುಂದುವರಿಸಿರುವುದು ಕಲಾವಿದರಿಗೆ ತೊಂದರೆಯಾಗಿದೆ.

ಜಂಟಿ ನಿರ್ದೇಶಕರ ಆಡಳಿತ ಮಾರ್ಗಸೂಚಿ ಉಲ್ಲಂಘನೆ ಮಾಡುತ್ತಿರುವುದು ಅವರ ಮೇಲೆ ಸುಮಾರು ಹತ್ತಕ್ಕೂ ಹೆಚ್ಚು ದೂರುಗಳು ದಾಖಲಾಗಿದ್ದರು ಸಚಿವರು ನಿರ್ಲಕ್ಷ ಎದ್ದು ಕಾಣುತ್ತಿದೆ.




ಬೆಂಗಳೂರು ಹಬ್ಬದಲ್ಲಿ ನಡೆದ ಬ್ರಹ್ಮಾಂಡ ಭ್ರಷ್ಟಾಚಾರವನ್ನು ಖಖಖ ತನಿಖೆಗೆ ವಹಿಸಲು ಒತ್ತಾಯಿಸಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು

ಈ ಕುರಿತು ಈಗಾಗಲೇ ದಿನಾಂಕ 19.7.2024 ರಂದು ಚರ್ಚೆ ನಡೆದಿದ್ದು ಅಂದು ಮಾನ್ಯ ನಿರ್ದೇಶಕರ ಗಮನಕ್ಕೆ ತಂದಿದ್ದೇವೆ ಅದಾಗ್ಯೂ ಶೀಘ್ರವಾಗಿ ಧನಸಹಾಯ ಮಂಜೂರು ಮಾಡಲು ಕಾರ್ಯಕ್ರಮಗಳಿಗೆ ಹಣ ಬಿಡುಗಡೆ ಮಾಡಲು ಮುಂದಿನ 2024 -25 ನೇ ಸಾಲಿನ ಅರ್ಜಿ ಕರೆಯಲು ಇಲಾಖೆಯ ಜಂಟಿ ನಿರ್ದೇಶಕರ ಕರ್ತವ್ಯ ಲೋಪದಿಂದಾಗಿ ಅನೇಕ ಕಾರ್ಯಕ್ರಮಗಳ ಯೋಜನೆಗಳನ್ನು ಪುನರಾರಂಭ ಮಾಡಲು ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೆ ತರುವ ಕುರಿತು 25.7.2024ನೇ ಗುರುವಾರ ಬೆಳಿಗ್ಗೆ 11:30 ಕ್ಕೆ ಎಲ್ಲರೂ ಸೇರಿ ಚರ್ಚೆ ನಡೆಸಿ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ಮುಂಭಾಗದಲ್ಲಿ ಶಾಂತಿಯುತ ಸಾಂಸ್ಕೃತಿಕ ಪ್ರತಿಭಟನೆಯನ್ನು ಮಾಡಲು ನಿರ್ಧರಿಸಲಾಗಿದೆ ಅಂದು ಕನ್ನಡ ಭವನ ಎದುರು ಬಂದು ಶಾಂತಿಯುತ ಮೌನ ಪ್ರತಿಭಟನೆ ಕಪ್ಪುಪಟ್ಟಿಯೊಂದಿಗೆ ಪ್ಲೇ ಕಾರ್ಡ್ಸ್ ಪ್ರದರ್ಶನ ಹಮ್ಮಿಕೊಳ್ಳುವುದು ಎಂದು ಸಾಂಸ್ಕೃತಿಕ ಸಂಘಟಕರಾದ ಜಯಸಿಂಹ ಎಸ್ ಚೆಕ್ಕೆರೆ ಲೋಕೇಶ್ ಸಬ್ಬನಹಳ್ಳಿ ರಾಜು ಅಂಜನಪ್ಪ, ನಾಗೇಶ್ ಕೆ ಎನ್ ಮಹೇಶ್ ಬಾಬು ಸುರ್ವೆ, ರಾಜೇಗೌಡ

ತಮಟೆ ನಾಗರಾಜ್, ಕುಂತೂರು ಕುಮಾರ್, ಕುಣಿಗಲ್ ರಾಮಚಂದ್ರ, ಬಸವರಾಜ್ ಸಿನ್ನೂರು ಚಂದ್ರಿಕಾ ತುಮಕೂರು ತಿಳಿಸಿದ್ದಾರೆ.

# ಕೋರ್ಟ್ ಆವರಣದಲ್ಲಿ ಕ್ಯಾಂಟೀನ್ ಶೀಘ್ರ



**ಮಂಡ್ಯ:** ನಗರದ ಜಿಲ್ಲಾ ನ್ಯಾಯಾಲಯ, ಜಿಲ್ಲಾ ವಕೀಲರ ಸಂಘದ ಸಹಯೋಗದಲ್ಲಿ ನಡೆದ ನ್ಯಾಯಾಲಯದ ಕ್ಯಾಂಟೀನ್ ಕಟ್ಟಡ(ಉಪಹಾರ ಮಂದಿರ)ದ ಶಿಲಾನ್ಯಾಸ ಶಂಕುಸ್ಥಾಪನಾ ಕಾರ್ಯಕ್ರಮದಲ್ಲಿ ಪ್ರಧಾನ ಮತ್ತು ಸತ್ರ ನ್ಯಾಯಾಧೀಶ ಎಂ.ಭೃಂಗೇಶ್ ಅವರು ಭೂಮಿ ಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಕಳೆದ ಕೆಲವು ವರ್ಷಗಳಿಂದಲೂ ಇಲ್ಲಿ ಕ್ಯಾಂಟೀನ್ ನಿರ್ಮಾಣ ಮಾಡಬೇಕೆಂಬುದನ್ನು ವಕೀಲರು ಮನವಿ ಮಾಡುತ್ತಲೇ ಇದ್ದರು, ಇಂದು ಆ ಕಾಲ ಕೂಡಿ ಬಂದಿದೆ, ಈ ಕ್ಯಾಂಟೀನ್ ವಕೀಲರ ಒತ್ತಡ ಕಡಿಮೆ ಮಾಡುವ ಕೇಂದ್ರವಾಗಿ ಬದಲಾಗಲಿ, ಅದರ ಮೂಲಕ ತಮ್ಮ ಕಕ್ಷಿದಾರರಿಗೆ ಮತ್ತಷ್ಟು ಅಚ್ಚುಕಟ್ಟಾಗಿ ಹಾಗೂ ಸಮಾಧಾನ ಚಿತ್ತದಿಂದ ನ್ಯಾಯ ಕೊಡಿಸುವ ಗಮನ ಹರಿಸಲಿ ಎಂದು ಸಲಹೆ ನೀಡಿದರು.

ಬೆಳಿಗ್ಗಿನಿಂದಲೇ ವಕೀಲರ ಕೆಲಸ ಶುರುವಾಗಿ ಬಿಡುತ್ತದೆ, ಆ ಸಂದರ್ಭದಲ್ಲಿ ಕೆಲವು ವಕೀಲರು ದೂರದ ಊರುಗಳಿಂದ ಅಥವಾ ಪಟ್ಟಣಗಳಿಂದ ಬರುವ ವಕೀಲರು ಇರುತ್ತಾರೆ, ಈ ಸನ್ನಿವೇಶದಲ್ಲಿ ಮನೆಯಲ್ಲಿ ಅವರು ಬೆಳಗಿನ ಉಪಹಾರ ಅಥವಾ ತಿಂಡಿ ತಿನ್ನದೇ ಬಂದಿರುವ ಉದಾಹರಣೆಗಳು ಸಾಕಷ್ಟಿವೆ, ಅದನ್ನು ಗಮನದಲ್ಲಿಟ್ಟುಕೊಂಡೇ ಅವರ ಆರೋಗ್ಯ ದೃಷ್ಟಿಯಿಂದ ಶುಚಿತ್ವದಿಂದ ಕೂಡಿರುವ ಕ್ಯಾಂಟೀನ್ ನಮ್ಮ ನ್ಯಾಯಾಲಯದಲ್ಲಿ ಅವಶ್ಯಕತೆ ಇತ್ತು, ಹಾಗಾಗಿ ಇಲ್ಲಿ ಶಿಲಾನ್ಯಾಸ ಮಾಡಿರುವುದಾಗಿ ತಿಳಿಸಿದರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಟಿ.ರಾಜೇಂದ್ರ ಮಾತನಾಡಿ, ನಮ್ಮ ನ್ಯಾಯಾಲಯದ ಆವರಣದಲ್ಲಿ ಹೋಟೆಲ್ ಆಗಬೇಕೆನ್ನುವ ಬಹುದಿನಗಳ ಕನಸು ಈಗ ನನಸಾಗಿದೆ. ಮತ್ತಷ್ಟು ಸೌಲಭ್ಯಗಳನ್ನು ನಮ್ಮ ವಕೀಲರಿಗೆ ಕಲ್ಪಿಸುವ ನಿಟ್ಟಿನಲ್ಲಿ ಕೆಲಸ ಮಾಡುವೆ, ಕ್ಯಾಂಟೀನ್ ಕಟ್ಟಡವನ್ನು ಶೀಘ್ರವಾಗಿ ಸ್ಥಾಪಿಸಿ ನ್ಯಾಯಾಧೀಶರ ಸಹಕಾರದಿಂದ ಆದಷ್ಟು ಬೇಗ ವಕೀಲರಿಗೆ ಸೇವೆ ಸಿಗುವಂತೆ ಮಾಡಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವಕೀಲರ ಪರಿಷತ್ ಅಧ್ಯಕ್ಷ ಎಚ್.ಎಲ್.ವಿಶಾಲರಘು, ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಖಜಾಂಚಿ ಡಿ.ಎಂ. ಮಹೇಶ್, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಎಂಜಿನಿಯರ್ ಜಿ.ರಾಜು, ವಕೀಲರದ ಭಾಗವಹಿಸಿದ್ದರು.

# ಕುಮಾರಸ್ವಾಮಿ ಒಪ್ಪಿಗೆ

**ಕೆ ಆರ್ ಪೇಟೆ:** ಅಂತರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಮೌಂಟ್ ಅಬು ರಾಜಸ್ಥಾನದಲ್ಲಿ ಸೆಪ್ಟೆಂಬರ್ 13ರಿಂದ 16ರ ವರೆಗೆ ನಡೆಯಲಿರುವ ರಾಜಕಾರಣಿಗಳ ಮಹಾಸಭೆ ಹಾಗೂ, ಒತ್ತಡ ಮುಕ್ತ ಆಡಳಿತಕ್ಕಾಗಿ ಆಧ್ಯಾತ್ಮಿಕ ಸಬಲೀಕರಣ ಕಾರ್ಯಾಗಾರವನ್ನು ಉದ್ಘಾಟಿಸಲು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಖಾತೆಯ ಸಚಿವ ಎಚ್ ಡಿ. ಕುಮಾರಸ್ವಾಮಿ ಒಪ್ಪಿಗೆ ನೀಡಿದ್ದಾರೆ ಎಂದು ಮೈಸೂರು ಉಪವಾಲಯದ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜಿ ತಿಳಿಸಿದ್ದಾರೆ.

ನಿನ್ನೆ ಸಚಿವರು ಕೆಆರ್ ಪೇಟೆಗೆ ಆಗಮಿಸಿದ್ದಾಗ ಲಕ್ಷ್ಮೀಜಿಯವರು ಸಚಿವರನ್ನ ಸನ್ಮಾನಿಸಿ ಮೌಂಟ್ ಅಬು ಕಾರ್ಯಕ್ರಮಕ್ಕೆ ಆಹ್ವಾನ ಪತ್ರಿಕೆಯನ್ನು ನೀಡಿದಾಗ ಬಹಳ ಸಂತೋಷದಿಂದ ಸಚಿವರು ಒಪ್ಪಿಕೊಂಡಿದ್ದಾರೆ ಎಂದು ತಿಳಿಸಿದ್ದಾರೆ ಕಾರ್ಯಕ್ರಮದಲ್ಲಿ ಬಿಕೆ ರಂಗನಾಥ್ ಬಿಕೆ ಜಯಂತಿ ಹಾಜರಿದ್ದರು.



## ಪಿಹೆಚ್.ಡಿ.ಪದವಿ

**ತುಮಕೂರು:** ತನುಜ ಕೆ.ಎಸ್. ಅವರು ಶ್ರೀದೇವಿ ತಾಂತ್ರಿಕ ಮಹಾವಿದ್ಯಾಲಯದ ವಿದ್ಯುತ್ ಹಾಗೂ ವಿದ್ಯುನ್ಮಾನ



ಇಂಜಿನಿಯರಿಂಗ್ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಬೆಂಗಳೂರಿನ ಡಾ.ಅಂಬೇಡ್ಕರ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನ ವಿದ್ಯುತ್ ಹಾಗೂ ವಿದ್ಯುನ್ಮಾನ ಇಂಜಿನಿಯರಿಂಗ್ ವಿಭಾಗದ ಪ್ರೊ.ಡಾ.ಶಂಕರ ಲಿಂಗಪ್ಪ,ಸಿ.ಬ್ಯಾಲಿಹಾಳರವರ ಮಾರ್ಗದರ್ಶನದಲ್ಲಿ ಮಂಡಿಸಿದ್ದ ''ಆಪ್ಟಿಮಲ್ ಅಲೋಕೇಷನ್ ಆಫ್ ಫ್ಯಾಕ್ಟ್ಸ್ ಕಂಟ್ರೋಲರ್ಸ್ ಇನ್ ಟ್ರಾನ್ಸ್ಮಿಷನ್ ಸಿಸ್ಟಮ್ ಅಂಡರ್ ಕಾಂಟಿಜೆನ್ಸಿ ಕಂಡಿಷನ್ ಯುಸಿಂಗ್ ನಾಲೆಡ್ಜ್ ಬೇಸಡ್ ಅಪ್ರೋಚ್'' ಮಹಾಪ್ರಬಂಧಕ್ಕೆ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಾಗಿದೆ.

## ಸಾಲ ಪಡೆಯಲು ಅರ್ಜಿ

**ಬೆಂಗಳೂರು:** 2024-25 ನೇ ಸಾಲಿನಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ರೈತ ಮಹಿಳೆಯರಲ್ಲಿ ಹೈನುಗಾರಿಕೆಯನ್ನು ಪ್ರೋತ್ಸಾಹಿಸಲು ಹಸು / ಎಮ್ಮೆ ಖರೀದಿಗೆ ಪಡೆಯುವ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡುವ ಮಹಿಳೆಯರಿಗೆ ರಾಜ್ಯ ಸರ್ಕಾರದಿಂದ ಶೇ.6ರ ಬಡ್ಡಿ ಸಹಾಯಧನ ನೀಡವ ಯೋಜನೆ ಜಾರಿಯಲ್ಲಿದ್ದು. ರೈತಾಪಿ ವರ್ಗದವರು ಅರ್ಜಿ ಸಲ್ಲಿಸಿ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮತ್ತು ಇತರೆ ವರ್ಗದ ಆಸಕ್ತ ರೈತಾಪಿ ವರ್ಗದ ಮಹಿಳೆಯರು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ 9480319121, 9448206163 ಸಂಪರ್ಕಿಸಿ.

## ಕಾರ್ಯಾಗಾರ ಮುಂದೂಡಿಕೆ

**ರಾಮನಗರ:** ಪ್ರವಾಸೋದ್ಯಮ ಇಲಾಖೆ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜೇತನಾ ಸಂಸ್ಥೆಯ ಸಹಯೋಗದೊಂದಿಗೆ ರಾಮನಗರ ಜಿಲ್ಲೆಯಲ್ಲಿ ಸಾಹಸ ಪ್ರವಾಸಿ ಚಟುವಟಿಕೆಗಳನ್ನು ಆಯೋಜಿಸುವ ಸಂಬಂಧ ಈ ಯೋಜನೆಯ ನೋಂದಣಿ, ಮಾರ್ಗಸೂಚಿಗಳು, ಅರ್ಜಿ ನಮೂನೆ ಹಾಗೂ ಮಾನ್ಯತೆ ನೀಡುವ ಸಂಬಂಧ ಜು. 24ರಂದು ಬೆಳಿಗ್ಗೆ 11 ಗಂಟೆಗೆ ಕನಕಪುರ ತಾಲ್ಲೂಕಿನ ಕೆರಳಾಳುಸಂದ್ರ ಗ್ರಾಮದ ಆಮೆಗುಂಡಿ (ಇನ್ಸ್ಪೈರ್ ಇಕೋಟೂರಿಸಂ ರೆಸಾರ್ಟ್) ರೆಸಾರ್ಟ್ನಲ್ಲಿ ಆಯೋಜಿಸಲಾಗಿದ್ದ ಒಂದು ದಿನದ ಕಾರ್ಯಾಗಾರವನ್ನು ಮುಂದೂಡಲಾಗಿದೆ ಎಂದು ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ 2024-25ನೇ ಸಾಲಿಗೆ ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯಲು ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. 2023-24ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ವಿದೇಶಿ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್ ವ್ಯಾಸಾಂಗ ಮಾಡುತ್ತಿರುವ ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ (ಮುಸ್ಲಿಮರು, ಕ್ರೈಸ್ತರು, ಜೈನರು, ಸಿಖ್ಖರು, ಬೌದ್ಧರು ಮತ್ತು ಪಾರ್ಸಿಗಳು) ಸಮುದಾಯದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಇದೇ ಸೆಪ್ಟೆಂಬರ್ 30 ಕಡೆಯ ದಿನ. ಅರ್ಹ ಅಭ್ಯರ್ಥಿಗಳುಣಣಠಿ://ಜತಚಿಟಿಜುಣ. ಇಚಿಡಿಟಿಚಿಣಚಿಞಚಿ.ರಠತ.ಟಿ/ಖಜತಚಿಟಿಜುಣ/ ಆಜಠಿಚಿಡಿಣಟಜಟಿಣಖಜಡಿತಿಭಿಜಲಿಂಕ್ ಮೂಲಕ ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ಪ್ರತಿಯನ್ನು ಅಗತ್ಯ ದಾಖಲೆಗಳೊಂದಿಗೆ ಅಲ್ಪಸಂಖ್ಯಾತರ ನಿರ್ದೇಶನಾಲಯ ಬೆಂಗಳೂರು ಇಲ್ಲಿಗೆ ನಿಗದಿಪಡಿಸಿದ ದಿನಾಂಕದಂದು ಸಲ್ಲಿಸುವುದು. ಹೆಚ್ಚಿನ ಮಾಹಿತಿಗೆ ಸಹಾಯವಾಣಿ ಸಂಖ್ಯೆ 82777 99990 ಅಥವಾ ಜಿಲ್ಲಾ ಅಧಿಕಾರಿಗಳ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕಂದಾಯ ಭವನ, 2ನೇ ಮಹಡಿ, ಕೊಠಡಿ ಸಂಖ್ಯೆ: 308, ರಾಮನಗರ. ದೂ. ಸಂಖ್ಯೆ : 080-27271104 ಈ ಕಚೇರಿಯನ್ನು ಸಂಪರ್ಕಿಸುವಂತೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## ವ್ಯಕ್ತಿ ಪತ್ತೆಗೆ ಮನವಿ

**ರಾಮನಗರ:** ರಾಮನಗರ ಟೌನಿನ ಜಿಯಾವುಲ್ಲಾ ಬ್ಲಾಕ್‌ನ ನಿವಾಸಿ ಹಫಿಜ್ (28 ವರ್ಷ) ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ದಾಖಲಾಗಿದೆ.

**ಚಹರೆಯ ವಿವರ:** ಕೋಲುಮುಖ, ಸಾಧಾರಣ ಮೈಕಟ್ಟು, ಗೋಧಿ ಮೈ ಬಣ್ಣ, ಇವರು ಕಾಣೆಯಾಗುವಾಗ ಬಿಳಿ ಬಣ್ಣದ ತುಂಬು ತೋಳಿನ ಶರ್ಟ್ ಹಾಗೂ ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ಉಪನಿರೀಕ್ಷಕರು, ರಾಮನಗರ ಪುರ ಪೊಲೀಸ್ ಠಾಣೆ, ರಾಮನಗರ ಜಿಲ್ಲೆ ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

## ವಾರಸುದಾರರ ಪತ್ತೆಗಾಗಿ

**ಮಂಡ್ಯ:** ಮಂಡ್ಯ ನಗರದ ಕಾರಿ ಮನೆ ಗೇಟ್ ಹತ್ತಿರ ಅಪರಿಚಿತ ಗಂಡಸಿನ ಶವ ಪತ್ತೆಯಾಗಿದೆ ಎಂದು ಮಂಡ್ಯ ಸೆಂಟ್ರಲ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುತ್ತದೆ. ಮೃತ ಗಂಡಸಿಗೆ ಸುಮಾರು 35-40 ವರ್ಷ ವಯಸ್ಸಾಗಿದ್ದು, ಮೈಮೇಲೆ ಕಾಫಿ ಬಣ್ಣದ ತುಂಬುತೋಳಿನ ಸ್ವೆಟರ್, ಮರೂನ್ ಬಣ್ಣದ ಪ್ಯಾಂಟ್ ಹಾಗೂ ಬಿಳಿ ಮತ್ತು ನೀಲಿ ಬಣ್ಣ ಮಿಶ್ರಿತ ತುಂಬು ತೋಳಿನ ಶರ್ಟ್ ಧರಿಸಿದ್ದು ಬಲಗೈಯಲ್ಲಿ ಯೇಸುವಿನ ಶಿಲುಬೆ ಇರುವ ಹಚ್ಚೆ ಇರುತ್ತದೆ. ವಾರಸುದಾರರಿದ್ದಲ್ಲಿ ದೂ.ಸಂ: 9480804873 ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಸೆಂಟ್ರಲ್ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿದ್ಧಗಂಗಾಶ್ರೀಗಳ ದಾಸೋಹ ಸೇವೆ ಆದರ್ಶನೀಯ

**ಮಂಡ್ಯ:** ಪೂಜ್ಯ ಶ್ರೀಶಿವಕುಮಾರ ಸ್ವಾಮೀಜಿ ಅವರು ತಮ್ಮ 111 ವರ್ಷಗಳ ಕಾಲ ನಡೆಸಿದ ದಾಸೋಹ ಸೇವೆ ಇಡೀ ವಿಶ್ವಕ್ಕೆ ಆದರ್ಶನೀಯವಾಗಿದೆ ಎಂದು ಹಿಂದುಳಿದ ವರ್ಗಗಳ ವೇದಿಕೆಯ ಜಿಲ್ಲಾಧ್ಯಕ್ಷ ಎಲ್ ಸಂದೇಶ್ ಹೇಳಿದರು.

ನಗರದ ಶ್ರೀಶಿವಕುಮಾರ ಮಹಾ ಸ್ವಾಮೀಜಿ ಉದ್ಯಾನವನದಲ್ಲಿ ಕಾಯಕಯೋಗಿ ಫೌಂಡೇಶನ್ ಸಿದ್ದಗಂಗಾ ಶ್ರೀಸೇವಾ ಸಮಿತಿ ವತಿಯಿಂದ ಆಯೋಜಿಸಿದ್ದ ದಾಸೋಹ ಹುಣ್ಣಿಮೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

12ನೇ ಶತಮಾನದ ಶಿವಶರಣರ ಕಾಯಕ ಹಾಗೂ ದಾಸೋಹದ ಪರಿಕಲ್ಪನೆಯನ್ನು ತಮ್ಮ ಜೀವನದಲ್ಲಿ ಅಳವಡಿಕೊಂಡು ನಾಡಿನಾದ್ಯಂತ ಶರಣರ ಚಿಂತನೆಯನ್ನು ಪಸರಿಸಿದ ಪೂಜ್ಯ ಸಿದ್ದಗಂಗಾ ಶ್ರೀಗಳ ಹೆಸರಿನಲ್ಲಿ ಈ ದಾಸೋಹ ಹುಣ್ಣಿಮೆ ಕಾರ್ಯಕ್ರಮ ಆಯೋಜಿಸಿರುವುದು ಶ್ಲಾಘನೀಯ ಕೆಲಸವಾಗಿದೆ ಎಂದರು.

ಶ್ರೀ ಶಿವಕುಮಾರ ಮಹಾಸ್ವಾಮಿಜಿಗಳು ಅನ್ನ ಅರಿವು ಕೊಟ್ಟವರು ಮತ್ತು ಸ್ವಾಮೀಜಿಗಳು ಯಾವ ರೀತಿ ಇರಬೇಕು ಎಂದು ಸಮಾನತೆಯ ಸಾಕ್ಷರತೆ ಸಾಮರಸ್ಯವನ್ನು ತಿಳಿಸಿಕೊಟ್ಟ ಮಹಾ ಸ್ವಾಮೀಜಿಯವರು ನಮಗೆಲ್ಲಾ ಆದರ್ಶಪ್ರಾಯರಾಗಿದ್ದಾರೆ ಅಂತಹ ವಿಶ್ವಮಾನವರ ನೆನಪನ್ನು ಮಾಡಿಕೊಳ್ಳುತ್ತಾ ಅವರ ಹೆಸರಿನಲ್ಲಿ ದಾಸೋಹ ಹುಣ್ಣಿಮೆ ಕಾರ್ಯಕ್ರಮ ಆಯೋಜಿಸಿದ್ದು ಇತರರಿಗೆ ಮಾರ್ಗದರ್ಶನ ನೀಡಿದ ಹಾಗೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಡಾ. ಶಿವಕುಮಾರ್ ಮಹಾಸ್ವಾಮೀಜಿಯವರಿಗೆ ಭಾರತ ರತ್ನ ನೀಡುವಂತೆ ಹೋರಾಟ ಮಾಡುತ್ತಿದ್ದೇವೆ ಕಳೆದ ಹತ್ತು ವರ್ಷಗಳಿಂದ ಕರ್ನಾಟಕದ ಯಾವ ವ್ಯಕ್ತಿಗೂ ಭಾರತ ರತ್ನ ನೀಡದಿರುವುದು ವಿಷಾಧನೀಯ ಯಾವುದೇ ಸರ್ಕಾರವಿರಲಿ ಉತ್ತಮ ಮಹನೀಯರನ್ನು ಗುರುತಿಸಿ ಪ್ರಶಸ್ತಿಗಳನ್ನು ನೀಡುವುದರಿಂದ ಪ್ರಶಸ್ತಿಗಳ ಮೌಲ್ಯ ಹೆಚ್ಚುತ್ತದೆ ಇನ್ನು ಮುಂದಾದರೂ ಸಹ ಸರ್ಕಾರ ಡಾ. ಶಿವಕುಮಾರ್ ಮಹಾಸ್ವಾಮೀಜಿ ಅವರಿಗೆ ಭಾರತರತ್ನ ನೀಡಿ ಗೌರವಿಸಲಿ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಟ್ರಸ್ಟ್‌ನ ವತಿಯಿಂದ ಭಕ್ತಾದಿಗಳಿಗೆ ದಾಸೋಹ ಹುಣ್ಣಿಮೆ ಅಂಗವಾಗಿ ಅನ್ನದಾಸೋಹ ನಡೆಸಿದರು.

ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯ ಕೆ. ವಿದ್ಯಾ ಮಂಜುನಾಥ್ ಕಾಯಕಯೋಗಿ ಫೌಂಡೇಶನ್ ಅಧ್ಯಕ್ಷ ಎಂ ಶಿವಕುಮಾರ್ ಸಿದ್ದಗಂಗಾ ಶ್ರೀಸೇವಾ ಸಮಿತಿ ಅಧ್ಯಕ್ಷ ಎಂ ಆರ್ ಮಂಜುನಾಥ್ ಲಿಂಗಾಯಿತ ಮಹಾಸಭಾ ಅಧ್ಯಕ್ಷ ಮಂಜುನಾಥ್ ಬೆಟ್ಟಹಳ್ಳಿ ಶ್ರೀ ಸಿದ್ದಗಂಗಾ ಮಠದ ಹಳೆ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಆಲಕೆರೆ ಮಹೇಶ್ ಲಿಂಗಾಯತ ಸಮುದಾಯದ ಮುಖಂಡ ಅಮೃತ ಶಂಕರ್ ನಾಗಮಂಗಲ ವೀರ ಮಹಾಸಭಾಧ್ಯಕ್ಷ ಕಲ್ಲಿನಾಥಪುರ ಪರಮೇಶ್ ಮುಖಂಡರಾದ ಸುಂಡಹಳ್ಳಿ ಸೋಮಶೇಖರ್. ಅನುಪಮಾ. ಮಹದೇವ್. ಗುತ್ತಿಗೆದಾರ ಗಿರೀಶ್ ಭಾಗವಹಿಸಿದ್ದರು.



# ಆರ್ಥಿಕ ಸ್ವಾವಲಂಬನೆ ಸಾಧಿಸಿ

**ತಿಪಟೂರು:** ಗ್ರಾಮೀಣ ಭಾಗದ ಸ್ತ್ರೀಶಕ್ತಿ ಸ್ವಸಹಾಯ ಗುಂಪಿನ ಮಹಿಳಾ ಸದಸ್ಯರುಗಳನ್ನು ಉದ್ದಿಮೆದಾರರನ್ನಾಗಿ ಮಾಡಿ ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಬಹು ಮುಖ್ಯ ಪಾತ್ರ ವಹಿಸಿರುವ ಸಂಜೀವಿನಿ ಕೆ.ಎಸ್.ಆರ್. ಎಲ್.ಪಿ.ಎಸ್ ಸಂಸ್ಥೆಯು ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಬೆಂಗಳೂರು ಮತ್ತು ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ, (ಸಿಡಾಕ್) ಧಾರವಾಡ ಇವರ ಸಂಯೋಗದೊಂದಿಗೆ ತಾಲೂಕಿನಲ್ಲಿ ಆರು ದಿನಗಳ ವಸತಿ ರಹಿತ ಉದ್ಯಮಶೀಲತಾ ಅಭಿವೃದ್ಧಿ ತರಬೇತಿಯನ್ನು ಸ್ತ್ರೀ ಸಾಮರ್ಥ್ಯ ಯೋಜನೆಯಡಿ ಸ್ವಸಹಾಯ ಗುಂಪಿನ ಸದಸ್ಯರುಗಳಿಗೆ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ನೀಡಲಾಯಿತು.



ಈ ತರಬೇತಿಯ ಅಧ್ಯಕ್ಷತೆಯನ್ನು ಸೇಡಾಕ್ ಸಂಸ್ಥೆ ಜಂಟಿ ನಿರ್ದೇಶಕ ಎಂ.ಎಸ್ ಮಧು ಅಧ್ಯಕ್ಷತೆಯನ್ನುವಹಿಸಿ ಗ್ರಾಮೀಣ ಭಾಗದ ಮಹಿಳಾ ಸದಸ್ಯರುಗಳಿಗೆ ತರಬೇತಿಗಳನ್ನು ನೀಡುತ್ತಾ ಅವರಲ್ಲಿ ಉದ್ಯಮಶೀಲತಾ ಮನೋಭಾವವನ್ನು ಬೆಳೆಸುವಲ್ಲಿ ಸಂಸ್ಥೆ ಅವಿರತವಾಗಿ ಶ್ರಮಿಸುತ್ತಿರುವುದನ್ನು ತಿಳಿಸಿದರು. ತಿಪಟೂರು ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಹೆಚ್,ಎಮ್ ಸುದರ್ಶನ್ ತರಬೇತಿಯನ್ನು ಉದ್ಘಾಟಿಸಿ ಸ್ತ್ರೀಯು ಸಮಾಜದ ಅಭಿವೃದ್ಧಿಯಲ್ಲಿ ಬಹು ಮುಖ್ಯ ಪಾತ್ರವನ್ನು ವಹಿಸುವುದಲ್ಲದೆ ಉತ್ತಮ ಉದ್ದಿಮೆದಾರಳಾಗುವಲ್ಲಿಯೂ ಕೂಡ ಯಶಸ್ಸನ್ನು ಸಾಧಿಸಬೇಕು ಅದರಲ್ಲೂ ಗ್ರಾಮೀಣ ಪ್ರದೇಶದ ಸ್ವ ಸಹಾಯ ಗುಂಪಿನ ಸದಸ್ಯರುಗಳು ಕೇವಲ ಹಣದ ಉಳಿತಾಯ ಅಷ್ಟೇ ಅಲ್ಲದೆ ಜೀವನೋಪಾಯ ಚಟುವಟಿಕೆಗಳನ್ನು ಕೈಗೊಂಡು ಉತ್ತಮ ಉದ್ದಿಮೆದಾರಳ ಆಗಬೇಕು ಎಂದು ಈ ನಿಟ್ಟಿನಲ್ಲಿ ಎನ್.ಆರ್.ಎಲ್.ಎಂ ಯೋಜನೆಯು ಕೈಗೊಂಡಿರುವ ಕ್ರಮಗಳನ್ನು ಶ್ಲಾಘಿಸಿದರು.

ಎನ್‌ಆರ್‌ಎಲ್‌ಎಂ ಯೋಜನೆಯ ವಿಷಯ ನಿರ್ವಾಹಕ ಹರೀಶ್ ಮಾತನಾಡಿ ಗ್ರಾಮೀಣ ಭಾಗದ ಸ್ವ ಸಹಾಯ ಗುಂಪಿಗೆ ಸಂಜೀವಿನಿ ಯೋಜನೆಯು ಒಂದು ವರದಾನವಾಗಿ ಬಂದಿದ್ದು ಮಹಿಳೆಯರು ಇದರ ಸದುಪಯೋಗ ಪಡೆದುಕೊಂಡು ಸಮಾಜದ ಮುಖ್ಯ ವಾಹಿನಿಗೆ ಬರುವಂತೆ ತಿಳಿಸಿದರು.

ತರಬೇತಿ ಕಾರ್ಯಕ್ರಮದಲ್ಲಿ ಮಾರುಕಟ್ಟೆ ಸಮೀಕ್ಷೆ, ಸಣ್ಣ ಉದ್ಯಮ ನಿರ್ವಹಣೆ, ಮಾರುಕಟ್ಟೆ ತಂತ್ರಗಳು, ಗ್ರಾಹಕರ ಮನೋಭಾವನೆ, ಅರಿಯುವಿಕೆ, ಗ್ರಾಹಕರ ಸಂತೃಪ್ತಿ, ಯಶಸ್ವಿ ಉದ್ಯಮಶೀಲರ ಅನುಭವ ಹಂಚಿಕೆ, ಉದ್ಯಮ ಸ್ಥಾಪನೆಯ ಕಾನೂನು ಹಾಗೂ ಕಾಯಿದೆಗಳ ತಿಳುವಳಿಕೆ, ಜಿ.ಎಸ್.ಟಿ, ಆದಾಯ ತೆರಿಗೆ ಲೆಕ್ಕ ಪತ್ರಗಳ ನಿರ್ವಹಣೆ, ಯೋಜನಾ ವರದಿ ತಯಾರಿಕಾ ವಿಧಾನಗಳ ಬಗ್ಗೆ ತರಬೇತಿ ಮಹಿಳೆಯರಿಗೆ ನೀಡಲಾಯಿತು.

ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ತರಬೇತುದಾರರಾದ ಚೈತ್ರಾ ಡಿ ಹಾಗೂ ಆನಂದ್ ಭಾರದ್ವಾಜ್ ಎನ್.ಎಸ್.ಆರ್.ಸಿ.ಈ ಎಲ್-ಐಐಎಂ ಬೆಂಗಳೂರು ಮತ್ತು ಎನ್ ಆರ್ ಎಲ್ ಎಂ ಸಿಬ್ಬಂದಿ ಚಂದ್ರಕಲಾ, ಕೋಕಿಲ, ಮೈತ್ರ ಹಾಗೂ 26 ಗ್ರಾಮ ಪಂಚಾಯಿತಿಗಳಿಂದ ಮಹಿಳಾ ಉದ್ದಿಮೆದಾರರು ಪಾಲ್ಗೊಂಡಿದ್ದರು.

## ಪ್ರವಾಹ ಎಚ್ಚರಿಕೆ ಫಲಕ ಇದ್ದರೂ ಕ್ಯಾರೇ ಎನ್ನದ ಸಾರ್ವಜನಿಕರು

**ಚಾಮರಾಜನಗರ:** ಕಾವೇರಿ ಪ್ರವಾಹ ಬರುವ ಎಚ್ಚರಿಕೆ ಫಲಕ ಇದ್ದರೂ ಕ್ಯಾರೇ ಎನ್ನದ ಸಾರ್ವಜನಿಕರು ನದಿ ದಡದಲ್ಲಿ ಕುಳಿತು ನಿತ್ಯ ಕೆಲಸದಲ್ಲಿ ಇರುವ ಘಟನೆ ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲ್ಲೂಕಿನ ದಾಸನಪುರ ಬಳಿ ಜರುಗಿದೆ.

ಕಾವೇರಿ ಕಣಿವೆಯಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದ ಭರ್ತಿಯಾಗಿರುವ ಕಬಿನಿ ಕೆ ಆರ್ ಎಸ್ ಜಲಾಶಯದಿಂದ ಸರಿ ಸುಮಾರು ಒಂದು ಲಕ್ಷಕ್ಕೂ ಹೆಚ್ಚು ಕ್ಯೂಸೆಕ್ಕೂ ನೀರು ಹೊರ ಬಿಡಲಾಗುತ್ತಿದ್ದು, ಯಾವುದೇ ಕ್ಷಣದಲ್ಲಿ ಕಾವೇರಿ ನದಿ ಪಾತ್ರದಲ್ಲಿ ಪ್ರವಾಹ ಸಂಭವಿಸಲಿದೆ.

ಪ್ರವಾಹದ ಮುನ್ನೆಚ್ಚರಿಕೆ ಇರುವ ಫಲಕಗಳನ್ನು ನದಿ ದಡದಲ್ಲಿ ಹಾಕಿದ್ದರೂ ಸಹ ಕ್ಯಾರೇ ಅನ್ನದ ಜನರು ನದಿ ದಡದಲ್ಲಿ ಬಟ್ಟೆ ಒಗೆಯುವುದು, ಮೀನುಹಿಡಿಯುವ ಕಾಯಕದಲ್ಲಿ ತೊಡಗಿದ್ದಾರೆ.

ಜಿಲ್ಲಾಡಳಿತ, ತಾಲ್ಲೂಕು ಆಡಳಿತ ಈ ಬಗ್ಗೆ ಕ್ರಮ ವಹಿಸಿ ಮುಂದಾಗುವ ಅನಾಹುತ ತಪ್ಪಿಸ ಬೇಕಾಗಿದೆ.



# ಶಾಲೆಗೆ ಭೇಟಿ ನೀಡಿದ ವಿಜ್ಞಾನಿಗಳು

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಾರ್ಟಳ್ಳಿ ಸೆಂಟ್ ಮೇರಿಸ್ ಆಂಗ್ಲ ಶಾಲೆಗೆ ಇಸ್ರೋ ಮಾಜಿ ವಿಜ್ಞಾನಿಗಳು ಭೇಟಿ ಮಾಡಿ ಮಕ್ಕಳಲ್ಲಿ ಗಣಿತ ಹಾಗೂ ವಿಜ್ಞಾನ ವಿಷಯಗಳಲ್ಲಿ ಆಸಕ್ತಿ ಮೂಡಿಸಿದರು.

ಅನಿಷಾ ಸಾವಯವ ಕೃಷಿ ಸಂಸ್ಥೆಯ ಮುಖ್ಯಸ್ಥರಾದ ಶ್ರೀಮತಿ ವಲ್ಲಿರಾಜನ್ ಮತ್ತು ಶ್ರೀ ರಾಜನ್ ರವರ ಸಹಯೋಗದಲ್ಲಿ ಆಯೋಜನೆಗೊಂಡ ಅರ್ಧ ದಿನದ ಕಾರ್ಯಾಗಾರದಲ್ಲಿ ಇಸ್ರೋ ಮಾಜಿ ವಿಜ್ಞಾನಿಗಳಾದ ಹಿರಿಯಣ್ಣರವರು ಮೊದಲ ಅವಧಿಯಲ್ಲಿ ದಿನನಿತ್ಯ ಬಳಕೆಯ ಗಣಿತ ಹಾಗೂ ವಿಜ್ಞಾನದ ಚಟುವಟಿಕೆಗಳನ್ನು ಮಾಡುವ ಮೂಲಕ ವಿದ್ಯಾರ್ಥಿಗಳಲ್ಲಿ ಗಣಿತ ಹಾಗೂ ವಿಜ್ಞಾನಗಳಲ್ಲಿ ಉತ್ತೇಜಸಿದರು.

ಹಾಗೆಯೇ ಎರಡನೇ ಅವಧಿಯಲ್ಲಿ ಮಾತೋರ್ವ ಇಸ್ರೋ ಮಾಜಿ ವಿಜ್ಞಾನಿಯಾದ ಚಂದ್ರಬಾಬು.ವಿ ರವರು ಉಪಗ್ರಹಗಳ ಇತಿಹಾಸ ಹಾಗೂ ಭೂಮಿಯ ಚಲನೆಯ ಬಗೆಗೆ ಸವಿಸ್ತಾರವಾದ ವಿಷಯವನ್ನು ಮಂಡಿಸಿ ಪ್ರೌಢ ಶಾಲಾ ವಿದ್ಯಾರ್ಥಿಗಳ ಪಾಠ ಕಲಿಕೆಗೆ ಪೂರಕವಾದ ಮಾಹಿತಿಯನ್ನು ನೀಡಿದರು. ಇದರಿಂದ ಸಂತಸಗೊಂಡ ಸಂಸ್ಥೆಯ ವ್ಯವಸ್ಥಾಪಕರಾದ ಫಾದರ್ ಟೆನ್ನಿ ಕುರಿಯನ್ ಹಾಗೂ ಮುಖ್ಯ ಶಿಕ್ಷಕರಾದ ಅನ್ನೈನಾದನ್ ಹಾಗೂ ಸಹ ಶಿಕ್ಷಕ/ಶಿಕ್ಷಕಿಯರು ತುಂಬು ಹೃದಯದಿಂದ ಅಭಿನಂದಿಸಿದರು.



# ಭಾರಿ ಗಾತ್ರದ ಮರ ಮುರಿದು ಬಿದ್ದು: ಸಂಚಾರ ಅಸ್ತವ್ಯಸ್ತ



**ಚಾಮರಾಜನಗರ:** ಭಾನುವಾರ ತಡ ರಾತ್ರಿ 12 ಗಂಟೆಗೆ ಭಾರಿ ಗಾತ್ರದ ಮರ ರಸ್ತೆಯಲ್ಲಿ ಮುರಿದು ಬಿದ್ದಿದ್ದು ಅಂತರಾಜ್ಯ ನಡುವೆ ಸಂಚಾರ ತಾತ್ಕಾಲಿಕವಾಗಿ ಸ್ಥಗಿತಗೊಂಡಿರುವ ಘಟನೆ ಚಾಮರಾಜನಗರ ಜಿಲ್ಲೆಯ ಒಡೆಯರಪಾಳ್ಯ ಸಮೀಪ ನಡೆದಿದೆ. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ-ಸತ್ಯಮಂಗಲಂ ಗೆ ತೆರಳುವ ಅಂತರಾಜ್ಯ ರಸ್ತೆಯಲ್ಲಿ ಭಾನುವಾರ ತಡರಾತ್ರಿ ಆಂಡಿಪಾಳ್ಯ ಸಮೀಪ ಭಾರಿ ಗಾತ್ರದ ಮರವೊಂದು ರಸ್ತೆ ಅಡ್ಡಲಾಗಿ ಮುರಿದು ಬಿದಿದ್ದು, ಕರ್ನಾಟಕ ತಮಿಳುನಾಡು ನಡುವೆ ಸಂಚಾರ ತಾತ್ಕಾಲಿಕವಾಗಿ ಸ್ಥಗಿತವಾಗಿದೆ. ಈ ರಸ್ತೆ ಮಾರ್ಗವಾಗಿ ಸಂಚರಿಸುವ ಸುತ್ತಮುತ್ತಲಿನ ಗ್ರಾಮದ ನಿವಾಸಿಗಳು ವಿದ್ಯಾರ್ಥಿಗಳು ಶಾಲಾ ಕಾಲೇಜಿಗೆ ತೆರಳಲು ಆಗದ ಪರಿಸ್ಥಿತಿ ಇದ್ದು, ಅರಣ್ಯಾಧಿಕಾರಿಗಳು ಸ್ಥಳಕ್ಕೆ ಆಗಮಿಸಿ ರಸ್ತೆಗೆ ಅಡ್ಡಲಾಗಿ ಬಿದ್ದಿರುವ ಮರವನ್ನು ತೆರವುಗೊಳಿಸುವಂತೆ ಪರಿವರ್ತನಾ ಗ್ರಾಮ ಸಮಿತಿ ಅಧ್ಯಕ್ಷ ಕೃಷ್ಣಮೂರ್ತಿ ಆಗ್ರಹಿಸಿದ್ದಾರೆ. ಕೊನೆಗೂ ಮರ ತೆರವುಗೊಳಿಸಿದ ಬಳಿಕ ವಾಹನ ಸಂಚಾರ ಆರಂಭವಾಯಿತು.

# ಉದ್ಯಾನವನ ಉಳಿಸಲು ಮನವಿ

**ಕೋಲಾರ:** ಕೋಲಾರ ತಾಲ್ಲೂಕಿನ ಕ್ಯಾಲನೂರು ಗ್ರಾಮ ಪಂಚಾಯತಿಯ ಸರ್ಕಾರಿ ಸಾರ್ವಜನಿಕ ಉದ್ಯಾನವನದ ಸ್ಥಳವನ್ನು ಕಾನೂನು ಬಾಹಿರವಾಗಿ ವಾಣಿಜ್ಯ ಮಳಿಗೆಗಳನ್ನು ಕಟ್ಟಲು ಪ್ರಯತ್ನಿಸುತ್ತಿರುವುದು ಖಂಡನೀಯ ಮತ್ತು ಯಾವುದೇ ಕಾರಣಕ್ಕೂ ಉದ್ಯಾನವನ ಉದ್ಯಾನವನವಾಗಿಯೇ ಉಳಿಯಲಿ ಎಂದು ಮೇಡಿಹಾಳ ಡಾ ಮುನಿಆಂಜಿನಪ್ಪ ಆಗ್ರಹಿಸಿದರು.



ದಮನಿತರ ಸಂಘರ್ಷ ಸಮಿತಿಯ ರಾಜ್ಯಾಧ್ಯಕ್ಷರಾದ ಡಾ ಮುನಿಆಂಜಿನಪ್ಪ ನೇತೃತ್ವದಲ್ಲಿ ಕ್ಯಾಲನೂರು ಗ್ರಾಮಸ್ಥರು ಇಂದುಮುಖ್ಯಕಾರ್ಯನಿರ್ವಹಣಾಧಿಕಾರಿಗಳಾದ ಪದ್ಮ ಬಸವಂತಪ್ಪರವರನ್ನು ಬೇಟಿಯಾಗಿ ಮನವಿ ಸಲ್ಲಿಸಿದರು .

ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ರಾಜ್ಯಾಧ್ಯಕ್ಷ ಮೇಡಿಹಾಳ ಡಾ ಮುನಿಆಂಜಿನಪ್ಪ ಕ್ಯಾಲನೂರು ಗ್ರಾಮ ಪಂಚಾಯತಿ ಮತ್ತು ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಮುಂಭಾಗದಲ್ಲಿರುವ ಸ್ಥಳಕ್ಕೆ ಸರ್ಕಾರಿ ಸಾರ್ವಜನಿಕ ಉದ್ಯಾನವನವೆಂದು ದಾಖಲಾತಿಗಳಲ್ಲಿದ್ದು ಇದನ್ನು ಕೆಲವರು ಒತ್ತುವರಿ ಮಾಡಿದ್ದು ಈ ಸರ್ಕಾರಿ ಉದ್ಯಾನವನವನ್ನು ಅಭಿವೃದ್ಧಿಗೊಳಿಸುವ ಸಲುವಾಗಿ 29-6-2024ರಂದು ಒತ್ತುವರಿದಾರರನ್ನು ತೆರವುಗೊಳಿಸಲು ಕ್ಯಾಲನೂರು ಗ್ರಾಮಪಂಚಾಯತಿಯಿಂದ ಪ್ರಕಟಣೆ ಹೊರಡಿಸಲಾಗಿತ್ತು .16-7-2024 ರಂದು ಒತ್ತುವರಿದಾರರನ್ನು ತೆರವುಗೊಳಿಸಲಾಯಿತು . ಆದರೆ ಪಿಡಿಓ ಈ ಸರ್ಕಾರಿ ಉದ್ಯಾನವನ್ನು ಅಭಿವೃದ್ಧಿ ಪಡಿಸದೆ ಕೆಲವರ ಒತ್ತಡಕ್ಕೆ ಮಣಿದು ಈ ಸ್ಥಳದಲ್ಲಿ ವಾಣಿಜ್ಯ ಮಳಿಗೆಗಳನ್ನು ಕಟ್ಟಲು ಹಾಗೂ ಇನ್ನಿತರ ವಾಣಿಜ್ಯ ಉದ್ದೇಶಕ್ಕೆ ಬಳಸಲು ಪ್ರತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು . ಸರ್ಕಾರಿ ಸಾರ್ವಜನಿಕ ಉದ್ಯಾನದ ಸ್ಥಳವನ್ನು ಯಾವುದೇ ಕಾರಣಕ್ಕೂ ಬೇರೆ ಬೇರೆ ಉದ್ದೇಶಕ್ಕೆ ಬಳಸದೆ ಉದ್ಯಾನವನ್ನೇ ಅಭಿವೃದ್ಧಿಪಡಿಸಬೇಕೆಂದರು. ಒಂದುವೇಳೆ ಉದ್ಯಾನವನದ ಸ್ಥಳವನ್ನು ಬೇರೆ ಉದ್ದೇಶಗಳಿಗೆ ಬಳಿಸಿದರೆ ಮುಂದಿನ ದಿನಗಳಲ್ಲಿ ಪ್ರತಿಭಟನಾ ಹೋರಾಟವನ್ನು ಹಮ್ಮಿಕೊಳ್ಳಲಾಗುವುದೆಂದರು . ಈ ಸಂದರ್ಭದಲ್ಲಿ ಕ್ಯಾಲನೂರು ಗ್ರಾಮಸ್ಥರಾದ ಅನಿಲಕುಮಾರ್ ,ಪ್ರಕಾಶ್ ,ರಾಮಪ್ಪ ನಾಯಕ್ , ಅಂಬರೀಶ್, ರಾಮಕೃಷ್ಣಪ್ಪ ,ಶಂಕರಪ್ಪ ಇದ್ದರು.

# ಗುರುಗಳಿಗೆ ಕೃತಜ್ಞತೆ ಸಲ್ಲಿಸುವುದು ಭಾರತೀಯ ಸನಾತನ ಧರ್ಮದ ಮುಖ್ಯ ಗುರಿ

**ಚಾಮರಾಜನಗರ:** ವ್ಯಾಸ ಪೂರ್ಣಿಮಿಯ ಅಂಗವಾಗಿ ಋಗ್ವೇದಿ ಯೂತ್ ಕ್ಲಬ್ ವತಿಯಿಂದ ನಗರದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ಪ್ರಕಾಶ ಭವನದಲ್ಲಿ ಮುಖ್ಯ ಸಂಚಾಲಕರಾದ ರಾಜಯೋಗಿನಿ ಬಿಕೆ ದಾನೇಶ್ವರಿ ರವರಿಗೆ ಫಲ ತಾಂಬೂಲಗಳನ್ನು ನೀಡಿ ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತ ಸುರೇಶ್ ಎನ್ ಋಗ್ವೇದಿ ಗೌರವಿಸಿದರು.



ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ರಾಜಯೋಗಿನಿ ಬಿಕೆ ದಾನೇಶ್ವರಿ ಅಕ್ಕರವರು ಮಾತನಾಡಿ ಪೂರ್ಣತೆ, ಸಂಪನ್ನತೆ ,ಸಂಪೂರ್ಣತೆಗೆ ಕೊಂಡೊಯ್ಯುವ ಗುರು ಸತ್ಯ ಜ್ಞಾನವನ್ನು, ಸತ್ಯಮಾರ್ಗವನ್ನು, ಸನ್ಮಾರ್ಗವನ್ನು ತೋರಿಸುತ್ತಾರೆ. ಗುರುಗಳಿಗೆ ಕೃತಜ್ಞತೆ ಸಲ್ಲಿಸುವುದು ಭಾರತೀಯ ಸನಾತನ ಧರ್ಮದ ಮುಖ್ಯ ಗುರಿಯಾಗಿದೆ. ಪ್ರತಿಯೊಬ್ಬರಿಗೂ ಗುರು ಅಗತ್ಯ. ಗುರು ಜ್ಞಾನದ ಬೆಳಕು .ಮುಕ್ತಿಯ ಮಾರ್ಗದರ್ಶಕ. ಸನ್ಮಾರ್ಗದ ಶ್ರೇಷ್ಠತೆಯ ಮೂಲಕ ಶಿಷ್ಯ ವೃಂದಕ್ಕೆ ಆಧ್ಯಾತ್ಮಿಕ ಮೌಲ್ಯಗಳನ್ನ, ಆತ್ಮದ ಶಕ್ತಿಯನ್ನು, ಜೀವನದ ಸಂದೇಶಗಳನ್ನ ತಲುಪಿಸುವ ಗುರು ಮತ್ತು ಎಲ್ಲಾ ಸದ್ಗುರುಗಳಿಗೆ ನಮನಗಳನ್ನು ಸಲ್ಲಿಸುವ ದಿನವಾಗಿದೆ ಎಂದರು. ಸಂಸ್ಕೃತಿ ಚಿಂತಕ ಹಾಗೂ ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತ ಸುರೇಶ್ ಎನ್ ಋಗ್ವೇದಿ.ಮಾತನಾಡಿ ವ್ಯಾಸ ಪೂರ್ಣಿಮೆಯನ್ನು ಗುರುಪೂರ್ಣಿಮೆ ಆಗಿ ಆಚರಿಸಲಾಗುತ್ತದೆ. ಭಾರತೀಯ ಸನಾತನ ಧರ್ಮದಲ್ಲಿ ಬಹು ಮುಖ್ಯವಾದ ಕಾರ್ಯವಾಗಿದೆ. ವ್ಯಾಸರು ಭಗವಂತನ ಅವತಾರವಾಗಿ ಭಾರತೀಯ ಸನಾತನ ಧರ್ಮದ ಸಾಹಿತ್ಯ ,ಸಂಸ್ಕೃತಿಯ, ಧರ್ಮದ ಮೌಲ್ಯಗಳಾದ ವೇದಗಳನ್ನು ವಿಭಜಿಸಿ ಋಗ್ವೇದ, ಯಜುರ್ವೇದ ,ಸಾಮವೇದ, ಅಥರ್ವಣವೇದಗಳನ್ನು ನೀಡಿ ಸಂಸ್ಕೃತಿಯ ದಿವ್ಯ ಸಂದೇಶಗಳನ್ನು ಅರ್ಥ ಮಾಡಿಸಿದ ಮಹಾನ್ ವ್ಯಕ್ತಿ ಹಾಗೂ ಶಕ್ತಿ. ವ್ಯಾಸರ ಜನ್ಮದಿನವೇ ಗುರುಪೂರ್ಣಿಮೆಯಾಗಿದ್ದು ಮಾನವ ಜನಾಂಗ ಸರ್ವ ರೀತಿಯಲ್ಲಿಯೂ ಸನ್ಮಾರ್ಗದಲ್ಲಿ ನಡೆಯಲು ಗುರುಗಳ ಅಗತ್ಯ ಹಾಗೂ ಮಾರ್ಗದರ್ಶನ, ಸಲಹೆ, ಶುಭ ಹಾರೈಕೆ ತುಂಬಾ ಅಗತ್ಯವಿದೆ . ಸರ್ವರನ್ನು ಗುರು ಭಕ್ತಿಯೊಂದೇ ಕಾಪಾಡುತ್ತದೆ. ಗುರುಭಕ್ತಿಯನ್ನು ಸದಾ ಇಟ್ಟುಕೊಳ್ಳೋಣ. ಜನ್ಮವನ್ನು ಸಾರ್ಥಕ ಪಡಿಸಿಕೊಳ್ಳೋಣ. ಗುರುಗಳನ್ನು ಗೌರವಿಸಿ ಸಂತೋಷ ಪಡೋಣ ಎಂದು ತಿಳಿಸಿ, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ರಾಜಯೋಗಿನಿ ಬಿಕೆ ದಾನೇಶ್ವರಿ ರವರು ಹಲವು ದಶಕಗಳಿಂದ ಚಾಮರಾಜನಗರದಲ್ಲಿ ಜನತೆಗೆ ಸನ್ಮಾರ್ಗದ ದಿವ್ಯ ಸ್ಪೂರ್ತಿಯ ಸಂದೇಶಗಳನ್ನು ನೀಡಿ, ಶಾಂತಿಯ ಜೀವನವನ್ನ ನಡೆಸಲು ಗುರುವಾಗಿ ಸನ್ಮಾರ್ಗದಲ್ಲಿ ನಡೆಸುತ್ತಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ಗೀತಕ್ಕ, ಬಿಕೆ ಆರಾಧ್ಯ, ಋಗ್ವೇದಿ ಯೂತ್ ಕ್ಲಬ್ ಅಧ್ಯಕ್ಷೆ ಶರಣ್ಯ ಎಸ್ ಋಗ್ವೇದಿ ಉಪಸ್ಥಿತರಿದ್ದರು.

## ಸಂಜೆ ಟಿಪ್ಸ್



## ಸ್ಯಾಮ್ಸಂಗ್ ಗ್ಯಾಲಕ್ಸಿ ವಾಚ್ 7 ಮತ್ತು ಬಡ್ಸ್3 ಈಗ ಪ್ರೀ-ಆರ್ಡರ್‌ಗೆ ಲಭ್ಯ

ಸ್ಯಾಮ್ಸಂಗ್ ಕಂಪನಿಯು ಇತ್ತೀಚಿಗೆ ಹೊಸದಾಗಿ ಲಾಂಚ್ ಮಾಡಿರುವ ಗ್ಯಾಲಕ್ಸಿ ಬಡ್ಸ್3, ಗ್ಯಾಲಕ್ಸಿ ಬಡ್ಸ್3 ಪ್ರೊ, ಗ್ಯಾಲಕ್ಸಿ ವಾಚ್7 ಮತ್ತು ಗ್ಯಾಲಕ್ಸಿ ವಾಚ್ ಅಲ್ಟ್ರಾ ಸ್ಮಾರ್ಟ್ವಾಚ್ಗಳನ್ನು ಪ್ರೀ ಆರ್ಡರ್ ಮಾಡುವ ಗ್ರಾಹಕರಿಗೆ ಅತ್ಯಾಕರ್ಷಕ ಕೊಡುಗೆಗಳನ್ನು ಘೋಷಿಸಿದೆ. ಗ್ಯಾಲಕ್ಸಿ ವಾಚ್7 ಮತ್ತು ಗ್ಯಾಲಕ್ಸಿ ವಾಚ್ ಅಲ್ಟ್ರಾ ವಾಚ್ ಗಳು ಗ್ಯಾಲಕ್ಸಿ ಏಐ ಆಧರಿತವಾದ ಧರಿಸಬಹುದಾದ ಡಿವೈಸ್ಗಳಾಗಿದ್ದು, ಪ್ರತಿಯೊಬ್ಬರಿಗೂ ಆರೋಗ್ಯ ಕಾಳಜಿ ವಹಿಸಲು ವಿನ್ಯಾಸಗೊಳಿಸಲಾದ ಸಾಧನಗಳಾಗಿವೆ.ಗ್ಯಾಲಕ್ಸಿ ವಾಚ್ ಅಲ್ಟ್ರಾ - ಗ್ಯಾಲಕ್ಸಿ ವಾಚ್ ಉತ್ಪನ್ನಗಳ ಶ್ರೇಣಿಗೆ ಹೊಸತಾದ ಮತ್ತು ಅತ್ಯಂತ ಶಕ್ತಿಯುತ ಸೇರ್ಪಡೆಯಾಗಿದೆ. ಅಪಾರ ಬುದ್ಧಿವಂತಿಕೆ ಮತ್ತು ಸಾಮರ್ಥ್ಯ ಉಳ್ಳ ಈ ವಾಚ್ ಅತ್ಯುತ್ತಮ ಫಿಟ್ ನೆಸ್ ಅನುಭವಗಳನ್ನು ಗ್ರಾಹಕರಿಗೆ ಒದಗಿಸುತ್ತದೆ. ಈ ಮೂಲಕ ಹೆಚ್ಚು ಫಿಟ್ ನೆಸ್ ಸಾಧನೆ ಮಾಡಲು ಪ್ರೇರೇಪಿಸುತ್ತದೆ. ಹೊಸದಾಗಿ ಕ್ವಿಕ್ ಬಟನ್ ಅನ್ನು ಸೇರಿಸಲಾಗಿದೆ. ಈ ಬಟನ್ ಅನ್ನು ಬಳಸಿ ನೀವು ತಕ್ಷಣವೇ ವರ್ಕೌಟ್ ಪ್ರಾರಂಭಿಸಬಹುದು ಮತ್ತು ನಿಯಂತ್ರಿಸಬಹುದು. ಜೊತೆಗೆ ನಿಮ್ಮ ಅಗತ್ಯಗಳಿಗೆ ಸರಿಹೊಂದುವಂತೆ ಇತರ ಕಾರ್ಯಗಳನ್ನು ಪ್ಲಾನ್ ಮಾಡಬಹುದು. ಹೆಚ್ಚುವರಿಯಾಗಿ ಅನಿವಾರ್ಯ ಸಂದರ್ಭಗಳಲ್ಲಿ ಸುರಕ್ಷತೆಗಾಗಿ ನೀವು ಇದರಲ್ಲಿರುವ ಎಮರ್ಜೆನ್ಸಿ ಸೈರನ್ ಅನ್ನು ಬಳಸಬಹುದು.ವ್ಯಾಯಾಮದ ನಂತರ ಗ್ಯಾಲಕ್ಸಿ ವಾಚ್ ಅಲ್ಟ್ರಾದಲ್ಲಿರುವ ವಾಚ್ ಫೇಸ್ನಲ್ಲಿ ಅವತ್ತಿನ ವ್ಯಾಯಾಮಗಳ ಅಂಕಿಅಂಶಗಳನ್ನು ಪರಿಶೀಲಿಸಬಹುದು. 3,000 ನಿಟ್ಗಳಷ್ಟು ಗರಿಷ್ಠ ಬ್ರೈಟ್ ನೆಸ್ ಹೊಂದಿರುವ ಗ್ಯಾಲಕ್ಸಿ ವಾಚ್ ಅಲ್ಟ್ರಾ ಅತ್ಯಂತ ಪ್ರಕಾಶಮಾನವಾದ ಸೂರ್ಯನ ಬೆಳಕಿನಲ್ಲಿಯೂ ಸಹ ಸುಲಭವಾಗಿ ಓದುವ ಸಾಮರ್ಥ್ಯ ಹೊಂದಿದೆ. ಗ್ಯಾಲಕ್ಸಿ ವಾಚ್ ಅಲ್ಟ್ರಾ ವಾಚ್ ಗ್ಯಾಲಕ್ಸಿ ವಾಚ್ ಶ್ರೇಣಿಯಲ್ಲಿಯೇ ದೀರ್ಘವಾದ ಬ್ಯಾಟರಿ ಅವಧಿಯನ್ನು ಹೊಂದಿದ್ದು, ಗ್ರಾಹಕರು ದೀರ್ಘ ಕಾಲ ಸಾಹಸ ಕ್ರೀಡೆಗಳನ್ನು ಆಡಲು ಅನುವು ಮಾಡಿಕೊಡುತ್ತದೆ.

## ಚಪಾತಿ ಪಕೋಡಾ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಮಧ್ಯಮ ಗಾತ್ರದ ಆಲೂಗಡ್ಡೆ 2-3, ಹೆಚ್ಚಿದ ಕೊತ್ತಂಬರಿ ಸೊಪ್ಪು-1 ಚಮಚ, ರುಚಿಗೆ ತಕ್ಕಷ್ಟು ಉಪ್ಪು, ಚಿಲಿ ಫ್ಲೇಕ್ಸ್ 1 ಟೀ ಸ್ಪೂನ್, ಕೆಂಪು ಮೆಣಸಿನ ಪುಡಿ 1/2 ಟೀಸ್ಪೂನ್, ಸಣ್ಣದಾಗಿ ಹೆಚ್ಚಿದ ಹಸಿ ಮೆಣಸಿನಕಾಯಿ ಸ್ವಲ್ಪ, ಕಾಲು ಚಮಚ ಓಮ, ಕಡಲೆ ಹಿಟ್ಟು 4 ಚಮಚ, ಅರ್ಧ ಚಮಚ ಜೀರಿಗೆ, ಚಿಟಿಕೆ ಅರಿಶಿನ ಪುಡಿ, ಕರಿಯಲು ಎಣ್ಣೆ, 1 ಕಪ್ ನೀರು.

### ಮಾಡುವ ವಿಧಾನ

ಮೊದಲು ಆಲೂಗಡ್ಡೆಯನ್ನು ಬೇಯಿಸಿ ಸಿಪ್ಪೆ ತೆಗೆದು ಮ್ಯಾಶ್ ಮಾಡಿಕೊಳ್ಳಿ. ಅದಕ್ಕೆ ಕೊತ್ತಂಬರಿ ಸೊಪ್ಪು, ಉಪ್ಪು, ಮೆಣಸಿನ ಪುಡಿ, ಚಿಲ್ಲಿ ಫ್ಲೇಕ್ಸ್, ಹಸಿ ಮೆಣಸಿನಕಾಯಿ ಎಲ್ಲವನ್ನೂ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಇನ್ನೊಂದು ಬೌಲ್ನಲ್ಲಿ ಕಡಲೆಹಿಟ್ಟು, ಜೀರಿಗೆ, ಓಮ, ಅರಿಶಿನ ಎಲ್ಲವನ್ನೂ ಹಾಕಿ ಅಗತ್ಯಕ್ಕೆ ತಕ್ಕಷ್ಟು ನೀರನ್ನು ಬೆರೆಸಿಕೊಳ್ಳಿ. ಪಕೋಡಾ ಹಿಟ್ಟಿನ ಹದಕ್ಕೆ ಕಲೆಸಿಕೊಳ್ಳಿ. ಚಪಾತಿ ತೆಗೆದುಕೊಂಡು ಆಲೂ ಮಿಶ್ರಣವನ್ನು ಚಪಾತಿ ಮೇಲೆ ಹರಡಿ, ಅದನ್ನು ನಾಲ್ಕು ಭಾಗಗಳಾಗಿ ಕತ್ತರಿಸಿ. ಒಂದೊಂದನ್ನೇ ಮಡಿಸಿ ಕಡಲೆ ಹಿಟ್ಟಿನ ಮಿಶ್ರಣದಲ್ಲಿ ಅದ್ದಿ ಕಾದ ಎಣ್ಣೆಯಲ್ಲಿ ಕರಿಯಿರಿ. ಹೊಂಬಣ್ಣ ಬರುವವರೆಗೂ ಕರಿದರೆ ಬಿಸಿ ಪಕೋಡಾ ಸವಿಯಲು ಸಿದ್ಧ. ಚಪಾತಿ ಪಕೋಡಾವನ್ನು ಕೆಚಪ್ ಅಥವಾ ಗ್ರೀನ್ ಚಟ್ನಿಯೊಂದಿಗೆ ಸರ್ವ್ ಮಾಡಿ.

## ಸಿನಿಮಾ ಸೋಲಿನ ಬಗ್ಗೆ ಅಕ್ಷಯ್ ಕುಮಾರ್ ಬೇಸರ



ಅಕ್ಷಯ್ ಕುಮಾರ್ ನಟನೆಯ ಸಿನಿಮಾಗೆ ಬಂಡವಾಳ ಹೂಡಿದ್ರೆ ಕೈತುಂಬಾ ಹಣ ಬರುತ್ತೆ ಅನ್ನೋದು ಬಾಲಿವುಡ್ ನಿರ್ಮಾಪಕರ ನಂಬಿಕೆಯಾಗಿತ್ತು. ಅಂತೆಯೇ ಅಕ್ಕಿ ಮುಟ್ಟಿದೆಲ್ಲಾ ಚಿನ್ನವಾಗುವ ಕಾಲವು ಇತ್ತು. ಅಕ್ಷಯ್ ಕುಮಾರ್ ನಟನೆಯ ಸಿನಿಮಾಗಳು ಬಾಕ್ಸ್ ಆಫೀಸ್ ನಲ್ಲಿ ಭರ್ಜರಿ ಕಲೆಕ್ಷನ್ ಮಾಡುತ್ತಿದ್ದವರು.ಆದರೆ ಇತ್ತೀಚೆಗೆ ಅಕ್ಷಯ್ ನಟನೆಯ ಸಿನಿಮಾಗಳು ಬಾಕ್ಸ್ ಆಫೀಸ್ ನಲ್ಲಿ ಬ್ಯಾಕ್ ಟು ಬ್ಯಾಕ್ ನೆಲಕಚ್ಚುತ್ತಿವೆ. ಇದರಿಂದ ನೊಂದ ನಟ ವಿಧಿ ಬದಲಿಸಲು ಯಾರಿಂದಲೂ ಸಾಧ್ಯವಿಲ್ಲ ಎಂದು ನೊಂದುಕೊಂಡಿದ್ದಾರೆ. ಈ ವರ್ಷ ಅಕ್ಷಯ್ ಕುಮಾರ್ ನಟನೆಯ ಎರಡು ಸಿನಿಮಾಗಳು ರಿಲೀಸ್ ಆಗಿವೆ. ಈ ಎರಡೂ ಚಿತ್ರಗಳು ಫ್ಲಾಪ್ ಎನಿಸಿಕೊಂಡಿವೆ. 'ಬಡೇ ಮಿಯಾ ಚೋಟೆ ಮಿಯಾ' ಹೀನಾಯವಾಗಿ ಸೋತಿದೆ. ಅದೇ ರೀತಿ 'ಸರ್ಫಿರಾ' ಸಿನಿಮಾ ಕೂಡ ಸೋತು ಹೋಗಿದೆ. ಈ ಚಿತ್ರದ ಬಜೆಟ್ 100 ಕೋಟಿ ರೂಪಾಯಿ. ಆದರೆ, ಸಿನಿಮಾ ಗಳಿಸಿದ್ದು ಕೇವಲ 21 ಕೋಟಿ ರೂಪಾಯಿ. ಸ್ಟಾರ್ ಆಗಿ ಮೆರೆಯುತ್ತಿರುವ ಅಕ್ಷಯ್ ಕುಮಾರ್ಗೆ ಈ ರೀತಿ ಮುಖಭಂಗ ಆದರೆ ಬೇಸರ ಆಗಿಯೇ ಆಗುತ್ತದೆ. ಈ ಬಗ್ಗೆ ಅವರು ಮಾತನಾಡಿದ್ದಾರೆ.

'ಪ್ರತಿ ಸಿನಿಮಾ ಹಿಂದೆಯೂ ಸಾಕಷ್ಟು ಶ್ರಮ ಇರುತ್ತದೆ. ನನ್ನ ಸಿನಿಮಾ ಸೋಲುವುದನ್ನು ನೋಡುವುದು ನೋವುಂಟು ಮಾಡುತ್ತದೆ. ಪ್ರತಿ ಸೋಲು ಕೂಡ ಯಶಸ್ಸಿನ ಮೌಲ್ಯವನ್ನು ತಿಳಿಸುತ್ತದೆ. ನಿಮ್ಮ ಹಸಿವನ್ನು ಹೆಚ್ಚಿಸುತ್ತದೆ. ನನ್ನ ವೃತ್ತಿ ಜೀವನದ ಆರಂಭದಲ್ಲೇ ಸೋಲನ್ನು ಡೀಲ್ ಮಾಡುವುದನ್ನು ಕಲಿತೆ' ಎಂದಿದ್ದಾರೆ ಅಕ್ಷಯ್ ಕುಮಾರ್. ಅಕ್ಷಯ್ ಕುಮಾರ್ ಅವರ ವೃತ್ತಿ ಜೀವನದ ಆರಂಭದಲ್ಲಿ ಸತತ ಸೋಲು ಕಂಡರು. ಈ ಕಾರಣಕ್ಕೆ ಅವರು ದೇಶ ತೊರೆದು ಕೆನಡಾದಲ್ಲಿ ಸೆಟಲ್ ಆಗಲು ಮುಂದಾಗಿದ್ದರು. 'ಪ್ರತಿ ಸೋಲು ನಿಮ್ಮ ಮೇಲೆ ಪ್ರಭಾವ ಬೀರುತ್ತದೆ, ನೋವನ್ನು ಕೊಡುತ್ತದೆ. ಆದರೆ, ಸಿನಿಮಾದ ವಿಧಿಯನ್ನು ಬದಲಿಸುವುದಿಲ್ಲ. ಅದು ನಮ್ಮ ನಿಯಂತ್ರಣದಲ್ಲಿ ಇಲ್ಲ. ಕಷ್ಟಪಟ್ಟು ಕೆಲಸ ಮಾಡೋದು ಮಾತ್ರ ನಿಮ್ಮ ಕೈಯಲ್ಲಿ ಇದೆ. ನಾನು ನನ್ನ ಮುಂದಿನ ಸಿನಿಮಾ ಬಗ್ಗೆ ಗಮನ ಹರಿಸುತ್ತೇನೆ' ಎಂದಿದ್ದಾರೆ ಅಕ್ಷಯ್. ಕಳೆದ ಕೆಲ ವರ್ಷಗಳಲ್ಲಿ ಅಕ್ಷಯ್ ಕುಮಾರ್ ನಟನೆಯ ಸುಮಾರು 11 ಸಿನಿಮಾಗಳು ರಿಲೀಸ್ ಆಗಿವೆ. ಈ ಪೈಕಿ ಸಿನಿಮಾಗಳು ಗೆದ್ದಿದ್ದು ಎರಡು ಸಿನಿಮಾಗಳು ನೆಲಕಚ್ಚಿವೆ.

## ಮಲಗುವ ಮುನ್ನ ಈ 5 ಯೋಗಾಸನಗಳನ್ನು ಮಾಡಿ



ನೀವು ರಾತ್ರಿಯಲ್ಲಿ ನಿದ್ರೆಗೆ ಬೀಳಲು ಪ್ರಯತ್ನಿಸುತ್ತಿರುವಾಗ ಗಂಟೆಗಳ ಕಾಲ ಟಾಸ್ ಮತ್ತು ತಿರುಗುತ್ತೀರಾ? ದಿನದ ಒತ್ತಡವು ನಿಮ್ಮನ್ನು ನಿದ್ರಿಸದಂತೆ ಮಾಡುತ್ತದೆಯೇ? ಹೌದು ಎಂದಾದರೆ, ಯೋಗವು ನಿಮಗೆ ರಾಮಬಾಣವಾಗಬಹುದು. ಮಲಗುವ ಮುನ್ನ ಕೆಲವು ವಿಶೇಷ ಯೋಗಾಸನಗಳನ್ನು ಮಾಡುವುದರಿಂದ ಒತ್ತಡ ಕಡಿಮೆಯಾಗುತ್ತದೆ ಮತ್ತು ನಿದ್ರೆಯ ಗುಣಮಟ್ಟ ಸುಧಾರಿಸುತ್ತದೆ. ಯೋಗವು ದೇಹ ಮತ್ತು ಮನಸ್ಸನ್ನು ಒಟ್ಟಿಗೆ ಸಮತೋಲನಗೊಳಿಸುತ್ತದೆ. ನಿಧಾನವಾಗಿ ಮಾಡುವ ಯೋಗಾಸನಗಳು ಒತ್ತಡವನ್ನು ಹೋಗಲಾಡಿಸಲು ಮತ್ತು ದೇಹವನ್ನು ವಿಶ್ರಾಂತಿ ಮಾಡಲು ಸಹಾಯ ಮಾಡುತ್ತದೆ. ನಿಯಮಿತವಾದ ವ್ಯಾಯಾಮವು ನಿದ್ರೆಯ ಸಮಸ್ಯೆಗಳಿಂದ ಪರಿಹಾರವನ್ನು ನೀಡುತ್ತದೆ. ಈ ಆಸನದಲ್ಲಿ, ನಿಮ್ಮ ಮೊಣಕಾಲುಗಳನ್ನು ಬಾಗಿಸಿ ಮತ್ತು ನಿಮ್ಮ ಹಣೆಯನ್ನು ನೆಲದ ಮೇಲೆ ವಿಶ್ರಾಂತಿ ಮಾಡಿ. ಈ ಆಸನವು ಬೆನ್ನು ಮತ್ತು ಮನಸ್ಸು ಎರಡನ್ನೂ ಶಾಂತಗೊಳಿಸುತ್ತದೆ. ಈ ಆಸನದಲ್ಲಿ, ನಿಮ್ಮ ಬೆನ್ನಿನ ಮೇಲೆ ಮಲಗಿ ಮತ್ತು ನಿಮ್ಮ ಕಾಲುಗಳನ್ನು ಗೋಡೆಯ ಮೇಲೆ ನೇರವಾಗಿ ಇರಿಸಿ. ಈ ಆಸನವು ಕಾಲುಗಳಲ್ಲಿನ ಆಯಾಸವನ್ನು ಹೋಗಲಾಡಿಸುತ್ತದೆ ಮತ್ತು ರಕ್ತ ಪರಿಚಲನೆಯನ್ನು ಹೆಚ್ಚಿಸುತ್ತದೆ. ಈ ಆಸನವು ಸೊಂಟವನ್ನು ತೆರೆಯುತ್ತದೆ ಮತ್ತು ಅತಿಯಾದ ಕುಳಿತುಕೊಳ್ಳುವಿಕೆ ಅಥವಾ ತೀವ್ರವಾದ ವ್ಯಾಯಾಮದಿಂದ ಉಂಟಾಗುವ ಬಿಗಿತವನ್ನು ತೆಗೆದುಹಾಕುತ್ತದೆ. ಹೊಟ್ಟೆಯ ಮೇಲೆ ಮಲಗಿ, ಕೈಗಳನ್ನು ಭುಜದ ಕೆಳಗೆ ಇರಿಸಿ ಮತ್ತು ನಿಧಾನವಾಗಿ ಮೇಲಕ್ಕೆತ್ತಿ. ಈ ಆಸನವು ಬೆನ್ನುಮೂಳೆಯನ್ನು ಹೊಂದಿಕೊಳ್ಳುವಂತೆ ಮಾಡುತ್ತದೆ ಮತ್ತು ಒತ್ತಡವನ್ನು ತೆಗೆದುಹಾಕುತ್ತದೆ. ಇದು ಕೊನೆಯ ಮತ್ತು ಪ್ರಮುಖ ಆಸನವಾಗಿದೆ. ಇದರಲ್ಲಿ ದೇಹವು ಸಂಪೂರ್ಣವಾಗಿ ವಿಶ್ರಾಂತಿ ಪಡೆಯುತ್ತದೆ ಮತ್ತು ಮನಸ್ಸು ಶಾಂತವಾಗಿರುತ್ತದೆ.

### ಹೆಲ್ತ್ ಟಿಪ್ಸ್

ಮಲಗುವ ಮುನ್ನ ಸುಮಾರು 15-20 ನಿಮಿಷಗಳ ಕಾಲ ಈ ಆಸನಗಳನ್ನು ಮಾಡಿ. ನಿಯಮಿತ ಅಭ್ಯಾಸದಿಂದ ನೀವು ಶೀಘ್ರದಲ್ಲೇ ವ್ಯತ್ಯಾಸವನ್ನು ನೋಡಲು ಪ್ರಾರಂಭಿಸುತ್ತೀರಿ. ನೆನಪಿಡಿ, ಯೋಗವು ಕ್ರಮೇಣ ವ್ಯಾಯಾಮವಾಗಿದೆ. ಇದನ್ನು ನಿಯಮಿತವಾಗಿ ಮಾಡುವುದರಿಂದ ಮಾತ್ರ ನೀವು ಹೆಚ್ಚಿನ ಪ್ರಯೋಜನಗಳನ್ನು ಪಡೆಯುತ್ತೀರಿ. ಇದಲ್ಲದೇ ಮಲಗುವ ಮುನ್ನ ಮೊಬೈಲ್ ಫೋನ್, ಟಿವಿ ಮತ್ತು ಕಂಪ್ಯೂಟರ್ ಬಳಕೆಯನ್ನು ಕಡಿಮೆ ಮಾಡಿ.

ಶಾಂತವಾಗಿರುವ ಮತ್ತು ಕತ್ತಲೆಯ ಕೋಣೆಯಲ್ಲಿ ಮಲಗಲು ಪ್ರಯತ್ನಿಸಿ. ಉತ್ತಮ ನಿದ್ರೆಗೆ ಯೋಗ ಉತ್ತಮ ಆಯ್ಕೆಯಾಗಿದೆ. ಇದನ್ನು ನಿಮ್ಮ ದಿನಚರಿಯಲ್ಲಿ ಸೇರಿಸಿ ಮತ್ತು ಒತ್ತಡ ಮುಕ್ತ ಜೀವನವನ್ನು ನಡೆಸಿ.

## ತರುಣ್, ಸೋನಲ್ ಮದುವೆ ಆಮಂತ್ರಣ ಪತ್ರಿಕೆ ಹೇಗಿದೆ ಗೊತ್ತಾ?

ಚಂದನವನದಲ್ಲಿ ಮದುವೆ ಸಂಭ್ರಮ ಮನೆ ಮಾಡಿದೆ. ತರುಣ್ ಸುಧೀರ್ ಮತ್ತು ಸೋನಲ್ ಹಸೆಮಣೆ ಏರೋದಕ್ಕೆ ಸಜ್ಜಾಗಿದ್ದಾರೆ. ಕಲರ್‌ಫುಲ್ ಫೋಟೋಶೂಟ್ ಮೂಲಕ ಮದುವೆ ಡೇಟ್ ಅನೌನ್ಸ್ ಮಾಡಿದ ಬೆನ್ನಲ್ಲೇ ಈಗ ಆಮಂತ್ರಣ ಪತ್ರಿಕೆ ಕೂಡ ಸದ್ದು ಮಾಡುತ್ತಿದೆ. ತರುಣ್ ಮತ್ತು ಸೋನಲ್ ಮಂಥೆರೋ ಮದುವೆ ಕಾರ್ಡ್ ಆಕರ್ಷಕವಾಗಿದೆ. ಮದುವೆ ಪತ್ರಿಕೆ ಮೇಲೆ ಇಬ್ಬರ ರೊಮ್ಯಾಂಟಿಕ್ ಫೋಟೋ ಹಾಕಿಸಿದ್ದು, ಒಳಗೆ ಮದುವೆ ಮುಹೂರ್ತ ಸಮಾರಂಭ ಕುರಿತು ಬರೆಯಲಾಗಿದೆ. ತರುಣ್ ಸುಧೀರ್ ಮತ್ತು ಸೋನಲ್ ಜೋಡಿ ಇದೇ ಆಗಸ್ಟ್ 10, 11ರಂದು ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾಗಿದ್ದಾರೆ. ಆಗಸ್ಟ್ 10ರಂದು ಸಂಜೆ 6:30 ನಂತರ ಆರತಕ್ಷತೆ ಕಾರ್ಯಕ್ರಮ, ಆ.11ರಂದು ಬೆಳಗ್ಗೆ 10:50 ರಿಂದ 11:35ರ ಶುಭ ಮುಹೂರ್ತದಲ್ಲಿ ಮದುವೆ ನಡೆಯಲಿದೆ. ಹಿಂದೂ ಸಂಪ್ರದಾಯದಂತೆ ಮದುವೆ ಜರುಗಲಿದೆ. ಈ ಎರಡು ದಿನದ ಸಮಾರಂಭವು ಬೆಂಗಳೂರಿನ ಮೈಸೂರು ರಸ್ತೆಯಲ್ಲಿರುವ ಆರ್.ವಿ ಕಾಲೇಜ್ ಬಳಿ ಇರುವ ಪೂರ್ಣಿಮಾ ಪ್ಯಾಲೇಸ್‌ನಲ್ಲಿ ನಡೆಯಲಿದೆ.





## ಕಾಲಿನ ಕೆಸರು ಹುಣ್ಣಿಗೆ ಮನೆಮದ್ದು

### ಬ್ಯೂಟಿ ಟಿಪ್ಸ್



ಮಳೆಗಾಲ ಎಂದರೆ ಗಿಜಿಗುಡುವ ವಾತಾವರಣ. ಈ ವೇಳೆ ನಮ್ಮ ಕಾಲುಗಳು ಸಾಮಾನ್ಯವಾಗಿ ಒದ್ದೆಯಾಗೆ ಇರುತ್ತದೆ. ಹೊರಗೆ ಹೆಚ್ಚಾಗಿ ತಿರುಗಾಡುವ ಜನರಿಗಂತೂ ಕಾಲನ್ನು ಶುಚಿಯಾಗಿ ಇಡುವುದು ಸವಾಲಿನ ಕೆಲಸವೇ ಸರಿ. ಸದಾ ಒದ್ದೆಯಾದ ಕಾಲಿಗೆ ಕೆಸರು ಹುಣ್ಣು ಆಗುವುದು ಸರ್ವೇ ಸಾಮಾನ್ಯ. ಈ ಕಾಡುವ ಕೆಸರು ಹುಣ್ಣಿಗೆ ದುಬಾರಿ ಕ್ರೀಮ್ ಲೇಪಿಸುವ ಅವಶ್ಯಕತೆ ಇಲ್ಲ. ಮನೆಯಲ್ಲಿ ಸಿಗುವ ಕೇವಲ ಎರಡೇ ವಸ್ತುವಿನಿಂದ ಕೆಸರು ಹುಣ್ಣಿಗೆ ನೀವೇ ಪರಿಹಾರ ಕಂಡುಕೊಳ್ಳಬಹುದು. ರಾತ್ರಿ, ಮಲಗುವ ಮುನ್ನ ನಿಮ್ಮ ಪಾದಗಳನ್ನು ಚೆನ್ನಾಗಿ ತೊಳೆದು ಒರೆಸಿ, ನಂತರ ಎರಡು ಚಮಚ ಶುದ್ಧ ತೆಂಗಿನ ಎಣ್ಣೆಗೆ ಸ್ವಲ್ಪ ಅರಿಶಿನ ಬೆರೆಸಿ ಕಾಲು ಬೆರಳುಗಳ ನಡುವೆ ಹಚ್ಚುತ್ತಾ ಬಂದರೆ ಕೆಸರು ಹುಣ್ಣು ತಂತಾನೇ ಮಾಯವಾಗುತ್ತದೆ.

## ಇಮ್ಮಡಿಗೊಂಡ ಚಾರ್ಮಾಡಿ ಘಾಟ್ ಸೌಂದರ್ಯ





ಮಳೆಗಾಲದಲ್ಲಿ ಪ್ರವಾಸಿಗರನ್ನು ಸೆಳೆಯುವ ಪ್ರಮುಖ ಸ್ಥಳಗಳಲ್ಲಿ ಚಾರ್ಮಾಡಿ ಘಾಟ್ ಕೂಡ ಒಂದಾಗಿದೆ. ಮಲೆನಾಡಿನ ಚಿಕ್ಕಪುಟ್ಟ ಜಲಪಾತಗಳೆಲ್ಲಾ ಜೀವಂತಿಕೆ ಪಡೆದುಕೊಳ್ಳುವ ದೃಶ್ಯ ವೈಭವವನ್ನು ಕಣ್ತುಂಬಿಕೊಳ್ಳುವುದೇ ಕಣ್ಣಿಗೆ ಹಬ್ಬವಿದ್ದಂತೆ.

ಜಲಧಾರೆ, ಹಸಿರನ್ನೇ ಮೈವೆತ್ತು ನಿಂತ ಬೆಟ್ಟಗಳು, ಕಡಿದಾದ ಕಣಿವೆಯ ದಾರಿ, ಜಲಪಾತ, ಪ್ರಪಾತ, ಹಸಿರು, ಮಳೆ, ಗುಡ್ಡವನ್ನು ಚುಂಬಿಸುವ ಬೆಳ್ಳಿ ಮೋಡಗಳು ಒಂದೇ, ಎರಡೇ.

ಹೀಗೆ ಚಾರ್ಮಾಡಿ ಘಾಟ್ ಸೌಂದರ್ಯವನ್ನು ಕಣ್ತುಂಬಿಕೊಳ್ಳಲು ಅಪಾರ ಸಂಖ್ಯೆಯ ಪ್ರವಾಸಿಗರು ಭೇಟಿ ಕೊಡುತ್ತಾರೆ. ಅಲ್ಲಲ್ಲಿ ಕಾಣಸಿಗುವ ಜಲಪಾತಗಳ ಸೌಂದರ್ಯಕ್ಕೆ ಮಾರು ಹೋಗುತ್ತಾರೆ. ಭೂಮಿ, ಭಾನು, ವರುಣ ಮೂರೂ ಒಂದಾಗಿ ಪ್ರಕೃತಿ ಸೌಂದರ್ಯವನ್ನು ಇಮ್ಮಡಿಗೊಳಿಸುವ ದೃಶ್ಯವನ್ನು ಒಮ್ಮೆ ನೋಡಬನ್ನಿ.

ಮೂಡಿಗೆರೆ ತಾಲ್ಲೂಕಿನ ಚಾರ್ಮಾಡಿ ಘಾಟ್ ಸೌಂದರ್ಯ ನಿಮ್ಮ ಮನಸ್ಸಿಗೆ ಮುದ ನೀಡುತ್ತದೆ. ಮಳೆಗಾಲದಲ್ಲಿ ಇಳೆಯ ದೃಶ್ಯವನ್ನು ನೋಡಿಯೇ ಸವಿಯಬೇಕು. ಯುಗಾದಿಯಲ್ಲಿ ಗೋಡೆ ಚೆಂದ, ಮಳೆಗಾಲದಲ್ಲಿ ಭೂಮಿ ಚೆಂದ ಎಂಬ ಮಾತು ಪ್ರಚಲಿತದಲ್ಲಿದೆ.

ಬೇಸಿಗೆಯಲ್ಲಿ ಬರುವ ಯುಗಾದಿಯಲ್ಲಿ ಗೋಡೆಗಳಿಗೆ ಸುಣ್ಣ, ಬಣ್ಣ ಬಳಿಯುವುದರಿಂದ ಅಂದವಾಗಿ ಕಾಣುತ್ತದೆ. ಅದೇ ರೀತಿ ಮಳೆಗಾಲದಲ್ಲಿ ಪ್ರಕೃತಿಯ ಸೌಂದರ್ಯ ಹೆಚ್ಚುತ್ತದೆ. ಅಂತಹ ಸೌಂದರ್ಯವನ್ನೊಮ್ಮೆ ನೀವು ಕಣ್ತುಂಬಿಕೊಳ್ಳಲು ಚಾರ್ಮಾಡಿ ಘಾಟ್ ಗೆ ಹೋಗಿ ಬನ್ನಿ.

ಮಳೆ ತಡವಾಗಿ ಆರಂಭವಾದ ಕಾರಣ ಏಪ್ರಿಲ್, ಮೇ ತಿಂಗಳುಗಳಲ್ಲಿ ಚಾರ್ಮಾಡಿ ಘಾಟಿಯಲ್ಲೂ ಒಣ ವಾತಾವರಣ ಮೂಡಿತ್ತು. ಚಿಕ್ಕ ಹಾಗೂ ದೊಡ್ಡ ಜಲಪಾತ,ಹಳ್ಳ ತೊರೆಗಳಲ್ಲೂ ನೀರು ಇಳಿದು ಹೋಗಿತ್ತು. ಮೇ ಮಧ್ಯ ಭಾಗದ ಬಳಿಕ ಆರಂಭವಾದ ಬೇಸಿಗೆ ಮಳೆ ಮತ್ತೆ ಮುಂಗಾರು ಆರಂಭದವರೆಗೂ ಮುಂದುವರಿದಿದೆ.ಒಣಗಿ ಹೋಗಿದ್ದ ಘಾಟಿ ಭಾಗದಲ್ಲಿ ಹಸಿರು ಮತ್ತೆ ಜೀವಕಳೆ ಪಡೆದಿದ್ದು ಜಲಪಾತ, ಹಳ್ಳ,ತೊರೆಗಳು ತುಂಬಿಕೊಳ್ಳತೊಡಗಿವೆ . ಘಾಟಿ ರಸ್ತೆಯಲ್ಲಿ ಸಂಚರಿಸುವ ವೇಳೆ ಒಂದನೆ ತಿರುವಿನಿಂದಲೇ ಘಾಟಿಯ ಗುಡ್ಡದಿಂದ ಬೀಳುವ ನೀರು ಕಲ್ಲುಗಳ ಮೇಲೆ ಹರಿದು ಪುಟ್ಟ ಪುಟ್ಟ ಜಲಪಾತಗಳನ್ನು ಸೃಷ್ಟಿಸಿವೆ. 25 ಕಿಮೀ ವ್ಯಾಪ್ತಿಯ ಚಾರ್ಮಾಡಿ ಘಾಟಿಯಲ್ಲಿ ಏಳರಿಂದ ಎಂಟು ಕಡೆ ಈ ರೀತಿ ನೀರು ಬೀಳುತ್ತಿದೆ. ಇನ್ನೂ ಹೆಚ್ಚಿನ ಜಲಪಾತಗಳು ಘಾಟಿಯ ತಿರುವುಗಳು ಕಳೆದ ಬಳಿಕ ಕಾಣಸಿಗುತ್ತವೆ. ಹತ್ತರಿಂದ ಹದಿನೈದರಷ್ಟು ತೊರೆಗಳಲ್ಲಿ ನೊರೆ ನೀರು ಧುಮ್ಮಿಕ್ಕುತ್ತಿದೆ. ಸುತ್ತಲೂ ಹಸಿರು ಪರಿಸರ,ಮಂಜು ಮಳೆಯ ವಾತಾವರಣ ಪ್ರವಾಸಿಗರ ಪ್ರಯಾಣದ ಆಯಾಸ ದೂರ ಮಾಡುತ್ತದೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಬಂಧು ಬಾಂಧವರಿಂದ ಪ್ರೀತಿ, ವಾಹನ ಯೋಗ, ಆಸ್ತಿ ಸಂಪಾದನೆ, ರಾಜ ದಂಡ ಕಟ್ಟುವಿಕೆ.

**ವೃಷಭ:** ವಾಹನದ ರಿಪೇರಿ ಖರ್ಚು, ಹಣದ ವಿಷಯದಲ್ಲಿ ದ್ರೋಹ, ವಾಗ್ವಾದ.

**ಮಿಥುನ:** ದೇಹಾಲಸ್ಯ, ಚಿಂತೆ, ಚಂಚಲ ಮನಸ್ಸು, ಅಪಘಾತವಾಗುವ ಸಂಭವ, ಕಾರ್ಯಭಂಗ, ಧನ ಲಾಭ.

**ಕಟಕ:** ದೇಹದಲ್ಲಿ ಜಡತ್ವ, ಸ್ತ್ರೀ ಸೌಖ್ಯ, ಕಲಹದಿಂದ ಧನ ಹಾನಿ, ಮಾತಿನ ಮೇಲೆ ಜಾಗರೂಕತೆ ವಹಿಸಿ.

**ಸಿಂಹ:** ಸಹೋದರರ ಕಲಹ, ಹಿತ ಶತ್ರುಗಳಿಂದ ತೊಂದರೆ, ಪರಸ್ಥಳವಾಸ, ಮಹಿಳೆಯಿಂದ ಕಷ್ಟ.

**ಕನ್ಯಾ:** ಸಾಧುಸಂತರ ದರ್ಶನ, ಮನಸ್ತಾಪ, ಮಾನಹಾನಿಯಾಗುವ ಸಾಧ್ಯತೆ, ಗೋಪಾಲಕರಿಗೆ ಲಾಭ.

**ತುಲಾ:** ಮಾತಿನ ಚಕಮಕಿ, ರಕ್ತ ಪಿತ್ತದ ವ್ಯಾಧಿ, ಭಯ ಭೀತಿ, ಗರ್ಭಿಣಿ ಸ್ತ್ರೀಯಿಂದ ಶಾಪ.

**ವೃಶ್ಚಿಕ:** ಅತಿಯಾದ ದುಃಖ, ಧನ ಹಾನಿ, ತೀರ್ಥಕ್ಷೇತ್ರ ವಾಸ, ಶತ್ರುಗಳಿಂದ ತೊಂದರೆ.

**ಧನಸ್ಸು:** ಬಂಧುಗಳ ಸಮಾಗಮ, ದೇವತಾ ಕಾರ್ಯಗಳಲ್ಲಿ ಶ್ರದ್ಧೆ, ಅಧಿಕ ಖರ್ಚು, ಹಿರಿಯರ ಆಗಮನದಿಂದ ಸಂತೋಷ.

**ಮಕರ:** ಸಿಡುಕುತನ ಹೆಚ್ಚುವಿಕೆ, ಮತ್ತೊಬ್ಬರಿಂದ ತೊಂದರೆ, ವಸ್ತ್ರ ಆಭರಣ ಸಂಗ್ರಹ.

**ಕುಂಭ:** ಹೊಸ ವಸ್ತ್ರಾಭರಣ ಪ್ರಾಪ್ತಿ, ಜ್ವರಾದಿರೋಗ, ಪಿತ್ರ ಹಾನಿ, ಶತ್ರು ಭಾದೆ.

**ಮೀನ:** ನೀಚ ಜನರ ಸಹವಾಸ, ಮನಸ್ತಾಪ, ಪಾಳೇಗಾರನಂತೆ ವರ್ತನೆ, ರಾಜದಂಡವನ್ನ ಕಟ್ಟಬೇಕಾದೀತು.

## ಇಂಟರ್‌ನ್ಯಾಷನಲ್ ಸೆಲ್ಫ್‌ಕೇರ್ ದಿನ




ಜುಲೈ 24 ರಂದು ಅಂತರರಾಷ್ಟ್ರೀಯ ಸ್ವಯಂ-ಆರೈಕೆ ದಿನವನ್ನು ಆಚರಿಸಲಾಗುತ್ತದೆ. ಇದು ಸ್ವಾಸ್ಥ್ಯದ ಮೂಲಾಧಾರವಾಗಿ ಸ್ವಯಂ-ಆರೈಕೆಯ ಮಹತ್ವವನ್ನು ಒತ್ತಿಹೇಳುತ್ತದೆ. ಈ ದಿನದಂದು, ಪ್ರಪಂಚದಾದ್ಯಂತದ ವ್ಯಕ್ತಿಗಳು ತಮ್ಮ ದೈನಂದಿನ ದಿನಚರಿಯ ಭಾಗವಾಗಿ ಸ್ವಯಂ-ಆರೈಕೆಯನ್ನು ಮಾಡಲು ಮತ್ತು ಅದನ್ನು ಆದ್ಯತೆಯಾಗಿ ಪರಿವರ್ತಿಸಲು ಪ್ರೋತ್ಸಾಹಿಸಲಾಗುತ್ತದೆ. ಇದು ಒಂದು ಮೈಲಿಗಲ್ಲು, ಮತ್ತು ಆರೋಗ್ಯದ ಪರಿಣಾಮಕಾರಿ ಸ್ವಯಂ-ನಿರ್ವಹಣೆಯ ಪ್ರಯೋಜನಗಳ ಬಗ್ಗೆ ಮತ್ತಷ್ಟು ಅರಿವು ಮೂಡಿಸಲು ಒಂದು ಅವಕಾಶ.

ಜನರು ತಮ್ಮನ್ನು ತಾವು ಕಾಳಜಿ ವಹಿಸುವ ಮತ್ತು ತಮ್ಮನ್ನು ತಾವು ಮೊದಲ ಸ್ಥಾನದಲ್ಲಿರಿಸಿಕೊಳ್ಳುವ ಅಗತ್ಯವನ್ನು ಅರಿತುಕೊಳ್ಳುವುದರಿಂದ ಸ್ವಯಂ-ಆರೈಕೆಯು ನಂಬಲಾಗದಷ್ಟು ಮಹತ್ವದ್ದಾಗಿದೆ. ಇದು ಜನರು ಅದರ ಬಗ್ಗೆ ಮಾತನಾಡುವಂತೆ ಮಾಡಿದೆ ಮತ್ತು ಇತರರು ತಮ್ಮ ಆರೋಗ್ಯ ಮತ್ತು ಸ್ವಾಸ್ಥ್ಯವನ್ನು ನಿಯಂತ್ರಿಸುವ ಆಸಕ್ತಿಯನ್ನು ಹೆಚ್ಚಿಸಿದ್ದಾರೆ. ಇಂದು, ನಾವು ನಿಮ್ಮನ್ನು ಸ್ವಯಂ-ಆರೈಕೆಯನ್ನು ಅಭ್ಯಾಸ ಮಾಡಲು ಒತ್ತಾಯಿಸುತ್ತೇವೆ, ನೀವು ಮಾಡುವುದೆಲ್ಲವೂ ಒಂದು ನಡಿಗೆಯನ್ನು ತೆಗೆದುಕೊಳ್ಳುತ್ತದೆ.

ಸ್ವ-ಆರೈಕೆಯು ಆರೋಗ್ಯದ ನಿರ್ಣಾಯಕ ಮೂಲಾಧಾರವಾಗಿದೆ ಮತ್ತು ಅದರ ಬಗ್ಗೆ ಜಾಗೃತಿ ಮೂಡಿಸಲು 2011 ರಲ್ಲಿ ಇಂಟರ್‌ನ್ಯಾಷನಲ್ ಸೆಲ್ಫ್-ಕೇರ್ ಫೌಂಡೇಶನ್ನಿಂದ ಅಂತರರಾಷ್ಟ್ರೀಯ ಸ್ವಯಂ-ಆರೈಕೆ ದಿನವನ್ನು ಸ್ಥಾಪಿಸಲಾಯಿತು. ಜುಲೈ 24 ರಂದು ಅಂತರರಾಷ್ಟ್ರೀಯ ಸ್ವಯಂ-ಆರೈಕೆ ದಿನದ ಆಚರಣೆಯು ಹಗಲು ಅಥವಾ ರಾತ್ರಿಯ ಯಾವುದೇ ಸಮಯದಲ್ಲಿ, ವಾರದ ಏಳು ದಿನಗಳು, ಋತುವಿನ ಹೊರತಾಗಿಯೂ ಅನುಭವಿಸಬಹುದಾದ ಸ್ವಯಂ-ಆರೈಕೆಯ ಪ್ರಯೋಜನಗಳನ್ನು ಒತ್ತಿಹೇಳುತ್ತದೆ. ಸ್ವಯಂ-ಆರೈಕೆಯ ಪ್ರಯೋಜನಗಳು, ಇನ್ನೊಂದು ರೀತಿಯಲ್ಲಿ ಹೇಳುವುದಾದರೆ, ಜೀವಿತಾವಧಿಯಲ್ಲಿ ಉಳಿಯುತ್ತದೆ ಮತ್ತು ಒಂದೇ ದಿನಕ್ಕೆ ಸೀಮಿತವಾಗಿಲ್ಲ. ಅಂತರಾಷ್ಟ್ರೀಯ ಸ್ವಯಂ-ಆರೈಕೆ ದಿನವು ಅದ್ಭುತವಾದ ಗಮನವನ್ನು ನೀಡುತ್ತದೆ ಮತ್ತು ಸ್ವಯಂ-ಆರೈಕೆ ಕಾರ್ಯಕ್ರಮಗಳನ್ನು ಪ್ರಚಾರ ಮಾಡಲು ಅಥವಾ ಪ್ರತಿಬಿಂಬಿಸಲು ಅವಕಾಶವನ್ನು ನೀಡುತ್ತದೆ.

ವಾರ್ಷಿಕ ವಿಷಯದ ಸುತ್ತ ಸುತ್ತುವ, ಅಂತರಾಷ್ಟ್ರೀಯ ಸ್ವಯಂ-ಆರೈಕೆ ದಿನವು ಕೇಂದ್ರಬಿಂದುವಾಗಿ ಕಾರ್ಯನಿರ್ವಹಿಸುತ್ತದೆ ಮತ್ತು ಪ್ರಪಂಚದಾದ್ಯಂತ ಆರೋಗ್ಯಕರ ಜೀವನ ಸ್ವ-ಆರೈಕೆ ಕಾರ್ಯಕ್ರಮಗಳ ಜಾಗೃತಿಯನ್ನು ಹೆಚ್ಚಿಸುವ ಅವಕಾಶವಾಗಿದೆ. ಸ್ವ-ಆರೈಕೆಯ ಪರಿಕಲ್ಪನೆಯು ಸ್ವಲ್ಪ ಸಮಯದವರೆಗೆ ಇದೆ, ಆದರೆ ಇದು ಇತ್ತೀಚೆಗೆ ಕ್ಷೇಮಕ್ಕೆ ಒತ್ತು ನೀಡುವ ಕಾರಣದಿಂದಾಗಿ ಹೆಚ್ಚಿನ ಗಮನವನ್ನು ಪಡೆದುಕೊಂಡಿದೆ. ಇದು ಆರೋಗ್ಯಕರ ಆಹಾರವನ್ನು ಅನುಸರಿಸುವುದು ಮತ್ತು ಸರಿಯಾದ ಶುಚಿತ್ವವನ್ನು ವ್ಯಾಯಾಮ ಮಾಡುವುದರಿಂದ ಹಿಡಿದು ಒಬ್ಬರ ದೈನಂದಿನ ದಿನಚರಿಯಲ್ಲಿ ರೋಗ-ತಡೆಗಟ್ಟುವ ತಂತ್ರಗಳನ್ನು ಅಭಿವೃದ್ಧಿಪಡಿಸುವುದು.

# ಅಮೆರಿಕಾ ಉಪಾಧ್ಯಕ್ಷೆ ಬಗ್ಗೆ ಭವಿಷ್ಯ ನುಡಿದಿದ್ದ ಮಲ್ಲಿಕಾ ಶೆರಾವತ್.!





**ಮುಂಬೈ:** ಅಮೆರಿಕ ಅಧ್ಯಕ್ಷ ಜೋ ಬೈಡನ್, ಅಧ್ಯಕ್ಷೀಯ ಚುನಾವಣಾ ರೇಸ್ನಿಂದ ಹಿಂದೆ ಸರಿದಿದ್ದು, ಅಮೆರಿಕ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರಿಗೆ ಅವಕಾಶ ತೆರೆದಿಟ್ಟಿದ್ದಾರೆ. ಅಮೆರಿಕ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರೇ ಡೆಮಾಕ್ರೆಟಿಕ್ ಪಕ್ಷದ ಅಧ್ಯಕ್ಷೀಯ ಚುನಾವಣಾ ಅಭ್ಯರ್ಥಿ ಆಗಬೇಕು ಅನ್ನೋ ಬಯಕೆಯನ್ನ ಡೆಮಾಕ್ರೆಟಿಕ್ ಪಕ್ಷದ ಹಲವು ಹಿರಿಯ ನಾಯಕರು ಈಗಾಗಲೇ ವ್ಯಕ್ತಪಡಿಸಿದ್ದಾರೆ.

ಆದರೆ ಇವರ ಬಗ್ಗೆ ಬಾಲಿವುಡ್ ತಾರೆ ಮಲ್ಲಿಕಾ ಶೆರಾವತ್ 2009ರಲ್ಲೇ ಭವಿಷ್ಯ ನುಡಿದಿದ್ದರು.! ತಮಾಷೆ ಎನಿಸಿದರೂ ಇದು ಸತ್ಯ. 2009 ರ ಮಲ್ಲಿಕಾ ಶೆರಾವತ್ ಮಾಡಿರುವ ಹಳೆಯ ಟ್ವೀಟ್ ಈಗ ವೈರಲ್ ಆಗುತ್ತಿದೆ. ಅವರು ಅಂದು ಮಾಡಿದ್ದ ಟ್ವೀಟ್ ನಲ್ಲಿ ಶೆರಾವತ್ ಅವರು ಕಮಲಾ ಹ್ಯಾರಿಸ್ ಅವರ ಅಧ್ಯಕ್ಷೀಯ ಪಟ್ಟವೇರುವ ಕುರಿತು ಊಹಿಸಿದ್ದರು.

ನಾನು ಒಂದು ಫ್ಯಾನ್ಸಿ ಈವೆಂಟ್ ನಲ್ಲಿ, ಯುಎಸ್ ಅಧ್ಯಕ್ಷೆ ಆಗಬಹುದಾದ ಕಮಲಾ ಹ್ಯಾರಿಸ್ ಭೇಟಿಯಾದೆ.. ಚಿಕ್ಸ್ ರೂಲ್..! ಎಂದು ಬರೆದುಕೊಂಡಿದ್ದ ಮಲ್ಲಿಕಾ ಈವೆಂಟ್ನಲ್ಲಿನ ಕಮಲಾ ಹ್ಯಾರಿಸ್ ಜೊತೆಗಿನ ಫೋಟೋವನ್ನು ಹಂಚಿಕೊಂಡಿದ್ದರು. ಹ್ಯಾರಿಸ್ ಆ ಸಮಯದಲ್ಲಿ ಸ್ಯಾನ್ ಫ್ರಾನ್ಸಿಸ್ಕೋದ ಜಿಲ್ಲಾ ಅಟಾರ್ನಿಯಾಗಿದ್ದರು. ಕಮಲಾ ಹ್ಯಾರಿಸ್ ಪ್ರಸ್ತುತ ಯುಎಸ್ ಉಪಾಧ್ಯಕ್ಷರಾಗಿದ್ದಾರೆ.

# ಕಮಲಾ ಹ್ಯಾರಿಸ್ ಗೆ ಭಾರಿ ಬೆಂಬಲ



**ವಾಷಿಂಗ್ಟನ್:** ಅಮೆರಿಕದ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರು ಅಧ್ಯಕ್ಷ ಸ್ಥಾನಕ್ಕೆ ಪಕ್ಷದ ನಾಮನಿರ್ದೇಶನವನ್ನು ಗೆಲ್ಲಲು ಸಾಕಾಗುವಷ್ಟು ಡೆಮಾಕ್ರಟಿಕ್ ಪ್ರತಿನಿಧಿಗಳ ಬೆಂಬಲ ಗಳಿಸಿದ್ದಾರೆ ಎಂದು ಮೂಲಗಳನ್ನು ಉಲ್ಲೇಖಿಸಿ ಸಿಎನ್‌ಎನ್ ವರದಿ ಮಾಡಿದೆ. ಮೊದಲ ಮತದಾನದಲ್ಲಿ ನಾಮನಿರ್ದೇಶನವನ್ನು ಗೆಲ್ಲಲು ಅಗತ್ಯವಿರುವ 1,976ಕ್ಕಿಂತಲೂ ಹೆಚ್ಚಿನ ಪ್ರತಿನಿಧಿಗಳ ಬೆಂಬಲವನ್ನು ಇದುವರೆಗೆ ಹ್ಯಾರಿಸ್ ಗಳಿಸಿದ್ದಾರೆ ಪಡೆಯುವಲ್ಲಿ ಎಂದು ಸೋಮವಾರ ರಾತ್ರಿ ಅಧಿಕಾರಿಗಳು ದೃಢಪಡಿಸಿರುವುದಾಗಿ ಸಿಎನ್‌ಎನ್ ವರದಿ ಮಾಡಿದೆ. 'ಇವತ್ತು ನಮ್ಮ ಪಕ್ಷದ ಅಭ್ಯರ್ಥಿಯಾಗಲು ಅಗತ್ಯವಿರುವ ಬೆಂಬಲವನ್ನು ಗಳಿಸಿದ್ದಕ್ಕಾಗಿ ನಾನು ಹೆಮ್ಮೆ ಪಡುತ್ತೇನೆ. ಮುಂದಿನ ತಿಂಗಳು ನಾನು ದೇಶದಾದ್ಯಂತ ಪ್ರಯಾಣಿಸುತ್ತೇನೆ ಮತ್ತು ಎಲ್ಲದರ ಬಗ್ಗೆ ಅಮೆರಿಕನ್ನರೊಂದಿಗೆ ಮಾತನಾಡುತ್ತೇನೆ. ನಮ್ಮ ಪಕ್ಷ ಮತ್ತು ನಮ್ಮ ದೇಶವನ್ನು ಒಗ್ಗೂಡಿಸಲು ಮತ್ತು ಡೊನಾಲ್ಡ್ ಟ್ರಂಪ್ರನ್ನು ಸೋಲಿಸಲು ನಾನು ಉದ್ದೇಶಿಸಿದ್ದೇನೆ' ಎಂದು ಕಮಲಾ ಹ್ಯಾರಿಸ್ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ. ಮಂಗಳವಾರ ಕಮಲಾ ಹ್ಯಾರಿಸ್ ವಿಸ್ಕಾನ್ಸಿನ್ ರಾಜ್ಯದಲ್ಲಿ ಅಧ್ಯಕ್ಷೀಯ ಚುನಾವಣೆಯ ಪ್ರಚಾರ ಕಾರ್ಯಕ್ಕೆ ಚಾಲನೆ ನೀಡಲಿದ್ದಾರೆ ಎಂದು ಮೂಲಗಳು ಹೇಳಿವೆ.

# ಆಸ್ಟ್ರೇಲಿಯಾದ ಮಹಿಳೆ ಮೇಲೆ ಗ್ಯಾಂಗ್ ರೇಪ್..!

**ಪ್ಯಾರಿಸ್:** ಒಲಿಂಪಿಕ್ಸ್‌ಗೆ ಕೆಲವೇ ದಿನಗಳು ಬಾಕಿ ಇರುವಾಗ ಪ್ಯಾರಿಸ್ ನಲ್ಲಿ ಶಾಕಿಂಗ್ ಘಟನೆ ವರದಿಯಾಗಿದೆ. ಆಸ್ಟ್ರೇಲಿಯಾದ ಮಹಿಳೆ ಮೇಲೆ ಐವರು ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಜುಲೈ 20 ರ ಮಧ್ಯರಾತ್ರಿಯ ನಂತರ ಮಹಿಳೆಯ ಮೇಲೆ ಹಲ್ಲೆ ನಡೆಸಿ ಸಾಮೂಹಿಕ ಅತ್ಯಾಚಾರ ಎಸಗಲಾಗಿದೆ ಎಂದು ಫ್ರೆಂಚ್ ಪೊಲೀಸರು ತಿಳಿಸಿದ್ದಾರೆ ಮತ್ತು ತನಿಖೆಯನ್ನು ಪ್ರಾರಂಭಿಸಲಾಗಿದೆ. ಘಟನೆಯ ನಂತರ ರಾಜಧಾನಿಯ ಪಿಗಲ್ಲೆ ಪ್ರದೇಶದ ಕಬಾಬ್ ಅಂಗಡಿಯಲ್ಲಿ ಮಹಿಳೆ ಆಶ್ರಯ ಪಡೆದಿದ್ದರು ಎಂದು ಮೂಲಗಳು ತಿಳಿಸಿದೆ. ಪ್ರಕರಣವನ್ನು ಕೈಗೆತ್ತಿಕೊಂಡಿರುವ ಪೊಲೀಸರು ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ.




# ಅತ್ಯುತ್ತಮ ಬಜೆಟ್: ಸಚಿವ ಪ್ರಲ್ಹಾದ್ ಜೋಶಿ ಶ್ಲಾಘನೆ



**ನವದೆಹಲಿ:** ಎನ್‌ಡಿಎ ಸರ್ಕಾರ ನವಭಾರತ ನಿರ್ಮಾಣಕ್ಕೆ ಪ್ರಸ್ತುತದಲ್ಲಿ ಅತ್ಯುತ್ತಮ ಬಜೆಟ್ ಸಮರ್ಪಿಸಿದೆ ಎಂದು ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿ, ಭಾರತದ ಆರ್ಥಿಕ ಪ್ರಗತಿ, ಸಾಮರ್ಥ್ಯದ ಜತೆಗೆ ಯುವಜನತೆ, ಮಹಿಳೆಯರು ಮತ್ತು ರೈತರ ಅಭಿವೃದ್ಧಿಯ ಬದ್ಧತೆಯನ್ನು ಈ ಬಜೆಟ್ ಸಾಬೀತುಪಡಿಸಿದೆ ಎಂದು ಪ್ರತಿಪಾದಿಸಿದರು.

ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿದ ಈ ಬಜೆಟ್ ವಿಶೇಷವಾಗಿ ಯುವ ಜನರಲ್ಲಿ ವಿಶ್ವಾಸವನ್ನು ತುಂಬುತ್ತದೆ ಎಂದ ಅವರು, ಪ್ರಧಾನಮಂತ್ರಿ ಸೂರ್ಯ ಘರ್ ಯೋಜನೆ ಮಧ್ಯಮ, ಕೆಳ ವರ್ಗ ಮತ್ತು ಬಡ ಜನರಿಗೆ ಪ್ರಯೋಜನಕಾರಿ ಹಾಗೂ ವಿಶ್ವದ ಅತ್ಯುತ್ತಮ ಯೋಜನೆಗಳಲ್ಲಿ ಇದು ಒಂದಾಗಿದೆ ಎಂದು ಹೇಳಿದರು.

ಪ್ರಸ್ತುತ ಬಜೆಟ್ನಲ್ಲಿ ನಿರ್ಮಲಾ ಸೀತಾರಾಮನ್ ಅವರು ಶಿಕ್ಷಣ, ಉದ್ಯೋಗ ಮತ್ತು ಕೌಶಲ್ಯ ಅಭಿವೃದ್ಧಿಗೆ ಆದ್ಯತೆ ನೀಡಿದ್ದಾರೆ. ಈ ಮೂಲಕ ವಿಕಸಿತ ಭಾರತಕ್ಕೆ ಮಾರ್ಗ ತೋರಿದ್ದಾರೆ ಎಂದು ತಿಳಿಸಿದರು.

ಎಂಎನ್‌ಆರ್‌ಇ ವಲಯದ ಬಗ್ಗೆ ಪ್ರತಿಕ್ರಿಯಿಸಿ, ಪ್ರಧಾನಮಂತ್ರಿ ಸೂರ್ಯ ಘರ್ ಯೋಜನೆಗೆ ಉತ್ತಮ ಬೆಂಬಲ ವ್ಯಕ್ತವಾಗಿದೆ. ಈಗಾಗಲೇ 1.28 ಕೋಟಿಗೂ ಹೆಚ್ಚು ನೋಂದಣಿ ಮತ್ತು 14 ಲಕ್ಷ ಅರ್ಜಿ ಸಲ್ಲಿಕೆಯಾಗಿವೆ. ಮೇಲ್ಛಾವಣಿ ಸೌರ ಫಲಕ ಅಳವಡಿಸಲು ಅನುಕೂಲ ಆಗುವಂತೆ ಈ ಯೋಜನೆ ಪ್ರಾರಂಭಿಸಲಾಗಿದೆ ಎಂದು ಸಚಿವ ಜೋಶಿ ಮಾಹಿತಿ ನೀಡಿದರು.

# ಕ್ಯಾನ್ಸರ್ ಔಷಧಗಳಿಗೆ ಸೀಮಾ ಸುಂಕವಿಲ್ಲ; ಬಜೆಟ್ ಘೋಷಣೆ ಸ್ವಾಗತಾರ್ಹ





**ದೆಹಲಿ:** ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮ್ ಅವರು ಇಂದು ಪಾರ್ಲಿಮೆಂಟ್ನಲ್ಲಿ ಕೇಂದ್ರ ಬಜೆಟ್ 2024-25 ಅನ್ನು ಮಂಡಿಸಿದ್ದಾರೆ. ಈ ಸಂದರ್ಭದಲ್ಲಿ ಮೂರು ಕ್ಯಾನ್ಸರ್ ಔಷಧಗಳನ್ನು ಮೂಲ ಸೀಮಾ ಸುಂಕದಿಂದ ಹೊರಗಿಡುವುದಾಗಿ ಘೋಷಿಸಿದ್ದಾರೆ. ದೇಶೀಯ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಲು ಹಂತ ಹಂತದ ಉತ್ಪಾದನಾ ಹೆಚ್ಚಳ ಕಾರ್ಯಕ್ರಮದ ಭಾಗವಾಗಿ ವೈದ್ಯಕೀಯ ಎಕ್ಸ್-ರೇ ಯಂತ್ರಗಳಲ್ಲಿ ಬಳಸುವ ಎಕ್ಸ್-ರೇ ಟ್ಯೂಬ್ಗಳು ಮತ್ತು ಫ್ಲಾಟ್ ಪ್ಯಾನಲ್ ಡಿಟೆಕ್ಟರ್‌ಗಳ ಮೇಲಿನ ಮೂಲ ಕಸ್ಟಮ್ಸ್ ಡ್ಯೂಟಿ (ಬಿಸಿಡಿ) ಮಾರ್ಪಾಡು ಮಾಡುವುದಾಗಿಯೂ ಅವರು ಹೇಳಿದ್ದಾರೆ.

ಕ್ಯಾನ್ಸರ್ ರೋಗಿಗಳಿಗೆ ಅನುಕೂಲ ಒದಗಿಸುವ ಸಲುವಾಗಿ ನಾನು ಇನ್ನೂ ಮೂರು ಔಷಧಿಗಳನ್ನು ಕಸ್ಟಮ್ಸ್ ಸುಂಕದಿಂದ ಸಂಪೂರ್ಣವಾಗಿ ವಿನಾಯಿತಿ ನೀಡುವ ಪ್ರಸ್ತಾಪ ಮಾಡುತ್ತಿದ್ದೇನೆ. ವೈದ್ಯಕೀಯ ಎಕ್ಸ್‌ರೇ ಯಂತ್ರಗಳಲ್ಲಿ ಬಳಸುವ ಎಕ್ಸ್-ರೇ ಟ್ಯೂಬ್ಗಳು ಮತ್ತು ಫ್ಲಾಟ್ ಪ್ಯಾನೆಲ್ ಡಿಟೆಕ್ಟರ್‌ಗಳ ಬಿಸಿಡಿಯಲ್ಲಿ ಬದಲಾವಣೆಗಳನ್ನು ಸಹ ನಾನು ಪ್ರಸ್ತಾಪಿಸುತ್ತೇನೆ? ಎಂದು ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ಆರೋಗ್ಯ ಕಾಳಜಿ ದರಗಳು ಕೈಗೆಟುಕುವಂತೆ ಇರಬೇಕು ಎನ್ನುವ ಸಲುವಾಗಿ ಮತ್ತು ಆರೋಗ್ಯ ಸೇವೆ ದುಬಾರಿಯಾಗುವುದನ್ನು ತಡೆಯುವ ಸಲುವಾಗಿ ಸರಕಾರ ಈ ರೀತಿ ಬದಲಾವಣೆ ತರುತ್ತಿದೆ. ವೈದ್ಯಕೀಯ ವಲಯದಲ್ಲಿ ಸ್ಥಳೀಯ ಉತ್ಪಾದನೆ ಪ್ರೋತ್ಸಾಹಿಸುವುದು ಸಹ ಇದರ ಉದ್ದೇಶ ಎಂದು ಅವರು ಹೇಳಿದ್ದಾರೆ.

ಸರಕಾರದ ಈ ಕ್ರಮವನ್ನು ಉದ್ಯಮದ ಹಲವು ಪ್ರಮುಖರು ಸ್ವಾಗತಿಸಿದ್ದಾರೆ. ಇದು ಅಂತರ್ಗತ ಬೆಳವಣಿಗೆಯ ಬಜೆಟ್ ಎಂದು ಮಹಾಜನ್ ಇಮೇಜಿಂಗ್ ಮತ್ತು ಲ್ಯಾಬ್ಸ್ನ ಸಂಸ್ಥಾಪಕ ಮತ್ತು ಅಧ್ಯಕ್ಷ ಮತ್ತು ಎಫ್‌ಐಸಿಸಿಐ ಆರೋಗ್ಯ ಸೇವೆಗಳ ಸಮಿತಿಯ ಅಧ್ಯಕ್ಷ ಡಾ ಹರ್ಷ ಮಹಾಜನ್ ಹೇಳಿದ್ದಾರೆ.

# ಕಾಂಗ್ರೆಸ್ ಆರನೇ ಗ್ಯಾರಂಟಿ - ಬಿಜೆಪಿ ಟೀಕೆ!



**ದೆಹಲಿ:** ರಾಜ್ಯದಲ್ಲಿ ಕಾಂಗ್ರೆಸ್ ಗ್ಯಾರಂಟಿಯಿಂದ ಸರಕಾರದ ಬೊಕ್ಕಸದಲ್ಲಿ ಹಣವಿಲ್ಲದಂತಾಗಿದೆ. ಇದರಿಂದ ಯಾವುದೇ ಅಭಿವೃದ್ಧಿ ಕೆಲಸಗಳು ಪ್ರಾರಂಭವಾಗಿಲ್ಲ. ಇದರ ನಡುವೆ ಅಗತ್ಯ ವಸ್ತುಗಳ ಬೆಲೆ ಏರಿಸಿ ಜನರ ಜೊತೆ ಚೆಲ್ಲಾಟವಾಡುತ್ತಿದೆ ಎಂದು ಬಿಜೆಪಿ ಟೀಕಿಸಿದೆ.

ಭ್ರಷ್ಟ, ಲೂಟಿಕೋರ ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಎಲ್ಲವೂ ದುಬಾರಿಯಾಗಿದೆ.

ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ, ತರಕಾರಿ ದರ ಏರಿಕೆ, ಅಗತ್ಯ ವಸ್ತಗಳ ಬೆಲೆ ಏರಿಕೆ, ನಂದಿನಿ ಹಾಲಿನ ದರ ಏರಿಕೆ ಮತ್ತು ಬಸ್ ಪ್ರಯಾಣ ದರದ ಏರಿಕೆಗೂ ಹೊರಟಿದ್ದು, ಕಾಂಗ್ರೆಸ್ ಜನರ ಜೇಬಿಗೆ ಕತ್ತರಿ ಹಾಕುತ್ತಿದೆ ಎಂದು ಬಿಜೆಪಿ ಆರೋಪಿಸಿದೆ.

ಸಿಎಂ ಸಿದ್ದರಾಮಯ್ಯ ಅವರು ಬೆಲೆ ಏರಿಕೆಯಿಂದ ಈಗಾಗಲೇ ಹೈರಾಣಾಗಿರುವ ಜನತೆಗೆ ಮತ್ತೊಂದು ಹೊಡೆತ ನೀಡಲು, ಏರಿಕೆಗೆ ಮತ್ತೇನಿದೆ ಎಂದು ಹುಡುಕುತ್ತಿದ್ದಾರೆ. ಇದೀಗ ಬೆಲೆಯೇರಿಕೆಯಿಂದ ಕನ್ನಡಿಗರ ಬದುಕನ್ನು ಬೀದಿಗೆ ತರುವ 6ನೇ ಗ್ಯಾರಂಟಿ ತರುವ ಚಿಂತನೆ ನಡೆಸುತ್ತಿದ್ದಾರೆ ಎಂದು ಗುಡುಗಿದೆ.

ಈಗಾಗಲೇ ವಾಲ್ಮೀಕಿ ನಿಗಮದಲ್ಲಿ ಅಕ್ರಮ ಮತ್ತು ಮುಡಾ ಹಗರಣ ಪ್ರಕರಣ ಸಂಬಂಧ ಕಾಂಗ್ರೆಸ್ ಸರಕಾರ ಬೇಸತ್ತು ಹೋಗಿದೆ. ಈ ಮಧ್ಯೆ ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ತನ್ನ ಸಮರವನ್ನು ಮುಂದುವರೆಸಿದೆ.

# ಇಂಡೋನೇಷ್ಯಾದ ಪಪುವಾದಲ್ಲಿ 5.3 ತೀವ್ರತೆಯ ಭೂಕಂಪ

**ಜಕಾರ್ತಾ:** ಇಂಡೋನೇಷ್ಯಾದ ಪೂರ್ವ ಹೈಲ್ಯಾಂಡ್ ಪಪುವಾ ಪ್ರಾಂತ್ಯದಲ್ಲಿ ಬುಧವಾರ ಬೆಳಿಗ್ಗೆ 5.3 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ದೇಶದ ಹವಾಮಾನ, ಹವಾಮಾನ ಮತ್ತು ಭೂಭೌತಶಾಸ್ತ್ರ ಸಂಸ್ಥೆ ತಿಳಿಸಿದೆ.ಬೆಳಿಗ್ಗೆ 07:22 ಕ್ಕೆ ಒಳನಾಡಿನಲ್ಲಿ ಭೂಕಂಪ ಸಂಭವಿಸಿದೆ. ಜಕಾರ್ತಾ ಸಮಯದಲ್ಲಿ, ಭೂಕಂಪದ ಕೇಂದ್ರಬಿಂದುವು ಮಾಂಬೆರಾಮೊ ಟೆಂಗಾ ರೀಜೆನ್ಸಿಯ ಈಶಾನ್ಯಕ್ಕೆ 96 ಕಿ.ಮೀ ದೂರದಲ್ಲಿ 26 ಕಿ.ಮೀ ಆಳದಲ್ಲಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ಇಂಡೋನೇಷ್ಯಾ, ಆರ್ಕಿಪೆಲಾಜಿಕ್ ದೇಶವಾಗಿದ್ದು, ಪೆಸಿಫಿಕ್ ರಿಂಗ್ ಆಫ್ ಫೈರ್ ಎಂದು ಕರೆಯಲ್ಪಡುವ ಭೂಕಂಪ ಪೀಡಿತ ವಲಯದಲ್ಲಿದೆ, ಇದು ರಾಷ್ಟ್ರವನ್ನು ಭೂಕಂಪಗಳಿಗೆ ಗುರಿಯಾಗಿಸುತ್ತದೆ.



# ಕೆನಡಾದಲ್ಲಿ ಭೀಕರ ಕಾಡ್ಗಿಚ್ಚು

**ಒಟ್ಟಾವಾ:** ಪಶ್ಚಿಮ ಕೆನಡಾದ ಜಾಸ್ಪರ್ ಮತ್ತು ಹತ್ತಿರದ ಕಾಡ್ಗಿಚ್ಚಿನಿಂದ ಸುಮಾರು 17,500 ಆಲ್ಬರ್ಟನ್ನರು ತಮ್ಮ ಮನೆಗಳನ್ನು ತೊರೆದಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಕೆನಡಾದ ರಾಕೀಸ್ನ ಅತಿದೊಡ್ಡ ರಾಷ್ಟ್ರೀಯ ಉದ್ಯಾನವನವಾದ ಜಾಸ್ಪರ್ ರಾಷ್ಟ್ರೀಯ ಉದ್ಯಾನವನದ ಪ್ರತಿಯೊಬ್ಬರನ್ನು ಮತ್ತು ಜಾಸ್ಪರ್ ಟೌನ್ಸೈಟ್ ನಿವಾಸಿಗಳನ್ನು ಸೋಮವಾರ ತಡರಾತ್ರಿ ಹೊರಹಾಕಲು ಆದೇಶಿಸಲಾಗಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ಮಂಗಳವಾರ ವರದಿ ಮಾಡಿದೆ. ಆಲ್ಬರ್ಟನ್ ಪ್ರಾಂತ್ಯ, ಜಾಸ್ಪರ್ ಮತ್ತು ಜಾಸ್ಪರ್ ರಾಷ್ಟ್ರೀಯ ಉದ್ಯಾನವನದ ಪುರಸಭೆ ಮಂಗಳವಾರ ಪಟ್ಟಣ ಮತ್ತು ಉದ್ಯಾನವನದಿಂದ ಸ್ಥಳಾಂತರಿಸುವಿಕೆ ಉತ್ತಮವಾಗಿ ಪ್ರಗತಿಯಲ್ಲಿದೆ ಎಂದು ಹೇಳಿದೆ. ಮಂಗಳವಾರ, ಬ್ರಿಟಿಷ್ ಕೊಲಂಬಿಯಾ ಕಾಡ್ಗಿಚ್ಚು 300 ಸಕ್ರಿಯ ಕಾಡ್ಗಿಚ್ಚುಗಳನ್ನು ವರದಿ ಮಾಡಿದೆ ಮತ್ತು ಆಲ್ಬರ್ಟಾ ಕಾಡ್ಗಿಚ್ಚು 176 ಸಕ್ರಿಯ ಕಾಡ್ಗಿಚ್ಚುಗಳನ್ನು ವರದಿ ಮಾಡಿದೆ. ಸಿಟಿವಿ ನ್ಯೂಸ್ ಪ್ರಕಾರ, ಆಲ್ಬರ್ಟಾ ಮತ್ತು ಬ್ರಿಟಿಷ್ ಕೊಲಂಬಿಯಾದಲ್ಲಿ ಕಾಡ್ಗಿಚ್ಚಿನ ದಟ್ಟವಾದ ಹೊಗೆ ಆಲ್ಬರ್ಟಾದಲ್ಲಿ ನೆಲೆಸಿದೆ. ಕ್ಯಾಲ್ಗರಿಯಲ್ಲಿನ ವಾಯು ಗುಣಮಟ್ಟ ಆರೋಗ್ಯ ಸೂಚ್ಯಂಕ (ಎಕ್ಯೂಎಚ್‌ಐ) ಅನ್ನು 7 (ಹೆಚ್ಚಿನ ಅಪಾಯ) ಎಂದು ರೇಟ್ ಮಾಡಲಾಗಿದೆ, ಎಡ್ಮಂಟನ್ ಮತ್ತು ರೆಡ್ ಜಿಂಕೆ ಸೇರಿದಂತೆ ಕೆಲವು ಸ್ಥಳಗಳು 10+ (ಎಕ್ಯೂಎಚ್‌ಐ ಸ್ಕೇಲ್ನಲ್ಲಿ ಅತಿ ಹೆಚ್ಚು ರೇಟಿಂಗ್) ತಲುಪಿದೆ ಎಂದು ಸಿಟಿವಿ ನ್ಯೂಸ್ ವರದಿ ಮಾಡಿದೆ.



# ಅಮೆರಿಕ ಸೀಕ್ರೆಟ್ ಸರ್ವಿಸ್ ಮುಖ್ಯಸ್ಥ ರಾಜೀನಾಮೆ



**ವಾಷಿಂಗ್ಟನ್:** ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹತ್ಯೆ ಯತ್ನದ ಕೆಲವು ದಿನಗಳ ನಂತರ, ಯುಎಸ್ ಸೀಕ್ರೆಟ್ ಸರ್ವಿಸ್ ನಿರ್ದೇಶಕಿ ಕಿಂಬರ್ಲಿ ಚೀಟಲ್ ಮಂಗಳವಾರ ರಾಜೀನಾಮೆ ನೀಡಿದ್ದಾರೆ ಎಂದು ಮೂಲಗಳನ್ನು ಉಲ್ಲೇಖಿಸಿ ಸಿಎನ್‌ಎನ್ ವರದಿ ಮಾಡಿದೆ.

ಟ್ರಂಪ್ ಅವರ ಸುರಕ್ಷತೆಯನ್ನು ಸಂಸ್ಥೆ ಹೇಗೆ ನಿಭಾಯಿಸಿತು ಮತ್ತು ಈ ತಿಂಗಳು ನಡೆದ ರ್ಯಾಲಿಯಲ್ಲಿ ಪೆನ್ಸಿಲ್ವೇನಿಯಾದ ರಿಪಬ್ಲಿಕನ್ ಅಧ್ಯಕ್ಷೀಯ ಅಭ್ಯರ್ಥಿಯನ್ನು ಬಂದೂಕುಧಾರಿಯೊಬ್ಬ ಹೇಗೆ ಕೊಲ್ಲಲು ಪ್ರಯತ್ನಿಸಿದ ಎಂಬುದರ ಕುರಿತು ಸಂಸದರು ಮತ್ತು ಆಂತರಿಕ ಸರ್ಕಾರಿ ಕಾವಲುಗಾರರಿಂದ ನಡೆಯುತ್ತಿರುವ ತನಿಖೆಗಳ ಮಧ್ಯೆ ಈ ಬೆಳವಣಿಗೆ ಸಂಭವಿಸಿದೆ.

ಜುಲೈ 13 ರಂದು ಪೆನ್ಸಿಲ್ವೇನಿಯಾ ರ್ಯಾಲಿಯಲ್ಲಿ ಟ್ರಂಪ್ ಅವರನ್ನು ಗುಂಡಿಕ್ಕಿ ಕೊಲ್ಲಲು ಪ್ರಯತ್ನಿಸಿದ ನಂತರ ರಿಪಬ್ಲಿಕನ್ನರು ಅವರ ರಾಜೀನಾಮೆಗೆ ನಿರಂತರವಾಗಿ ಒತ್ತಾಯಿಸುತ್ತಿದ್ದಾರೆ.

ಸದನದ ಮೇಲ್ವಿಚಾರಣಾ ಸಮಿತಿಯ ಮುಂದೆ ಸೋಮವಾರ ಸಾರ್ವಜನಿಕ ವಿಚಾರಣೆಯ ನಂತರ, ಸಮಿತಿಯ ಹಲವಾರು ಪ್ರಶ್ನೆಗಳಿಗೆ ಪ್ರತಿಕ್ರಿಯಿಸಲು ಅವರು ನಿರಾಕರಿಸಿದ ನಂತರ, ಶಾಸಕರು ವಿಶೇಷವಾಗಿ ಕೋಪಗೊಂಡಿದ್ದಾರೆ ಎಂದು ಸಿಎನ್‌ಎನ್ ವರದಿ ಮಾಡಿದೆ.

ಹೌಸ್ ಮೇಲ್ವಿಚಾರಣಾ ಸಮಿತಿಯ ಮುಂದೆ ತನ್ನ ಸಾಕ್ಷ್ಯದ ಸಮಯದಲ್ಲಿ ರ್ಯಾಲಿಯ ಭದ್ರತೆಯಲ್ಲಿ ಗಮನಾರ್ಹ ಮತ್ತು ಬೃಹತ್ ಸಮಸ್ಯೆಗಳಿವೆ ಎಂದು ಚೀಟಲ್ ಹೇಳಿದ್ದರೂ, ಅವರು ಈ ಹಿಂದೆ ಅಧಿಕಾರದಿಂದ ಕೆಳಗಿಳಿಯಲು ನಿರಾಕರಿಸಿದ್ದರು.

# ಬಾಂಗ್ಲಾದಲ್ಲಿ ಕರ್ಫ್ಯೂ ಮುಂದುವರಿಕೆ



**ಢಾಕಾ:** ಬಾಂಗ್ಲಾದೇಶದಲ್ಲಿ ಉದ್ಯೋಗ ಮೀಸಲಾತಿಯನ್ನು ವಿರೋಧಿಸಿ ನಡೆಸುತ್ತಿದ್ದ ಪ್ರತಿಭಟನೆಯನ್ನು 48 ಗಂಟೆ ಸ್ಥಗಿತಗೊಳಿಸುವುದಾಗಿ ವಿದ್ಯಾರ್ಥಿಗಳು ಸೋಮವಾರ ಘೋಷಿಸಿದ್ದರೂ ಮಂಗಳವಾರವೂ ದೇಶದಾದ್ಯಂತ ಕರ್ಫ್ಯೂ ಮುಂದುವರಿದಿದೆ. ಇಂಟರ್ನೆಟ್ ಮತ್ತು ಟೆಲಿಫೋನ್ ಸೇವೆಗಳನ್ನು ಮರುಸ್ಥಾಪಿಸಿಲ್ಲ ಎಂದು ಎಎಫ್ಪಿ ಸುದ್ದಿಸಂಸ್ಥೆ ಮಂಗಳವಾರ ವರದಿ ಮಾಡಿದೆ.

ಈ ಮಧ್ಯೆ, ವಿದ್ಯಾರ್ಥಿಗಳ ಪ್ರತಿಭಟನೆ, ಪೊಲೀಸರ ಲಾಠಿಚಾರ್ಜ್, ಗೋಲೀಬಾರ್ ಮತ್ತು ಮೀಸಲಾತಿ ಪರ-ವಿರೋಧ ವಿದ್ಯಾರ್ಥಿಗಳ ಗುಂಪಿನ ನಡುವಿನ ಘರ್ಷಣೆಯಲ್ಲಿ ಮೃತಪಟ್ಟವರ ಸಂಖ್ಯೆ 174ಕ್ಕೆ ಏರಿದೆ. ಸಾವಿರಕ್ಕೂ ಅಧಿಕ ಮಂದಿ ಗಾಯಗೊಂಡಿದ್ದು ಹಿಂಸಾಚಾರ, ಘರ್ಷಣೆಗೆ ಸಂಬಂಧಿಸಿ 2,580 ಮಂದಿಯನ್ನು ಬಂಧಿಸಿರುವುದಾಗಿ ವರದಿಯಾಗಿದೆ. ಇಂಟರ್ನೆಟ್ ಮತ್ತು ಟೆಲಿಫೋನ್ ಸೇವೆ ಸ್ಥಗಿತಗೊಂಡಿರುವುದರಿಂದ ಮಾಹಿತಿ ಪ್ರಸಾರಕ್ಕೆ ಅಡ್ಡಿಯಾಗಿದೆ. ಸಾವು-ನೋವಿನ ಪ್ರಮಾಣ ಇನ್ನಷ್ಟು ಏರುವ ಸಾಧ್ಯತೆಯಿದೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಮಂಗಳವಾರ ರಾಜಧಾನಿ ಢಾಕಾ ಸೇರಿದಂತೆ ಪ್ರಮುಖ ನಗರಗಳಲ್ಲಿ ಪರಿಸ್ಥಿತಿ ಶಾಂತವಾಗಿದೆ. ಆದರೆ ಭದ್ರತಾ ಪರಿಸ್ಥಿತಿ ಸಂಪೂರ್ಣ ನಿಯಂತ್ರಣಕ್ಕೆ ಬಂದಿಲ್ಲ. ಕರ್ಫ್ಯೂ ಸೇರಿದಂತೆ ನಿರ್ಬಂಧ ಕ್ರಮಗಳು ಮುಂದುವರಿಯಲಿವೆ ಎಂದು ಸೇನಾಪಡೆಯ ಮುಖ್ಯಸ್ಥರು ಹೇಳಿದ್ದಾರೆ. ರಾಜಧಾನಿಯ ಪರಿಸ್ಥಿತಿಯನ್ನು ಹೆಲಿಕಾಪ್ಟರ್ ಮೂಲಕ ಪರಿಶೀಲಿಸಿದ ಬಳಿಕ ಅವರು ಮಾಧ್ಯಮದವರ ಜತೆ ಮಾತನಾಡುತ್ತಿದ್ದರು. ಮಂಗಳವಾರ ಢಾಕಾದಲ್ಲಿ ಹೆಚ್ಚಿನ ಸಂಖ್ಯೆಯ ಸೇನಾ ಉಪಸ್ಥಿತಿಯಿತ್ತು. ಕೆಲವು ರಸ್ತೆಗಳಲ್ಲಿ ಬಂಕರ್‌ಗಳನ್ನು ಸ್ಥಾಪಿಸಲಾಗಿದೆ ಮತ್ತು ಸೂಕ್ಷ್ಮ ಪ್ರದೇಶಗಳಲ್ಲಿ ರಸ್ತೆಗೆ ಮುಳ್ಳುತಂತಿಯ ಬೇಲಿ ನಿರ್ಮಿಸಿ ರಸ್ತೆ ಸಂಚಾರವನ್ನು ನಿರ್ಬಂಧಿಸಲಾಗಿದೆ.

# ಹಮಾಸ್ ಭಯೋತ್ಪಾದಕರ ಬೆದರಿಕೆ ವಿಡಿಯೋ ವೈರಲ್




**ದೆಹಲಿ:** ಬಹು ನಿರೀಕ್ಷಿತ ಒಲಿಂಪಿಕ್ಸ್ ಜುಲೈ 26 ರಿಂದ ಪ್ರಾರಂಭವಾಗಲಿದ್ದು, ಆಗಸ್ಟ್ 11 ರವರೆಗೆ ನಡೆಯಲಿದೆ. ಪ್ಯಾರಿಸ್ ಒಲಿಂಪಿಕ್ಸ್ ನಲ್ಲಿ ರಕ್ತದ ಹೊಳೆ ಹರಿಸುವುದಾಗಿ ಮುಸುಕುಧಾರಿ ವ್ಯಕ್ತಿಯೊಬ್ಬ ಅರೇಬಿಕ್ ಭಾಷೆಯಲ್ಲಿ ಬೆದರಿಕೆ ಹಾಕಿರುವ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ.

ಈ ಒಲಿಂಪಿಕ್ಸ್ ನಲ್ಲಿ ಇಸ್ರೇಲ್ ಸಹ ಭಾಗವಹಿಸಲಿದೆ ಎಂಬುದು ಗಮನಿಸಬೇಕಾದ ಸಂಗತಿಯಾಗಿದೆ.

ಮಂಗಳವಾರ ಬಿಡುಗಡೆಯಾದ ವೀಡಿಯೊದಲ್ಲಿ ಮುಸುಕುಧಾರಿ ವ್ಯಕ್ತಿ ಫ್ರಾನ್ಸ್ ಮತ್ತು ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ಗೆ ಬೆದರಿಕೆ ಹಾಕಿದ್ದಾನೆ. ಪ್ಯಾಲೆಸ್ತೀನ್ ನೊಂದಿಗಿನ ಸಂಘರ್ಷದ ಮಧ್ಯೆ 'ಝಿಯೋನಿಸ್ ಆಡಳಿತ'ದ ಪಕ್ಷ ತೆಗೆದುಕೊಳ್ಳುವ ಪರಿಣಾಮಗಳನ್ನು ಎದುರಿಸಲು ಸಿದ್ಧರಾಗಿರಬೇಕು ಎಂದು ಹೇಳಿದ್ದಾನೆ. ತನ್ನ ಎದೆಯ ಮೇಲೆ ಪ್ಯಾಲೇಸ್ಟಿನಿಯನ್ ಧ್ವಜವನ್ನು ಹೊದ್ದು ಕಪ್ಪು ಬಟ್ಟೆಯನ್ನು ಧರಿಸಿರುವ ವ್ಯಕ್ತಿ, ಪ್ಯಾರಿಸ್ ಮೂಲಕ ''ರಕ್ತದ ನದಿಗಳು ಹರಿಯುತ್ತವೆ'' ಎಂದು ಘೋಷಿಸಿದ್ದು, ಇದು ದಾಳಿಯ ಸೂಚನೆ ನೀಡುವಂತಿದೆ. ವ್ಯಕ್ತಿ ನಕಲಿ ಕತ್ತರಿಸಿದ ತಲೆಯನ್ನು ಹಿಡಿದಿರುವ ದೃಶ್ಯವೂ ವೀಡಿಯೊದಲ್ಲಿದೆ. ವೀಡಿಯೊ ಬಗ್ಗೆ ಯಾವುದೇ ಸ್ಪಷ್ಟ ಪುರಾವೆಗಳಿಲ್ಲ ಮತ್ತು ಅದನ್ನು ಅಧಿಕೃತ ಹಮಾಸ್ ಚಾನೆಲ್ಗಳಲ್ಲಿ ಹಂಚಿಕೊಳ್ಳಲಾಗಿಲ್ಲ. ಆದಾಗ್ಯೂ, ವೀಡಿಯೊದ ಸತ್ಯಾಸತ್ಯತೆ ಅನಿಶ್ಚಿತವಾಗಿಯೇ ಉಳಿದಿದೆ, ಆದರೆ ಇದು ಪ್ಯಾರಿಸ್ ಒಲಿಂಪಿಕ್ಸ್ ನಲ್ಲಿ ಭದ್ರತಾ ಅಪಾಯಗಳ ಬಗ್ಗೆ ಕಳವಳವನ್ನು ಹೆಚ್ಚಿಸಿದೆ.

# ಕಠ್ಮಂಡುವಿನಲ್ಲಿ ಟೇಕಾಫ್ ವೇಳೆ ವಿಮಾನ ಪತನ



ಕಠ್ಮಂಡು: ನೇಪಾಳದ ರಾಜಧಾನಿ ಕಠ್ಮಂಡುವಿನಲ್ಲಿ ಬುಧವಾರ ಬೆಳಗ್ಗೆ 19 ಜನರನ್ನು ಹೊತ್ತೊಯ್ದ ವಿಮಾನ ಟೇಕಾಫ್ ವೇಳೆ ಪತನಗೊಂಡಿದೆ ಎಂದು ವಿಮಾನ ನಿಲ್ದಾಣದ ಅಧಿಕಾರಿಯನ್ನು ಉಲ್ಲೇಖಿಸಿ ಕಠ್ಮಂಡು ಪೋಸ್ಟ್ ಪತ್ರಿಕೆ ವರದಿ ಮಾಡಿದೆ.

ವಿಮಾನವು ದೇಶೀಯ ಶೌರ್ಯ ಏರ್‌ಲೈನ್‌ಗೆ ಸೇರಿದ್ದು, ಹಿಮಾಲಯ ಗಣರಾಜ್ಯದ ಪ್ರಮುಖ ಪ್ರವಾಸೋದ್ಯಮ ಕೇಂದ್ರವಾದ ಪೋಖರಾದ ರೆಸಾರ್ಟ್ ಪಟ್ಟಣಕ್ಕೆ ತೆರಳುತ್ತಿತ್ತು. ಪೊಲೀಸರು ಮತ್ತು ಅಗ್ನಿಶಾಮಕ ದಳದ ಸಿಬ್ಬಂದಿ ರಕ್ಷಣಾ ಕಾರ್ಯದಲ್ಲಿ ತೊಡಗಿರುವಾಗ ಬೆಳಗ್ಗೆ 11:00 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದೆ. ವಿಮಾನ ಸಿಬ್ಬಂದಿ ಸೇರಿದಂತೆ ಹತ್ತೊಂಬತ್ತು ಮಂದಿ ಪೋಖರಾಗೆ ತೆರಳುತ್ತಿದ್ದ ವಿಮಾನದಲ್ಲಿದ್ದರು ಎಂದು ವಿಮಾನ ನಿಲ್ದಾಣದ ವಕ್ತಾರ ಪ್ರೇಮನಾಥ್ ಠಾಕೂರ್ ಉಲ್ಲೇಖಿಸಿ ಪತ್ರಿಕೆ ವರದಿ ಮಾಡಿದೆ.





# ಇಥಿಯೋಪಿಯಾದಲ್ಲಿ ಭೀಕರ ಭೂಕುಸಿತ

**ಅಡಿಸ್ ಅಬಾಬಾ:** ಭಾರೀ ಮಳೆಯಿಂದಾಗಿ ಹಾನಿಗೊಳಗಾದ ಇಥಿಯೋಪಿಯಾದಲ್ಲಿ ಭೀಕರ ಭೂಕುಸಿತ ಸಂಭವಿಸಿದ್ದು, ಕನಿಷ್ಠ 157 ಜನರು ಸಾವನ್ನಪ್ಪಿದ್ದಾರೆ, ಅವರಲ್ಲಿ ಹಲವರು ಹಿಂದಿನ ಭೂಕುಸಿತದಿಂದ ಬದುಕುಳಿದವರನ್ನ ರಕ್ಷಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ.

ದಕ್ಷಿಣ ಇಥಿಯೋಪಿಯಾದ ಕೆಂಚೊ ಶಾಚಾ ಗೊಜ್ಡಿ ಜಿಲ್ಲೆಯಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಸಾವನ್ನಪ್ಪಿದವರಲ್ಲಿ ಚಿಕ್ಕ ಮಕ್ಕಳು ಮತ್ತು ಗರ್ಭಿಣಿಯರು ಸೇರಿದ್ದಾರೆ ಎಂದು ಸ್ಥಳೀಯ ಆಡಳಿತಾಧಿಕಾರಿ ದಗ್ಮಾವಿ ಅಯೆಲೆ ತಿಳಿಸಿದ್ದಾರೆ.

ಈ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ಮುಂದುವರೆದಿದ್ದರಿಂದ ಸಾವಿನ ಸಂಖ್ಯೆ ಸೋಮವಾರ ತಡರಾತ್ರಿ 55 ರಿಂದ ಮಂಗಳವಾರ 157 ಕ್ಕೆ ಏರಿದೆ ಎಂದು ಗೋಫಾ ವಲಯ ಸಂವಹನ ಕಚೇರಿಯ ಮುಖ್ಯಸ್ಥ ಕಸ್ಸಾಹುನ್ ಅಬೈನೆಹ್ ಹೇಳಿದ್ದಾರೆ. ಗೋಫಾ ವಲಯವು ಭೂಕುಸಿತ ಸಂಭವಿಸಿದ ಆಡಳಿತಾತ್ಮಕ ಪ್ರದೇಶವಾಗಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054






ಸಿನಿ ಕಾರ್ನರ್

# ರಶ್ಮಿಕಾಗೆ ಸ್ವೀಟ್ ಹಾರ್ಟ್ ಎಂದ ವಿಕ್ಕಿ ಕೌಶಲ್

ಬಾಲಿವುಡ್ ನಟ ವಿಕ್ಕಿ ಕೌಶಲ್ ಮತ್ತು ರಶ್ಮಿಕಾ ನಟನೆಯ ಚಾವಾ ಸಿನಿಮಾ ಶೂಟಿಂಗ್ ಭರದಿಂದ ಸಾಗುತ್ತಿದೆ.ಇದರ ನಡುವೆ ಸಂದರ್ಶನವೊಂದರಲ್ಲಿ 'ಚಾವಾ' ಸಿನಿಮಾ ಮತ್ತು ರಶ್ಮಿಕಾ ಜೊತೆ ನಟಿಸಿದ ಅನುಭವದ ಬಗ್ಗೆ ನಟ ಹಂಚಿಕೊಂಡಿದ್ದಾರೆ.ರಶ್ಮಿಕಾಗೆ ಸ್ವೀಟ್ ಹಾರ್ಟ್ ಎಂದು ವಿಕ್ಕಿ ಕೌಶಲ್ ಬಣ್ಣಿಸಿದ್ದಾರೆ.

ಸಂದರ್ಶನವೊಂದರಲ್ಲಿ ವಿಕ್ಕಿ ಕೌಶಲ್ ಮಾತನಾಡಿ, 'ಚಾವಾ' ಸಿನಿಮಾದಲ್ಲಿ ಮೊದಲ ಬಾರಿಗೆ ನಾನು ಮತ್ತು ಜೊತೆಯಾಗಿ ನಟಿಸಿದೆವು.ಅವರು ಸಿನಿಮಾ ಸೆಟ್‌ನಲ್ಲಿ ಯಾವಾಗಲೂ ಪಾಸಿಟಿವಿಯಿಂದ ಇರುತ್ತಾರೆ. ರಶ್ಮಿಕಾ ಹೃದಯದಿಂದ ಕೂಡ ಸುಂದರವಾಗಿದ್ದಾರೆ ಎಂದಿದ್ದಾರೆ.



ರಶ್ಮಿಕಾ ಎಂದರೆ ಸ್ವೀಟ್ ಹಾರ್ಟ್ ಎಂದು ಮಾತನಾಡಿದ್ದಾರೆ. ನಟಿ ಪ್ರತಿಭೆಯಿಂದ ಮಾತ್ರವಲ್ಲ ಆಕೆಗೆ ಪಾಸಿಟಿವಿ ನೋಡಿಯೇ ರಶ್ಮಿಕಾರನ್ನು ಫ್ಯಾನ್ಸ್ ಆರಾಧಿಸುತ್ತಾರೆ.ಫ್ಯಾನ್ಸ್ ಜೊತೆ ಉತ್ತಮ ಒಡನಾಟ ಹೊಂದಿದ್ದಾರೆ.ಅವರ ಜೀವನ ಮತ್ತು ವೃತ್ತಿಯ ಕುರಿತು ಆಗಾಗ ಫ್ಯಾನ್ಸ್‌ಗೆ ಅಪ್‌ಡೇಟ್ ಕೊಡುತ್ತಲೇ ಇರುತ್ತಾರೆ ಎಂದು ವಿಕ್ಕಿ ಕೌಶಲ್ ಅವರು ರಶ್ಮಿಕಾ ನಡೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಅಂದಹಾಗೆ, ವಿಕ್ಕಿ ಕೌಶಲ್ ಮತ್ತು ರಶ್ಮಿಕಾ ಮಂದಣ್ಣ ನಟನೆಯ 'ಚಾವಾ' ಸಿನಿಮಾ ಈ ವರ್ಷದ ಅಂತ್ಯದಲ್ಲಿ ಡಿ.6ರಂದು ರಿಲೀಸ್ ಆಗಲಿದೆ. ಅಂದಹಾಗೆ, ಛತ್ರಪತಿ ಸಂಭಾಜಿ ಮಹಾರಾಜ್ ಕುರಿತ ಬಯೋಪಿಕ್ ಸಿನಿಮಾ ಇದಾಗಿದೆ.

# ವಿಶ್ವಕ್ ಸೇನ್‌ಗೆ ಕನ್ನಡತಿ ಶ್ರದ್ಧಾ ಶ್ರೀನಾಥ್ ಹೀರೋಯಿನ್



ಕನ್ನಡದ ಬ್ಯೂಟಿ ಶ್ರದ್ಧಾ ಶ್ರೀನಾಥ್ ಸದ್ಯ ದಕ್ಷಿಣದ ಸಿನಿಮಾಗಳಲ್ಲಿ ಗುರುತಿಸಿಕೊಳ್ತಿದ್ದಾರೆ. ಇದೀಗ ನಟಿ ಬಂಪರ್ ಆಫರ್‌ವೊಂದನ್ನು ಗಿಟ್ಟಿಸಿಕೊಂಡಿದ್ದಾರೆ. ವಿಶ್ವಕ್ ಸೇನ್ ನಟನೆಯ ಹೊಸ ಚಿತ್ರದಲ್ಲಿ ಶ್ರದ್ಧಾ ಶ್ರೀನಾಥ್ ನಾಯಕಿಯಾಗಿದ್ದಾರೆ. ಪ್ರತಿಭಾನ್ವಿತ ನಟಿ ಶ್ರದ್ಧಾ ಶ್ರೀನಾಥ್ ತಮಿಳು, ತೆಲುಗು ಮತ್ತು ಹಿಂದಿ ಚಿತ್ರಗಳಲ್ಲಿ ಆಕ್ಟೀವ್ ಆಗಿದ್ದಾರೆ. ಸದ್ಯ ವಿಶ್ವಕ್ ಸೇನ್ ನಟನೆಯ 'ಮೆಕಾನಿಕ್ ರಾಕಿ' ಸಿನಿಮಾದಲ್ಲಿ ಪ್ರಮುಖ ಪಾತ್ರದಲ್ಲಿ ಶ್ರದ್ಧಾ ಕಾಣಿಸಿಕೊಳ್ತಿದ್ದಾರೆ.ನಟನೆಗೆ ಸ್ಕೋಪ್ ಇರುವ ವಿಭಿನ್ನ ಪಾತ್ರ ಇದಾಗಿದೆ. ಇನ್ನೂ ಈ ಸಿನಿಮಾದಲ್ಲಿ ವಿಶ್ವಕ್ ಸೇನ್ ಜೊತೆ ಶ್ರದ್ಧಾ ಶ್ರೀನಾಥ್, ಮೀನಾಕ್ಷಿ ಚೌಧರಿ, ಸೇರಿದಂತೆ ಅನೇಕರು ಕಾಣಿಸಿಕೊಂಡಿದ್ದಾರೆ.ಇದೇ ಅಕ್ಟೋಬರ್ 31ರಂದು 'ಮೆಕಾನಿಕ್ ರಾಕಿ' ಚಿತ್ರ ರಿಲೀಸ್ ಆಗಲಿದೆ. ಅಂದಹಾಗೆ, ಕನ್ನಡದ ಆಪರೇಷನ್ ಅಲಮೇಲಮ್ಮ, ಯೂ ಟರ್ನ್, ರುಸ್ತುಂ, ಡಿಯರ್ ವಿಕ್ರಮ್ ಸೇರಿದಂತೆ ಹಲವು ಚಿತ್ರಗಳಲ್ಲಿ ಶ್ರದ್ಧಾ ಶ್ರೀನಾಥ್ ನಟಿಸಿ ಸೈ ಎನಿಸಿಕೊಂಡಿದ್ದಾರೆ.

## ಯಶ್ ಹೊಸ ಹೇರ್ ಸ್ಟೈಲ್ ಯಾವ ಚಿತ್ರಕ್ಕಾಗಿ?

# ಕೊನೆಗೂ ಹೊರಬಿತ್ತು ಸೀಕ್ರೆಟ್





ನ್ಯಾಷನಲ್ ಸ್ಟಾರ್ ಯಶ್ ಇತ್ತೀಚೆಗೆ ಅಂಬಾನಿ ಮಗನ ಮದುವೆಯಲ್ಲಿ ಹೊಸ ಲುಕ್‌ನಲ್ಲಿ ಕಾಣಿಸಿಕೊಂಡಿದ್ದರು.ಇದಾದ ಬಳಿಕ ಯಾವ ಚಿತ್ರಕ್ಕಾಗಿ ಯಶ್ ಲುಕ್ ಬದಲಾಯಿಸಿಕೊಂಡಿದ್ದಾರೆ ಎಂದು ಸೋಷಿಯಲ್ ಮೀಡಿಯಾದಲ್ಲಿ ಭಾರೀ ಚರ್ಚೆ ಶುರುವಾಗಿತ್ತು.ಇದೀಗ ಈ ಲುಕ್ 'ಟಾಕ್ಸಿಕ್' ಚಿತ್ರಕ್ಕಾಗಿ ಎಂಬುದು ಖಚಿತವಾಗಿದೆ. ಸೆಲೆಬ್ರಿಟಿ ಹೇರ್ ಸ್ಟೈಲೀಸ್ಟ್ ಅಲೆಕ್ಸ್ ವಿಜಯಕಾಂತ್ ಅವರು ರಾಕಿ ಬಾಯ್ ಲುಕ್ ಬಗ್ಗೆ ಪ್ರತಿಕ್ರಿಯಿಸಿ, ಯಶ್ ಅವರ ಹೊಸ ಲುಕ್ ಆನ್‌ಲೈನ್‌ನಲ್ಲಿ ವೈರಲ್ ಆಗಿದೆ.ಈ ಬಗ್ಗೆ ಫ್ಯಾನ್ ಚರ್ಚೆ ಮಾಡಿದರು.ಈ ಲುಕ್ 'ಟಾಕ್ಸಿಕ್' ಮಾಡಿರೋದು.ನಾನು ಕೂಡ ಕಥೆ ಕೇಳಿದಾಗ ಈ ಹೇರ್ ಸ್ಟೈಲ್ ಯಶ್ ಪಾತ್ರಕ್ಕೆ ಸೂಕ್ತವಾಗಿದೆ ಎಂದು ನನಗೆ ತಿಳಿದಿತ್ತು.ಯಶ್ ಪಾತ್ರಕ್ಕೆ ಸಂಪೂರ್ಣವಾಗಿ ಹೊಂದಿಕೊಳ್ಳುವ 'ಪಾಂಪಡೋರ್' ಶೈಲಿಯಲ್ಲಿ ಸ್ಟೈಲ್ ಮಾಡಿದ್ದೇವೆ ಎಂದಿದ್ದಾರೆ. ಯಶ್ ಹೇರ್ ಸ್ಟೈಲ್ ಯಾವುದು ಅಂದರೆ 'ಪಾಂಪಡೋರ್' ಎಂದು ಕರೆಯಲಾಗುತ್ತದೆ ಎಂದಿದ್ದಾರೆ.ಈ ಸಿನಿಮಾದಲ್ಲಿ ನಿರ್ವಹಿಸುತ್ತಿರುವ ಪಾತ್ರಕ್ಕೆ ಸಖತ್ ಟ್ವಿಸ್ಟ್ ಕೂಡ ಇದೆ ಎಂದು ಅಲೆಕ್ಸ್ ಮಾತನಾಡಿದ್ದಾರೆ. ಇನ್ನೂ ಯಶ್ ನಟನೆಯ 'ಟಾಕ್ಸಿಕ್' ಸಿನಿಮಾಗೆ ಮಲಯಾಳಂ ನಿರ್ದೇಶಕಿ ಗೀತು ಮೋಹನ್‌ದಾಸ್ ನಿರ್ದೇಶನ ಮಾಡುತ್ತಿದ್ದಾರೆ.ಡ್ರಗ್ಸ್ ಮಾಫಿಯಾ ಕುರಿತು ಇರುವ ಚಿತ್ರ ಇದಾಗಿದ್ದು, 2025ರಲ್ಲಿ ಟಾಕ್ಸಿಕ್ ರಿಲೀಸ್ ಆಗಲಿದೆ.

## ನೇಪಾಳ ವಿರುದ್ಧ 82 ರನ್‌ಗಳ ಭರ್ಜರಿ ಗೆಲುವು

# ಸೆಮಿಸ್‌ಗೆ ಲಗ್ಗೆಯಿಟ್ಟ ಭಾರತ




ಶಫಾಲಿ ವರ್ಮಾ ಸ್ಫೋಟಕ ಬ್ಯಾಟಿಂಗ್, ಸಂಘಟಿತ ಬೌಲಿಂಗ್ ಪ್ರದರ್ಶನದಿಂದ ಭಾರತ ಮಹಿಳಾ ಕ್ರಿಕೆಟ್‌ತಂಡವು ನೇಪಾಳ ತಂಡದ ವಿರುದ್ಧ 82 ರನ್‌ಗಳ ಭರ್ಜರಿ ಗೆಲುವು ಸಾಧಿಸಿದೆ.ಈ ಮೂಲಕ 2024ರ ಮಹಿಳಾ ಟಿ20 ಏಷ್ಯಾಕಪ್ ಟೂರ್ನಿಯ ಸೆಮಿಫೈನಲ್ ಪ್ರವೇಶಿಸಿದೆ.ಹಾಲಿ ಚಾಂಪಿಯನ್ಸ್ ಸಹ ಆಗಿರುವ ಭಾರತ 2024ರಲ್ಲಿ ಮಹಿಳಾ ಏಷ್ಯಾಕಪ್‌ಟೂರ್ನಿಯ ಸೆಮಿಸ್ ಗೆಎಂಟ್ರಿಕೊಟ್ಟ ಮೊದಲ ತಂಡವೂಆಗಿದೆ.

ಇಲ್ಲಿನರಣಗಿರಿದಂಬುಲ್ಲಾಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿಟಾಸ್‌ಗೆದ್ದು ಮೊದಲು ಬ್ಯಾಟಿಂಗ್ ಮಾಡಿದಟೀಂಇಂಡಿಯಾ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 178 ರನ್ ಬಾರಿಸಿತ್ತು.179 ರನ್‌ಗಳ ಗುರಿ ಬೆನ್ನಟ್ಟಿದ ನೇಪಾಳ ತಂಡ ನಿಗದಿತ ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ ಕೇವಲ 96 ರನ್‌ಗಳಿಸಿ ಹೀನಾಯ ಸೋಲು ಕಂಡಿತು.

ಸ್ಮೃತಿ ಮಂಧಾನ ನಾಯಕತ್ವದಲ್ಲಿ ಕಣಕ್ಕಿಳಿದ ಟೀಂಇಂಡಿಯಾ ಪರ ಶಫಾಲಿ ವರ್ಮಾ ಎದುರಾಳಿ ಬೌಲರ್‌ಗಳನ್ನು ಹಿಗ್ಗಾಮುಗ್ಗಾ ದಂಡಿಸಿದರು.48 ಎಸೆತಗಳಲ್ಲಿ ಸ್ಫೋಟಕ 81 ರನ್ (12 ಬೌಂಡರಿ, 1 ಸಿಕ್ಸರ್) ಚಚ್ಚಿದರು. ಇದರೊಂದಿಗೆ ದಯಾಳನ್ ಹೇಮಲತಾ 47 ರನ್ (42 ಎಸೆತ, 5 ಬೌಂಡರಿ, 1 ಸಿಕ್ಸರ್), ಸಜೀವನ್ ಸಜನ 10 ರನ್, ಜೆಮಿಮಾರೊಡ್ರಿಗ್ಸ್ 28 ರನ್ ಹಾಗೂ ರಿಚಾಘೋಷ್ 6 ರನ್ ಗಳಿಸಿ ಮಿಂಚಿದರು. ಸ್ಪರ್ಧಾತ್ಮಕಗುರಿ ಬೆನ್ನಟ್ಟಿದ ನೇಪಾಳ ಟೀಂಇಂಡಿಯಾ ಬೌಲರ್‌ಗಳ ದಾಳಿಗೆ ತತ್ತರಿಸಿ, ಆರಂಭದಿಂದಲೇ ವಿಕೆಟ್ ಕಳೆದುಕೊಂಡಿತು.ನೇಪಾಳ ಪರ ನಾಯಕಿಇಂದು ಬರ್ಮಾ 14 ರನ್, ಸೀತಾ ರಾಣಾ ಮಗರ್ 18 ರನ್, ರುಬಿನಾ 15 ರನ್ ಹಾಗೂ ಬಿಂದು 17 ರನ್ ಗಳಿಸಿದ್ದು ಬಿಟ್ಟರೆ, ಉಳಿದ ಆಟಗಾರ್ತಿಯರುಅಲ್ಪಮೊತ್ತಕ್ಕೆ ಪೆವಿಲಿಯನ್ ನತ್ತ ಮುಖ ಮಾಡಿದರು.ಇದರಿಂದ ಗೆಲುವು ಸುಲಭವಾಗಿ ಭಾರತದ ವನಿತೆಯರ ಪಾಲಾಯಿತು. ಟೀಂಇಂಡಿಯಾ ಪರ ದೀಪ್ತಿ ಶರ್ಮಾ 3 ವಿಕೆಟ್ ಕಿತ್ತರೆ, ಅರುಂಧತಿರೆಡ್ಡಿ, ರಾಧಾಯಾದವ್‌ತಲಾ 2 ವಿಕೆಟ್ ಹಾಗೂ ರೇಣಿಕಾ ಸಿಂಗ್ 1 ವಿಕೆಟ್ ಪಡೆದು ಮಿಂಚಿದರು.

# ರಾಜಸ್ಥಾನ್ ರಾಯಲ್ಸ್ ಕೋಚ್ ಆಗ್ತಾರಾ ರಾಹುಲ್ ದ್ರಾವಿಡ್!

**ನವದೆಹಲಿ:** ಟೀಂಇಂಡಿಯಾಕೋಚ್ ಸ್ಥಾನ ತೊರೆದಿರುವರಾಹುಲ್‌ದ್ರಾವಿಡ್‌ರಾಜಸ್ಥಾನರಾಯಲ್ ಐಪಿಎಲ್‌ಟೀಂ ಹೆಡ್‌ಕೋಚ್ ಆಗಿ ಆಯ್ಕೆಯಾಗಲಿದ ್ದರೆಎಂದುಆಂಗ್ಲದೈನಿಕಟೈಮ್ಸ್‌ಆಫ್‌ಇಂಡಿಯಾ ವರದಿ ಮಾಡಿದೆ.



ರಾಜಸ್ಥಾನರಾಯಲ್ಸ್‌ತಂಡದ ಮುಖ್ಯಸ್ಥರು ಹಾಗೂ ರಾಹುಲ್‌ದ್ರಾವಿಡ್‌ಜೊತೆ ಮಾತುಕತೆ ನಡೆಯುತ್ತಿದೆ.ಶೀಘ್ರದಲ್ಲೇ ಈ ಬಗ್ಗೆ ಅಧಿಕೃತ ಹೇಳಿಕೆ ಘೋಷಣೆಯಾಗುವ ಸಾಧ್ಯತೆಯಿದೆ. 51 ವರ್ಷದ ರಾಹುಲ್ ದ್ರಾವಿಡ್‌ಕೆಕೆಆರ್ ತಂಡದಲ್ಲಿ ಗೌತಂಗಂಭೀರ್ ಸ್ಥಾನಕ್ಕೆ ಆಯ್ಕೆಯಾಗಬಹುದು ಎಂಬ ಸುದ್ದಿ ಹರಿದಾಡುತ್ತಿತ್ತು. ಆದರೆ ದ್ರಾವಿಡ್ ಅವರು ರಾಜಸ್ಥಾನ್ ರಾಯಲ್ಸ್ ತಂಡವನ್ನು ಸೇರ್ಪಡೆಯಾಗುವ ಸಾಧ್ಯತೆಯೇಅಧಿಕಎನ್ನಲಾಗಿದೆ. 2013, 2014 ಮತ್ತು 2015ರಲ್ಲೂ ದ್ರಾವಿಡ್‌ಅವರುರಾಜಸ್ಥಾನತಂಡದ ಭಾಗವಾಗಿದ್ದರು.

2015ರ ಬಳಿಕ ಬಿಸಿಸಿಐ ಜೊತೆ ಕೈಜೋಡಿಸಿದ್ದ ದ್ರಾವಿಡ್‌ಅಂಡರ್ 19 ಹಾಗೂ ಇಂಡಿಯಾ ಎ ಟೀಂಕೋಚ್ ಆಗಿದ್ದರು. ಬಳಿಕ ನ್ಯಾಷನಲ್ ಕ್ರಿಕೆಟ್ ಅಕಾಡೆಮಿ ಮುಖ್ಯಸ್ಥರಾದರು. 2021ರ ಅಕ್ಟೋಬರ್ ತಿಂಗಳಿನಿಂದ ಅವರು ಟೀಂ ಇಂಡಿಯಾ ಹೆಡ್‌ಕೋಚ್ ಆಗಿದ್ದರು. ರಾಹುಲ್ ದ್ರಾವಿಡ್ ಕೋಚ್‌ಆದರೆ 2021ರಿಂದ ರಾಯಲ್ಸ್‌ತಂಡದ ನಿರ್ದೇಶಕರಾಗಿರುವಕುಮಾರ ಸಂಗಕ್ಕಾರ ತಂಡದ ಜೊತೆಯಲ್ಲೇ ಉಳಿಯುತ್ತಾರಾ ಇಲ್ಲವೋ ಎಂಬ ಪ್ರಶ್ನೆಗೆಇನ್ನಷ್ಟೇ ಉತ್ತರ ಸಿಗಬೇಕಿದೆ.

## ಗೋಬಿ, ಕಬಾಬ್, ಪಾನಿಪುರಿ ಬಳಿಕ ತರಕಾರಿ ಸರದಿ

# 300ಕ್ಕೂ ಹೆಚ್ಚು ಕಡೆ ಕ್ವಾಲಿಟಿ ಟೆಸ್ಟ್

**ಬೆಂಗಳೂರು:** ಗೋಬಿ, ಕಬಾಬ್, ಪಾನಿಪುರಿಯಲ್ಲಿ ಹಾನಿಕಾರಕ ಅಂಶಗಳ ಪತ್ತೆ ಬಳಿಕ ಈಗ ತರಕಾರಿ ಸರದಿ ಎದುರಾಗಿದೆ.ಬೆಂಗಳೂರಿನ 300ಕ್ಕೂ ಹೆಚ್ಚು ಪ್ರದೇಶಗಳಲ್ಲಿ ಆಹಾರ ಇಲಾಖೆ ವಿವಿಧ ತರಕಾರಿಗಳ ಕ್ವಾಲಿಟಿ ಟೆಸ್ಟ್ ಮಾಡುತ್ತಿದೆ.ತರಕಾರಿಗಳಲ್ಲಿನ ಹಾನಿಕಾರಕ ಅಂಶಗಳನ್ನು ಪತ್ತೆಹಚ್ಚಲು ಆಹಾರ ಸುರಕ್ಷತಾ ಇಲಾಖೆ ಮುಂದಾಗಿದೆ.

ಕೆಲ ತಿಂಗಳ ಹಿಂದೆ ಗೋಬಿ, ಕಬಾಬ್‌ಗೆ ಬಳಸುವ ಕಲರ್‌ಗಳಲ್ಲಿ ಕ್ಯಾನ್ಸರ್‌ಕಾರಕ ಅಂಶಗಳು ಇವೆ ಎಂದು ಆಹಾರ ಮತ್ತು ಸುರಕ್ಷತಾ ಇಲಾಖೆ ಕಲರ್ ಬಳಕೆಗೆ ನಿಷೇಧ ಹೇರಿ ಆದೇಶ ಹೊರಡಿಸಿತ್ತು.ಇತ್ತೀಚಿಗೆ ಪಾನಿಪುರಿಯಲ್ಲೂ ಹಾನಿಕಾರಕ ಅಂಶ ಇರೋದನ್ನು ಆಹಾರ ಇಲಾಖೆ ಅಧಿಕಾರಿಗಳು ಪತ್ತೆ ಮಾಡಿದ್ದರು. ಇದೀಗ ತರಕಾರಿಗಳ ಗುಣಮಟ್ಟ ಪರಿಶೀಲಿಸಲು ಆಹಾರ ಸುರಕ್ಷತಾ ಇಲಾಖೆ ಮುಂದಾಗಿದೆ.ತರಕಾರಿಗಳನ್ನು ಟೆಸ್ಟ್ ಮಾಡುವ ಉದ್ದೇಶದಿಂದ ಬೆಂಗಳೂರಿನ 300ಕ್ಕೂ ಹೆಚ್ಚು ಪ್ರದೇಶಗಳಿಂದ ತರಕಾರಿಗಳನ್ನು ಸಂಗ್ರಹ ಮಾಡಿದ್ದಾರೆ.



ಒಟ್ಟಾರೆ ಕೇಂದ್ರ ಸರ್ಕಾರದ ಸೂಚನೆ ಮೇರೆಗೆ ರಾಜ್ಯ ಆಹಾರ ಮತ್ತು ಸುರಕ್ಷತಾ ಇಲಾಖೆ ಕ್ವಾಲಿಟಿ ಚೆಕ್ ಮಾಡುತ್ತಿದ್ದು ಯಾವೆಲ್ಲಾ ಹಾನಿಕಾರಕ ಅಂಶ ಇವೆ ಎಂದು ಇನ್ನಷ್ಟೇ ಬೆಳಕಿಗೆ ಬರಬೇಕಿದೆ.ಒಂದು ವೇಳೆ ಹಾನಿಕಾರಕ ಅಂಶಗಳು ಪತ್ತೆಯಾದರೆ ಯಾವ ಕ್ರಮ ತೆಗೆದುಕೊಳ್ಳಲಿದ್ದಾರೆ ಎಂಬುದು ಸದ್ಯದ ಕುತೂಹಲವಾಗಿದೆ.

### ಹಾನಿಕಾರಕ ಅಂಶಗಳು

- » ತರಕಾರಿ ಗಿಡಗಳಿಗೆ ಔಷಧ ಸಿಂಪಡಣೆ
- » ಔಷಧಿ ಸಿಂಪಡಣೆ ಮಾಡುವುದರಿಂದ ಸುರಕ್ಷತೆ ಇಲ್ಲ
- » ಕಬ್ಬಿಣದ ಅಂಶಗಳು ಪತ್ತೆ
- » ಔಷಧಿ ಸಿಂಪಡಣೆ ಮಾಡಿರುವ ತರಕಾರಿ ತಿಂದರೆ ಆರೋಗ್ಯದ ಮೇಲೆ ಪರಿಣಾಮ
- » ಸುರಕ್ಷತೆ ಇಲ್ಲದೇ ಇರುವ ಆಹಾರ ಸ್ಲೋಪಾಯಿಸನ್‌ಗೆ ಸಮ

# ಹೈದರಾಬಾದ್ ಚುನಾವಣೆಗೆ ಮದ್ಯ ಹಂಚಲು ಗಿಫ್ಟ್ ಕೂಪನ್

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟಪಂಗಡಗಳ ಅಭಿವೃದ್ಧಿ ನಿಗಮದ ಅಕ್ರಮ ಹಣ ವರ್ಗಾವಣೆ ಆರೋಪದ ಅಡಿ ಜೈಲು ಸೇರಿರುವ ಮಾಜಿ ಸಚಿವ ನಾಗೇಂದ್ರ ಅವರು ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಮತದಾರರಿಗೆ ಮದ್ಯ ಹಂಚಲು ಗಿಫ್ಟ್ ಕೂಪನ್ ಹಂಚಿಕೆ ಮಾಡಿದ್ದರು ಎಂದು ಜಾರಿ ನಿರ್ದೇಶನಾಲಯ ಗಂಭೀರ ಆರೋಪ ಮಾಡಿದೆ. ನಾಗೇಂದ್ರ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸುವಾಗ ಇಡಿ ರಿಮ್ಯಾಂಡ್ ಕಾಪಿ ಸಲ್ಲಿಕೆ ಮಾಡಿತ್ತು.ವಾಲ್ಮೀಕಿ ನಿಗಮದ ಹಣವನ್ನು ಚುನಾವಣೆಗೆ ಅಕ್ರಮವಾಗಿ ಬಳಕೆ ಮಾಡಿರುವುದರ ಬಗ್ಗೆ ಈ ಹಿಂದೆ ಇಡಿ ಉಲ್ಲೇಖ ಮಾಡಿತ್ತು.ಈಗ ಇನ್ನೊಂದಿಷ್ಟು ಮಾಹಿತಿಯನ್ನು ಕಲೆಹಾಕಿ ನ್ಯಾಯಾಲಯಕ್ಕೆ ವಿವರಣೆ ನೀಡಿದೆ.



### ರಿಮ್ಯಾಂಡ್ ಕಾಪಿಯಲ್ಲಿ ಏನಿದೆ?

**ನಾಗೇಂದ್ರ, ಬಳಿ ಮೂರು ಮೊಬೈಲ್‌ಗಳು ಇದ್ದವು. ಹಗರಣ ಬೆಳಕಿಗೆ ಬಂದ ಬಳಿಕ ನಾಶ ಮಾಡಿದ್ದಾರೆ. ಇದರ ಬಗ್ಗೆ ತಪ್ಪೊಪ್ಪಿಗೆ ಹೇಳಿಕೆ ನೀಡಿದ್ದಾರೆ. ಹಣದ ರಾಶಿ ಸುರಿದಿರುವುದಕ್ಕೆ ಪೂರಕವಾದ ಡಿಜಿಟಲ್ ಸಾಕ್ಷ್ಯ ಮತ್ತು ಫೋಟೋ ಸಿಕ್ಕಿವೆ. ಆದರೆ ಇದನ್ನು ನಾಗೇಂದ್ರ, ಒಪ್ಪಿಕೊಂಡಿಲ್ಲ. ಹೈದರಾಬಾದ್‌ನಲ್ಲಿ ಲಿಕ್ಕರ್ ವ್ಯಾಪಾರಿಗಳ ಜೊತೆ ಡೀಲ್ ಮಾಡಿದ್ದಾರೆ. ಹಣವನ್ನು ವ್ಯಾಪಾರಿಗಳಿಂದ ಪಡೆದುಕೊಂಡಿದ್ದು ಇದರ ಬಗ್ಗೆ ತಪ್ಪೊಪ್ಪಿಗೆ ಹೇಳಿಕೆ ನೀಡಿದ್ದಾರೆ. ಹೈದರಾಬಾದ್ ಚುನಾವಣಾ ಸಂದರ್ಭದಲ್ಲಿ ಮತದಾರರಿಗೆ ಗಿಫ್ಟ್ ಕೂಪನ್ ನೀಡಲಾಗಿದೆ.1.40 ಕೋಟಿ ರೂ. ಮೌಲ್ಯದ ಕೂಪನ್ ನೀಡಿರೋದಕ್ಕೆ ಪೂರಕ ಸಾಕ್ಷ್ಯ ಸಿಕ್ಕಿದೆ.**

## ದೇವರಾಜ ಅರಸು ನಿಗಮದಲ್ಲಿ ಹಗರಣ?

# ಕಡತಕ್ಕೆ ಬೆಂಕಿ ಇಟ್ಟಿದ್ದ್ಯಾರು?



**ಹಾಸನ:** ರಾಜ್ಯದಲ್ಲಿ ವಾಲ್ಮೀಕಿ ನಿಗಮದಲ್ಲಿನ ಹಗರಣದ ಬಳಿಕ ಇದೀಗ ಮತ್ತೊಂದು ನಿಗಮದಲ್ಲಿ ಭಾರೀ ಅವವ್ಯಹಾರವಾಗಿದೆ ಎಂಬ ಆರೋಪ ಕೇಳಿ ಬಂದಿದೆ. ಹೌದು, ಹಾಸನದ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ಭಾರಿ ಅವ್ಯವಹಾರ ನಡೆದಿದೆಯಾ?.ರಾತ್ರೋ ರಾತ್ರಿ ಇಲಾಖೆ ಕಡತ ಸುಟ್ಟ ಬಗ್ಗೆ ಜಿಲ್ಲಾಧಿಕಾರಿಗೆ ದೂರು ನೀಡಲಾಗಿದೆ. ಹೌದು, ಗ್ರಾ.ಪಂ ಸದಸ್ಯ, ಜೆಡಿಎಸ್ ಮುಖಂಡ ಉಮೇಶ್ ಹಾಸನ ಜಿಲ್ಲಾಧಿಕಾರಿಗೆ ಈ ಬಗ್ಗೆ ದೂರು ನೀಡಿದ್ದಾರೆ.

ದೇವರಾಜ ಅರಸು ನಿಗಮದ್ದು ಎಂದು ಹೇಳಲಾದ ದಾಖಲೆಗಳನ್ನು ಸುಡುತ್ತಿರುವ ವಿಡಿಯೋ ಜತೆಗೆ ದೂರು ಉಮೇಶ್ ನೀಡಿದ್ದಾರೆ.ಸರ್ಕಾರದ ಅನುಮತಿ ಇಲ್ಲದೆ, ಖಾಸಗಿ ಜಾಗದಲ್ಲಿ ರಾತ್ರೋ ರಾತ್ರಿ ಕಡತ ನಾಶ ಮಾಡಲಾಗಿದೆ ಎಂದು ಉಮೇಶ್ ಆರೋಪಿಸಿದ್ದಾರೆ.

ದೇವರಾಜ ಅರಸು ನಿಗಮದ ಜಿಲ್ಲಾ ವ್ಯವಸ್ಥಾಪಕ ನಾಗೇಂದ್ರ ವಿರುದ್ಧ ಆರೋಪಿಸಲಾಗಿದೆ.ಕೆಲ ಮಧ್ಯವರ್ತಿಗಳ ಜೊತೆಸೇರಿ ದೇವರಾಜ ಅರಸು ನಿಗಮದ ಜಿಲ್ಲಾ ವ್ಯವಸ್ಥಾಪಕ ನಾಗೇಂದ್ರ ಅವರು ಸರ್ಕಾರಿ ಯೋಜನೆ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ.

ರಾಜ್ಯದಲ್ಲಿ ನಿಗಮಗಳ ಗೋಲ್ಮಾಲ್ ಸರಣಿಯಾಗಿ ಹೊರ ಬರುತ್ತಿರುವ ಹಿನ್ನೆಲೆಯಲ್ಲಿ ರಾತ್ರೋ ರಾತ್ರಿ ಕಡತ ನಾಶ ಮಾಡಲಾಗಿದೆ ಎಂದು ದೂರು ನೀಡಲಾಗಿದೆ. ಜುಲೈ 7 ರಿಂದ 10 ರ ಅವಧಿಯಲ್ಲಿ ಅರಸೀಕೆರೆ ತಾಲ್ಲೂಕಿನಲ್ಲಿ ಹಬ್ಬನಘಟ್ಟ ಗ್ರಾಮದ ಖಾಸಗಿ ಜಾಗದಲ್ಲಿ ಕಡತ ಸುಡಲಾಗಿದೆ ಎಂದು ಆರೋಪಿಸಲಾಗಿದೆ.

ಪ್ರಕರಣ ಸಂಬಂಧ ತನಿಖೆ ನಡೆಸಲು ಸೋಮವಾರ ಕುರುವಂಕ ಗ್ರಾಪಂ ಸದಸ್ಯ ಬೈರಗೊಂಡನಹಳ್ಳಿಯ ಉಮೇಶ್ ಅವರು ಡಿಸಿಗೆ ದೂರು ನೀಡಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com